ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 104 ಸಂಚಿಕೆ- 104 | PAGE-8 ಪುಟ-8 | ಶನಿವಾರ 31.05.2025 | RS.2/- ಬೆಲೆ 2/-

# ಜಿಲ್ಲಾಧಿಕಾರಿ, ಸಿಇಒಗಳು ಸಮನ್ವಯತೆಯಿಂದ ಕೆಲಸ ಮಾಡಿದರೆ ಜಿಲ್ಲೆ ಅಭಿವೃದ್ಧಿ ಹೊಂದಲು ಸಾಧ್ಯ : ಮುಖ್ಯಮಂತ್ರಿ ಸಿದ್ದರಾಮಯ್ಯ

ಮಲ್ಲಮ್ಮನುಡಿ ವಾರ್ತೆ ಬೆಂಗಳೂರು, ಮೇ 30:ಜಿಲ್ಲಾಧಿಕಾರಿ ಹಾಗೂ ಸಿಇಒಗಳು ತಮ್ಮ ಕಾರ್ಯಕ್ಷೇತ್ರದಲ್ಲಿ ಶೇ.100ರಷ್ಟು ಪ್ರಗತಿ ಸಾಧಿಸಬೇಕು. ಆದರೆ ಕೆಲವು ಜಿಲ್ಲೆಗಳಲ್ಲಿ ನಿರೀಕ್ಷಿತ ಗುರಿಯನ್ನು ಸಾಧಿಸಿರುವುದಿಲ್ಲ. ಜನರ ಸಮಸ್ಯೆಗಳಿಗೆ ಸರಿಯಾಗಿ ಸ್ಪಂದಿಸದ ಅಧಿಕಾರಿಗಳ ವಿರುದ್ಧ ನಿಷ್ಠುರವಾಗಿ ಕ್ರಮ ಕೈಗೊಳ್ಳಬೇಕು. ಪ್ರತಿ ಜಿಲ್ಲೆಯಲ್ಲಿ ಡಿಸಿ, ಎಸ್ಪಿ ಮತ್ತು ಸಿಇಒ ಹುದ್ದೆಗಳು ಪ್ರಮುಖವಾಗಿವೆ. ಅವರು ತಮ್ಮ ಅಹಂ ಬದಿಗೊತ್ತಿ ಸಮನ್ವಯದಿಂದ ಕಾರ್ಯನಿರ್ವಹಿಸಿದರೆ ಮಾತ್ರ ಜಿಲ್ಲೆ ಅಭಿವೃದ್ಧಿ ಹೊಂದಲು ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಿಲ್ಲಾಧಿಕಾರಿಗಳಿಗೆ ತಿಳಿಸಿದರು.

ರಾಜ್ಯದ ಪ್ರಗತಿಗೆ ಸಂಬಂಧಿಸಿದಂತೆ ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಮುಖ್ಯಮಂತ್ರಿಗಳು ಜಿಲ್ಲೆಗಳಲ್ಲಿ ಸಂವಿಧಾನದ ಆಶಯ ಮತ್ತು ಧ್ಯೇಯೋದ್ದೇಶಗಳಿಗೆ ಯಾರೂ ವಿರುದ್ಧವಾಗಿ ಕಾರ್ಯನಿರ್ವಹಿಸಬಾರದು. ಅಂತಹ ಶಕ್ತಿಗಳು ಬೆಳೆಯಲು ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು. ಇತ್ತೀಚಿನ ದಿನಗಳಲ್ಲಿ ಇಂತಹ ಶಕ್ತಿಗಳು ತಲೆಎತ್ತುತ್ತಿದ್ದು, ಅಂತಹ ಶಕ್ತಿಗಳನ್ನು ಮೊಳಕೆಯಲ್ಲೇ ಚಿವುಟಿ ಹಾಕಬೇಕು. ಅಂತಹ ವ್ಯಕ್ತಿಗಳೂ ಯಾರೇ ಆಗಿದ್ದರೂ, ಅವರನ್ನು ಮಟ್ಟ ಹಾಕುವುದು ಅಂತಹ ಶಕ್ತಿಗಳು ಬೆಳೆಯದಂತೆ ನೋಡಿಕೊಳ್ಳಬೇಕಾದುದು ಡಿಸಿ, ಸಿಇಒ, ಎಸ್ಪಿಗಳ ಜವಾಬ್ದಾರಿ ಎಂದು ತಿಳಿಸಿದರು.





ಕಾನೂನು ಸುವ್ಯವಸ್ಥೆ ಹದಗೆಟ್ಟರೆ ಅದಕ್ಕೆ ಡಿಸಿ, ಸಿಇಒ ಮತ್ತು ಎಸ್ಪಿಗಳೇ ನೇರ ಹೊಣೆ:

ಕಾನೂನುಸುವ್ಯವಸ್ಥೆ ಕಾಪಾಡಿಕೊಳ್ಳುವುದು ಅತ್ಯಂತ ಅವಶ್ಯಕ. ಕಾನೂನು ಸುವ್ಯವಸ್ಥೆ ಹದಗೆಟ್ಟರೆ ಜಿಲ್ಲೆಯ ಅಭಿವೃದ್ಧಿಯಾಗಲು ಸಾಧ್ಯವಿಲ್ಲ. ಕಾನೂನು ಸುವ್ಯವಸ್ಥೆಗಳು ಅಭಿವೃದ್ಧಿಗೂ ನೇರ ಸಂಬಂಧವಿದೆ. ಹದಗೆಟ್ಟರೆ ಅದಕ್ಕೆ ಡಿಸಿ, ಸಿಇಒ ಮತ್ತು ಎಸ್ಪಿಗಳೇ ನೇರ ಹೊಣೆ. ಚಾಚೂ ತಪ್ಪದೇ ನಿಮ್ಮ ಜವಾಬ್ದಾರಿಯನ್ನು ಜಿಲ್ಲೆಗಳಲ್ಲಿ ನಿರ್ವಹಿಸಬೇಕು. ಜಿಲ್ಲಾ ಮಟ್ಟದಲ್ಲಿ ಶಾಂತಿ ಕಾಪಾಡಲು ಎಲ್ಲಾ ಮುಂಜಾಗರೂಕತಾ ಕ್ರಮ ಕೈಗೊಳ್ಳಬೇಕು. ಘಟನೆ ನಡೆದ ಬಳಿಕ ಕ್ರಮ ಕೈಗೊಳ್ಳುವ ಬದಲು, ಮೊದಲೇ ಶಾಂತಿ ಸಮಿತಿ ಸಭೆಗಳನ್ನು ನಡೆಸಿ, ಶಾಂತಿ ಕಾಪಾಡಲು ಕ್ರಮ ಕೈಗೊಳ್ಳಬೇಕು. ಜನಪರವಾದ ಧೋರಣೆಯನ್ನು ಅನುಸರಿಸಬೇಕು. ನಾವು ಜನರಿಗಾಗಿ ಇರುವವರು, ಅವರ ತೆರಿಗೆಯಿಂದ ಸಂಬಳ ಪಡೆಯುವವರು ಎಂಬುವುದು ನೆನಪಿರಬೇಕು ಎಂದು ಮುಖ್ಯಮಂತ್ರಿಗಳು ತಿಳಿಸಿದರು. .

ಬಾಲ್ಯ ವಿವಾಹ ತಡೆಗಟ್ಟಿ:

ಬಾಲ್ಯವಿವಾಹದಂತಹ ಘಟನೆಗಳನ್ನು ತಡೆಯುವಲ್ಲಿ ನೀವು ವಿಫಲರಾದರೆ ನಿಮ್ಮ ದಕ್ಷತೆ ಪ್ರಶ್ನಾರ್ಹವಾಗುತ್ತದೆ. 2024-25ನೇ ಸಾಲಿನಲ್ಲಿ 700 ಬಾಲ್ಯ ವಿವಾಹ ಘಟನೆಗಳು ನಡೆದಿರುವುದು ನಿಮ್ಮ ವೈಫಲ್ಯವನ್ನು ತೋರಿಸುತ್ತದೆ. ಕೆಲವು ಪ್ರಕರಣಗಳಲ್ಲಿ ಎಫ್.ಐ.ಆರ್ ದಾಖಲೇ ಮಾಡಿಲ್ಲ. ಈ ಕಾಲದಲ್ಲೂ, ಬಾಲ್ಯ ವಿವಾಹದ ವಿರುದ್ಧ ಕಾನೂನು ಇದ್ದರೂ, ಇಷ್ಟು ಪ್ರಮಾಣದಲ್ಲಿ ಬಾಲ್ಯ ವಿವಾಹ ನಡೆಯುತ್ತಿರುವುದನ್ನು ಯಾವುದೇ ಕಾರಣಕ್ಕೂ ಒಪ್ಪಲು ಸಾಧ್ಯವಿಲ್ಲ. ಡಿಸಿ, ಎಸ್ಪಿ, ಸಿಇಒಗಳು ತಮ್ಮ ಕರ್ತವ್ಯ ಪಾಲನೆಯಲ್ಲಿ ವಿಫಲರಾಗಿರುವುದನ್ನು ಇದು ಸ್ಪಷ್ಟಪಡಿಸುತ್ತದೆ. ಬಾಲ್ಯ ವಿವಾಹ ಪ್ರಕರಣಗಳಲ್ಲಿ ಎಷ್ಟು ಮಂದಿಯ ಮೇಲೆ ಕ್ರಮ ಕೈಗೊಂಡಿದ್ದೀರಿ, ಅಂತಹ ಸ್ಥಳಕ್ಕೆ ಭೇಟಿ ನೀಡುವ ಕೆಲಸ ಮಾಡಿದ್ದೀರಾ? ಎಂದು ಆತ್ಮಾವಲೋಕನ ಮಾಡಿ. ಬಾಲ್ಯ ವಿವಾಹ ತಡೆಗಟ್ಟುವುದರೊಂದಿಗೆ ಜಾಗೃತಿ ಮೂಡಿಸುವ ಕಾರ್ಯವೂ ನಿರಂತರವಾಗಿ ನಡೆಯಬೇಕು ಎಂದು ತಿಳಿಸಿದರು.

ಕಚೇರಿಗಳಿಗೆ ಅನಿರೀಕ್ಷಿತ ಭೇಟಿ ನೀಡಿ:

ಜಿಲ್ಲಾಧಿಕಾರಿಗಳು, ಸಿಇಒಗಳು ತಮ್ಮ ಪ್ರವಾಸ ಕಾರ್ಯಕ್ರಮ ಮೊದಲೇ ಸಾರ್ವಜನಿಕರಿಗೆ ಲಭ್ಯವಾಗುವಂತೆ ಪ್ರಕಟಿಸಬೇಕು. ತಪಾಸಣಾ ವರದಿಗಳನ್ನು ದಾಖಲೆಗಳನ್ನು ಸರಿಯಾಗಿ ಇಟ್ಟುಕೊಳ್ಳಬೇಕು. ಜಿಲ್ಲೆಯಲ್ಲಿ ಶಾಲೆಗಳು, ಹಾಸ್ಟೆಲ್‌ಗಳು, ವಸತಿ ಶಾಲೆಗಳು, ಸರಿಯಾಗಿ ಕಾರ್ಯನಿರ್ವಹಿಸುವುದನ್ನು ಖಾತ್ರಿಪಡಿಸಲು ನಿರಂತರವಾಗಿ ಭೇಟಿ ನೀಡಬೇಕು. ಮುನ್ಸೂಚನೆ ಇಲ್ಲದೇ ಇಂತಹ ಭೇಟಿಯನ್ನು ಪ್ರತಿ ತಿಂಗಳು ಕಡ್ಡಾಯವಾಗಿ ನಡೆಸಬೇಕು. ನಿಮ್ಮ ಅಧೀನದಲ್ಲಿರುವ ಇಲಾಖೆಗಳು, ಅಧಿಕಾರಿಗಳು ಸರಿಯಾಗಿ ಕಾರ್ಯನಿರ್ವಹಿಸುವುದನ್ನು ಖಾತ್ರಿಪಡಿಸುವುದು ನಿಮ್ಮ ಜವಾಬ್ದಾರಿ. ನೀವು ದಕ್ಷತೆಯಿಂದ ಕಾರ್ಯನಿರ್ವಹಿಸದಿದ್ದರೆ ಅಧೀನ ಅಧಿಕಾರಿಗಳು ಕಾರ್ಯನಿರ್ವಹಿಸುವುದನ್ನು ಹೇಗೆ ನಿರೀಕ್ಷಿಸಬಹುದು? ಎಂದು ಹೇಳಿದರು.

ಜಿಲ್ಲೆಯಲ್ಲಿ ಜನಸಾಮಾನ್ಯರಿಗೆ ಆರೋಗ್ಯ, ಸಾರಿಗೆ ಸಂಚಾರದಂತಹ ಮೂಲಭೂತ ಸೌಕರ್ಯಗಳು ಲಭಿಸದಿದ್ದರೆ ಅದನ್ನು ಆಡಳಿತದ ವೈಫಲ್ಯವೆಂದೇ ಪರಿಗಣಿಸಬೇಕಾಗಿದೆ. ಹಾಡಿಗಳಲ್ಲಿ ಶಾಲೆ, ರಸ್ತೆ, ಆಸ್ಪತ್ರೆಯಂತಹ ಮೂಲಸೌಲಭ್ಯ ಒದಗಿಸಲು ಇಂದಿಗೂ

(2ನೇ ಪುಟ ನೋಡಿ)

# ಅತಿಥಿ ಉಪನ್ಯಾಸಕರಿಗೆ 5 ಲಕ್ಷ ಇಡುಗಂಟು ಸೌಲಭ್ಯ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮೇ.30: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ 60 ವರ್ಷ ಪೂರೈಸಿದ ಮತ್ತು ಮರಣ ಹೊಂದಿದ ಅತಿಥಿ ಉಪನ್ಯಾಸಕರಿಗೆ 5 ಲಕ್ಷ ಇಡುಗಂಟು ಸೌಲಭ್ಯ ನೀಡುವುದಾಗಿ ಸರ್ಕಾರ ಆದೇಶಿಸಿದೆ. ಇಡುಗಂಟು ಯೋಜನೆಯು 2024ರ ಜನವರಿ 1ರಿಂದಲೇ ಜಾರಿಗೆ ಬರಲಿದ್ದು, ಕನಿಷ್ಠ 1 ವರ್ಷ ಸೇವೆ ಸಲ್ಲಿಸಿ ನಿವೃತ್ತರಾಗಿರುವ ಅಥವಾ ಮರಣ ಹೊಂದಿರುವ ಎಲ್ಲಾ ಅತಿಥಿ ಉಪನ್ಯಾಸಕರಿಗೂ ಯೋಜನೆ ಅನ್ವಯವಾಗಲಿದೆ. ಯೋಜನೆ ಅನುಷ್ಠಾನಕ್ಕೆ ಬಂದ ಹಿಂದಿನ 5 ವರ್ಷಗಳಲ್ಲಿ ಕನಿಷ್ಠ 1 ವರ್ಷ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ, 60 ವರ್ಷ ಪೂರ್ಣಗೊಳಿಸಿರುವ ಅತಿಥಿ ಉಪನ್ಯಾಸಕರೂ ಈ ಯೋಜನೆಗೆ ಒಳಪಡಲಿದ್ದಾರೆ. ಈ ಯೋಜನೆಗೆ ಒಟ್ಟಾರೆ 44.15 ಕೋಟಿ ರೂ. ಹಣವನ್ನು ಸರ್ಕಾರ ಕಾಯ್ದಿರಿಸಿ ಆದೇಶ ಹೊರಡಿಸಿದೆ. ಇದೀಗ ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಅತಿಥಿ ಉಪನ್ಯಾಸಕರಿಗೆ ಇಡುಗಂಟು ಸೌಲಭ್ಯ ಅನುಷ್ಠಾನಕ್ಕೆ ಉನ್ನತ ಶಿಕ್ಷಣ ಇಲಾಖೆಯು ಮಾರ್ಗಸೂಚಿ ಪ್ರಕಟಿಸಿದೆ.

# ಉಗ್ರರು ಮತ್ತೆ ಹೆಡೆ ಬಿಚ್ಚಿದರೆ, ಹುತ್ತದಿಂದ ಎಳೆದು ತುಳಿಯುತ್ತೇವೆ: ಮೋದಿ

ಪಾಟ್ನಾ:ಮೇ.30: ಭಯೋತ್ಪಾದನೆ ವಿರುದ್ಧದ ಯುದ್ಧ ಇನ್ನೂ ನಿಂತಿಲ್ಲ ಎಂದು ಪಾಕಿಸ್ತಾನಕ್ಕೆ ಪ್ರಧಾನಿ ನರೇಂದ್ರ ಮೋದಿ ಎಚ್ಚರಿಕೆ ನೀಡಿದ್ದಾರೆ.

ಶತ್ರುಗಳು ಆಪರೇಷನ್ ಸಿಂಧೂರ ಶಕ್ತಿಯನ್ನು ನೋಡಿದ್ದಾರೆ. 'ಆಪರೇಷನ್ ಸಿಂಧೂರ' ಭಾರತದ ಬತ್ತಳಿಕೆಯಿಂದ ಬಿಟ್ಟ ಕೇವಲ ಒಂದು ಬಾಣ ಅಷ್ಟೇ. ಭಯೋತ್ಪಾದನೆ ವಿರುದ್ಧದ ಯುದ್ಧ ಇನ್ನೂ ಮುಗಿದಿಲ್ಲ ಎಂದು ಮೋದಿ ಸ್ಪಷ್ಟಪಡಿಸಿದ್ದಾರೆ. ಭಯೋತ್ಪಾದನೆ



ಮತ್ತೆ ತನ್ನ ಹೆಡೆಯನ್ನು ಎತ್ತಿದರೆ, ಹುತ್ತದಿಂದ ಎಳೆದು ತುಳಿಯುತ್ತೇವೆ ಎಂದು ಹಾವಿಗೆ ಹೋಲಿಸಿ ಪ್ರಧಾನಿ ಎಚ್ಚರಿಕೆ ಸಂದೇಶ ರವಾನಿಸಿದ್ದಾರೆ. ಕರಕಟ್‌ನಲ್ಲಿ ಸುಮಾರು 50,000 ಕೋಟಿ ಮೌಲ್ಯದ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿದ ನಂತರ ರ್‍ಯಾಲಿಯನ್ನು ಉದ್ದೇಶಿಸಿ ಮೋದಿ ಈ ಮಾತುಗಳನ್ನಾಡಿದ್ದಾರೆ.

ಪಹಲ್ಗಾಮ್‌ನಲ್ಲಿ ನಡೆದ ಭೀಕರ ದಾಳಿಯ ಒಂದು ದಿನದ ನಂತರ

(2ನೇ ಪುಟ ನೋಡಿ)

# ಕೇಂದ್ರ್ರದ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವರಪ್ರವಾಸ

ಮಲ್ಲಮ್ಮನುಡಿವಾರ್ತೆ ಕಲಬುರಗಿ,ಮೇ.30.- ಕೇಂದ್ರದ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವರಾದ ವಿ. ಸೋಮಣ್ಣ ಅವರು ಬೀದರದಿಂದ ವಿಶೇಷ ರೈಲಿನ ಮೂಲಕ ಜೂನ್ 1 ರಂದು ಭಾನುವಾರ ಬೆಳಿಗ್ಗೆ 11.30 ಗಂಟೆಗೆ ಕಲಬುರಗಿಗೆ ಆಗಮಿಸಿ, ನಂತರ ಕಲಬುರಗಿ ರೈಲ್ವೆ ನಿಲ್ದಾಣವನ್ನು ವೀಕ್ಷಣೆ ಮಾಡಿ, ಸಾರ್ವಜನಿಕರ ಕುಂದುಕೊರತೆಗಳನ್ನು ಪರಿಹರಿಸುವರು. ಮಧ್ಯಾಹ್ನ 2.30 ಗಂಟೆಗೆ ಕಲಬುರಗಿಯ ಸೂಪರ್ ಮಾರ್ಕೆಟ್ ದಲ್ಲಿರುವ ಚೇಂಬರ್ ಆಫ್‌ಕಾಮರ್ಸ್‌ನಲ್ಲಿ



ಹಮ್ಮಿಕೊಳ್ಳಲಾದ ಒಂದು ರಾಷ್ಟ್ರ ಒಂದು ಚುನಾವಣೆ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಅಂದು ಸಂಜೆ 4.30 ಗಂಟೆಗೆ ಕಲಬುರಗಿಯಿಂದ ವಿಶೇಷ ರೈಲಿನ ಮೂಲಕ ಸೋಲ್ಲಾಪುರಕ್ಕೆ ಪ್ರಯಾಣ ಬೆಳೆಸುವರು.

# ಮಂಗಳೂರಲ್ಲಿ ಮಳೆಗೆ 6 ಮಂದಿ ಬಲಿ





ಮಲ್ಲಮ್ಮ ನುಡಿ ವಾರ್ತೆ ಮಂಗಳೂರು:ಮೇ.30: ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ವರುಣಾರ್ಭಟ ಜೋರಾಗಿದೆ. ಭಾರೀ ಮಳೆ ಪರಿಣಾಮ ವಿವಿಧೆಡೆ ಆರು ಮಂದಿ ಬಲಿಯಾಗಿದ್ದಾರೆ.

ಮನೆ ಮೇಲೆ ಕುಸಿದ ಗುಡ್ಡ; ಮೂವರು ದುರ್ಮರಣ

ಮಂಗಳೂರು ಹೊರವಲಯದ ದೇರಳಕಟ್ಟೆಯ ಮೊಂಟೆಪದವು ಕೋಡಿಯಲ್ಲಿ ಗುಡ್ಡ ಕುಸಿತವಾಗಿ ಮನೆ ಧರಶಾಹಿಯಾಗಿ ಇಬ್ಬರು ಮಕ್ಕಳು ಸೇರಿ ಮೂವರು ಸಾವನ್ನಪ್ಪಿದರು. ದುರಂತದಲ್ಲಿ ಮೂವರು ಪವಾಡ ಸದೃಶವಾಗಿ ಪಾರಾಗಿದ್ದಾರೆ. ಕಾಂತಪ್ಪ ಪೂಜಾರಿ ಎಂಬವರ ಮನೆ ಸಂಪೂರ್ಣ ಕುಸಿತವಾಗಿದೆ. ನಸುಕಿನ 4:30ರ ಸುಮಾರಿಗೆ ಗುಡ್ಡ ಕುಸಿದಿದ್ದು, ಸೀತಾರಾಮ ಅವರು ಮನೆಯಿಂದ ಓಡಿ ಹೊರ ಬಂದಿದ್ದರು.

(2ನೇ ಪುಟ ನೋಡಿ)

# ಆಪರೇಷನ್ ಸಿಂಧೂರ:ನೌಕಾಪಡೆ ಬಳಕೆಯಾಗಿದ್ದರೇ ಪಾಕ್ ನಾಲ್ಕು ಹೋಳಾಗುತ್ತಿತ್ತು:ರಾಜನಾಥ ಸಿಂಗ್

ಮಲ್ಲಮ್ಮ ನುಡಿ ವಾರ್ತೆ ಪಣಜಿ:ಮೇ.30: "ಪಾಕಿಸ್ತಾನ ಬೆಂಬಲಿತ ಭಯೋತ್ಪಾದನೆಯನ್ನು ಎದುರಿಸಲು ಭಾರತ ಎಲ್ಲಾ ವಿಧಾನಗಳನ್ನು ಬಳಸುತ್ತದೆ. ಪಾಕ್ ಯಾವುದೇ ದುಷ್ಟ ಅಥವಾ ಅನೈತಿಕ ಕೃತ್ಯಗಳಲ್ಲಿ ತೊಡಗಿದರೆ, ಈ ಬಾರಿ ಅದು ಭಾರತೀಯ ನೌಕಾಪಡೆಯ ಸಂಪೂರ್ಣ ಗುಂಡಿನ ದಾಳಿಯನ್ನು ಎದುರಿಸಬೇಕಾಗುತ್ತದೆ" ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಶುಕ್ರವಾರ ಎಚ್ಚರಿಕೆ ನೀಡಿದ್ದಾರೆ.

ಇಂದು ಗೋವಾ ಕರಾವಳಿಯಲ್ಲಿ ಭಾರತದ ಮೊದಲ ಸ್ವದೇಶಿ




ವಿಮಾನವಾಹಕ ನೌಕೆ ಐಎನ್‌ಎಸ್ ವಿಕ್ರಾಂತ್‌ನಲ್ಲಿ ಅಧಿಕಾರಿಗಳು ಮತ್ತು ನಾವಿಕರನ್ನು ಉದ್ದೇಶಿಸಿ ಮಾತನಾಡಿದ ರಾಜನಾಥ್ ಸಿಂಗ್ ಅವರು, ಪಾಕಿಸ್ತಾನ ಪದೇ ಪದೇ ಮಾತುಕತೆಗೆ ಮುಂದಾಗುತ್ತಿರುವ ಕುರಿತು ಭಾರತದ ನಿಲುವನ್ನು ದೃಢವಾಗಿ ಪುನರುಚ್ಚರಿಸಿದರು. "ಮಾತುಕತೆ ನಡೆಸುವುದಾದರೆ ಅದು ಭಯೋತ್ಪಾದನೆ ಮತ್ತು ಪಾಕ್ ಆಕ್ರಮಿತ ಕಾಶ್ಮೀರ(ಪಿಒಕೆ) ಬಗ್ಗೆ ಮಾತ್ರ ಇರುತ್ತದೆ. ಪಾಕಿಸ್ತಾನ ಮಾತುಕತೆಯ ಬಗ್ಗೆ ಗಂಭೀರವಾಗಿದ್ದರೆ ಹಫೀಜ್ ಸಯೀದ್ ಮತ್ತು ಮಸೂದ್ ಅಜರ್‌ನಂತಹ ಭಯೋತ್ಪಾದಕರನ್ನು ಭಾರತಕ್ಕೆ ಹಸ್ತಾಂತರಿಸಬೇಕು" ಎಂದು ಹೇಳಿದರು.

ಈ ಇಬ್ಬರೂ ವ್ಯಕ್ತಿಗಳು ಭಾರತದ 'ಮೋಸ್ಟ್ ವಾಂಟೆಡ್ ಟೆರರಿಸ್ಟ್'

(2ನೇ ಪುಟ ನೋಡಿ)

# ಕೇರಳದಲ್ಲಿ ಭಾರೀ ಮಳೆಗೆ 5 ಸಾವು

ಮಲ್ಲಮ್ಮ ನುಡಿ ವಾರ್ತೆ

ತಿರುವನಂತಪುರಂ:ಮೇ.30: ಕೇರಳದಲ್ಲಿ ಶುಕ್ರವಾರ ಸುರಿದ ಭಾರಿ ಮಳೆಗೆ ಕನಿಷ್ಠ ಐದು ಜನರು ಸಾವನ್ನಪ್ಪಿದ್ದು, ರಾಜ್ಯಾದ್ಯಂತ ಹಲವು ತಗ್ಗು ಪ್ರದೇಶಗಳು ಜಲಾವೃತಗೊಂಡಿವೆ. ಭಾರೀ ಗಾಳಿ ಮತ್ತು ಉಬ್ಬರವಿಳಿತದಿಂದಾಗಿ ಮನೆಗಳಿಗೆ ವ್ಯಾಪಕ ಹಾನಿಯಾಗಿದೆ.

ಭಾರತೀಯ ಹವಾಮಾನ ಇಲಾಖೆ ಶುಕ್ರವಾರ ಎಂಟು ಜಿಲ್ಲೆಗಳಲ್ಲಿ ರೆಡ್ ಅಲರ್ಟ್ ಮತ್ತು ಉಳಿದ ಆರು ಜಿಲ್ಲೆಗಳಲ್ಲಿ ಆರೆಂಜ್ ಅಲರ್ಟ್ ಘೋಷಿಸಿತ್ತು. ಶನಿವಾರ ರಾಜ್ಯಾದ್ಯಂತ

(2ನೇ ಪುಟ ನೋಡಿ)

# 4ನೇ ತ್ರೈಮಾಸಿಕದಲ್ಲಿ ಭಾರತದ ಜಿಡಿಪಿ ಶೇ.7.4ಕ್ಕೆ ಏರಿಕೆ




ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮೇ.30: ಮಹತ್ವದ ಬೆಳವಣಿಗೆಯಲ್ಲಿ ಭಾರತದ ಜಿಡಿಪಿ (ಉಆಕ) ನಾಲ್ಕು ತ್ರೈಮಾಸಿಕಗಳ ಗರಿಷ್ಠ ಮಟ್ಟಕ್ಕೆ ತಲುಪಿದ್ದು, ಪಾಕಿಸ್ತಾನದೊಂದಿಗಿನ ಸಣ್ಣ ಸೇನಾ ಸಂಘರ್ಷದ ಹೊರತಾಗಿಯೂ ಭಾರತದ ಜಿಡಿಪಿ ಶೇ.7.4ಕ್ಕೆ ಏರಿಕೆಯಾಗಿದೆ.

ಭಾರತದ ಜಿಡಿಪಿ ಭರ್ಜರಿ ಏರಿಕೆ ಕಂಡಿದ್ದು, 2025ನೇ ಆರ್ಥಿಕ ವರ್ಷದ ನಾಲ್ಕನೇ ತ್ರೈಮಾಸಿಕದಲ್ಲಿ ಜಿಡಿಪಿ ಶೇ. 7.4ರಷ್ಟು ಏರಿಕೆಯಾಗಿದೆ ಎಂದು ಶುಕ್ರವಾರ ಬಿಡುಗಡೆಯಾದ ಸರ್ಕಾರದ ಅಂಕಿ-ಅಂಶಗಳು ತಿಳಿಸಿವೆ. 2025ನೇ ಆರ್ಥಿಕ ವರ್ಷದ ನಾಲ್ಕನೇ ತ್ರೈಮಾಸಿಕದಲ್ಲಿ ಭಾರತದ ಜಿಡಿಪಿ ಶೇ. 7.4ರಷ್ಟು ಏರಿಕೆ ಕಂಡಿದ್ದು, ಇದು ಕಳೆದ ನಾಲ್ಕು ತ್ರೈಮಾಸಿಕಗಳಲ್ಲೇ ಗರಿಷ್ಠವಾಗಿದೆ.

ಸಂಪೂರ್ಣ ವರ್ಷದ ಜಿಡಿಪಿ ಬೆಳವಣಿಗೆ ಶೇ. 6.5ರಷ್ಟು ಇರಲಿದೆ ಎಂದು ಅಂದಾಜಿಸಲಾಗಿದೆ. ಜಾಗತಿಕ ಆರ್ಥಿಕ ಪರಿಸ್ಥಿತಿ ಅನಿಶ್ಚಿತವಾಗಿದ್ದರೂ, ಭಾರತ ಹೂಡಿಕೆಗೆ ಭರವಸೆಯ ತಾಣವಾಗಿ ಮುಂದುವರಿದಿದೆ


(2ನೇ ಪುಟ ನೋಡಿ)

# ಕನ್ನಡದ ಖ್ಯಾತ ಕವಿ ಹೆಚ್.ಎಸ್ ವೆಂಕಟೇಶಮೂರ್ತಿ ಇನ್ನಿಲ್ಲ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.30: ಕನ್ನಡ ಖ್ಯಾತ ಕವಿ, ಸಾಹಿತಿ, ನಾಟಕ ರಚನೆಕಾರರು ಹಾಗೂ ಹೆಚ್‌ಎಸ್‌ವಿ ಎಂದೇ ಚಿರಪರಿಚಿತರಾಗಿರುವ ಹೆಚ್. ಎಸ್ ವೆಂಕಟೇಶಮೂರ್ತಿ ಇಂದು ವಿಧಿವಶರಾಗಿದ್ದಾರೆ.

ಮೂಲತಃ ದಾವಣಗೆರೆ ಜಿಲ್ಲೆ ಚನ್ನಗಿರಿ ತಾಲ್ಲೂಕಿನ ಹೊದಿಗೆರೆ ಎಂಬ ಸಣ್ಣ ಗ್ರಾಮದ ಮಧ್ಯಮವರ್ಗದ ಕುಟುಂಬವೊಂದರಲ್ಲಿ 23-06-1944ರಲ್ಲಿ ಜನಿಸಿದರು. ಮೂವತ್ತು ವರ್ಷಗಳ ಕಾಲ ಗ್ರಾಮ್ಯಜೀವನ ನಡೆಸಿ ನಂತರ ಬೆಂಗಳೂರು ವಿಶ್ವವಿದ್ಯಾಲಯದಿಂದ ಕನ್ನಡದಲ್ಲಿ ಎಮ್.ಎ ಪದವಿ ಪಡೆದರು. ನಂತರ ಸೇಂಟ್ ಜೋಸೆಫ್ ವಾಣಿಜ್ಯ ಕಾಲೇಜಿನಲ್ಲಿ ಕನ್ನಡ ಅಧ್ಯಾಪಕರಾಗಿ 1973ರಲ್ಲಿ



ನೇಮಕಗೊಂಡರು. ಕನ್ನಡದಲ್ಲಿ 'ಕಥನ ಕವನಗಳು' ಎಂಬ ಮಹಾಪ್ರಬಂಧಕ್ಕೆ ಪಿಎಚ್.ಡಿ ಪದವಿ ಪಡೆದಿದ್ದಾರೆ. 2000ರಲ್ಲಿ ನಿವೃತ್ತರಾದ ಅವರು ಈಗ ಬೆಂಗಳೂರಿನಲ್ಲಿ ನೆಲೆಸಿದ್ದರು.

ಕನ್ನಡದಲ್ಲಿ 100ಕ್ಕೂ ಹೆಚ್ಚು

(2ನೇ ಪುಟ ನೋಡಿ)

ಒಂದನೇ ಪುಟದಿಂದ

# ಜಿಲ್ಲೆ ಅಭಿವೃದ್ಧಿ ಹೊಂದಲು ಸಾಧ್ಯ : ಮುಖ್ಯಮಂತ್ರಿ ಸಿದ್ದರಾಮಯ್ಯ

ಸರಿಯಾಗಿ ಯಾಕೆ ಸಾಧ್ಯವಾಗಿಲ್ಲ; ಅವರಿಗೆ ಅರಣ್ಯ ಹಕ್ಕು ಕಾಯ್ದೆಯಡಿ ಸರಿಯಾಗಿ ಹಕ್ಕು ಒದಗಿಸಲು ಯಾಕೆ ಸಾಧ್ಯವಾಗಿಲ್ಲ. ಜಿಲ್ಲಾಧಿಕಾರಿಗಳು, ಸಿಇಒಗಳು ಇಂತಹ ಹಾಡಿಗಳಿಗೆ ನಿರಂತರ ಭೇಟಿ ನೀಡಬೇಕು ಎಂದು ಸೂಚಿಸಿದರು.

ಕೆಲವು ಜಿಲ್ಲಾಧಿಕಾರಿಗಳು, ಸಿಇಒಗಳು ಸರಿಯಾಗಿ ಕಚೇರಿಯಲ್ಲಿ ಸಾರ್ವಜನಿಕರಿಗೆ ಲಭ್ಯವಾಗದಿರುವ ಬಗ್ಗೆ ದೂರುಗಳು ಬಂದಿವೆ. ಸಾರ್ವಜನಿಕ ಭೇಟಿಯ ಅವಧಿಯನ್ನು ಮೊದಲೇ ಪ್ರಕಟಿಸಬೇಕು. ಶೋಷಿತರು, ಬಡವರು, ಜನಸಾಮಾನ್ಯರು ಸಾಮಾನ್ಯವಾಗಿ ಜಿಲ್ಲಾಧಿಕಾರಿ ಅವರ ಕಚೇರಿಗೆ ಬರುತ್ತಾರೆ. ಅಂತವರ ಸಂಕಷ್ಟಗಳನ್ನು ನೀವೇ ಆಲಿಸದಿದ್ದರೆ ಅದನ್ನು ಬಗೆಹರಿಸುವವರು ಯಾರು? ಯಾರ ಬಳಿ ಅವರು ತಮ್ಮ ಕಷ್ಟಗಳನ್ನು ಹೇಳಿಕೊಳ್ಳಬೇಕು? ಎಂದು ಪ್ರಶ್ನಿಸಿದರು.

ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಅಧಿಕಾರಿಗಳು ಕಡ್ಡಾಯವಾಗಿ ವಾಸವಿರಬೇಕು:

ತಾಲೂಕು ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಎಲ್ಲಾ ಅಧಿಕಾರಿಗಳು ಕಡ್ಡಾಯವಾಗಿ ವಾಸವಿರಬೇಕು. ಎಲ್ಲಾ ಅಧಿಕಾರಿಗಳು ಕೇಂದ್ರಸ್ಥಾನದಲ್ಲಿ ಲಭ್ಯವಿದ್ದು, ಜನರಿಗೆ ಲಭ್ಯವಿರಬೇಕು. ಇದನ್ನು ಜಿಲ್ಲಾಧಿಕಾರಿಗಳು ಖಾತ್ರಿಪಡಿಸಬೇಕು. ಕೇಂದ್ರ ಸ್ಥಾನದಲ್ಲಿರದ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮದ ಬಗ್ಗೆ ನನಗೆ ವರದಿ ನೀಡಬೇಕು.

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ತಿಂಗಳಲ್ಲಿ ಕನಿಷ್ಟ ಎರಡು ಬಾರಿ ಆಯಾ ಜಿಲ್ಲೆಗಳಿಗೆ ಭೇಟಿ ನೀಡಿ ಅಭಿವೃದ್ಧಿ ಕಾರ್ಯಗಳ ಪರಿಶೀಲನೆ ನಡೆಸಬೇಕು. ಅದರೊಂದಿಗೆ ಶಾಲೆ, ಹಾಸ್ಟೆಲ್, ಆಸ್ಪತ್ರೆಗಳಿಗೆ ಅನಿರೀಕ್ಷಿತ ಭೇಟಿ ನೀಡಿ ವರದಿಯನ್ನು ಮುಖ್ಯ ಕಾರ್ಯದರ್ಶಿಯವರಿಗೆ ಸಲ್ಲಿಸಬೇಕು.

ಸಾವಯವ ಕೃಷಿಯ ಬಗ್ಗೆ ರೈತರಲ್ಲಿ ಜಾಗೃತಿ ಮೂಡಿಸಿ:

ರಾಜ್ಯದಲ್ಲಿ ರಸಗೊಬ್ಬರ ಬಳಕೆ ಹೆಚ್ಚಳದಿಂದ ಮಣ್ಣಿನ ಸವಕಳಿ ಹೆಚ್ಚಾಗುತ್ತಿರುವುದು ಉತ್ತಮ ಬೆಳವಣಿಗೆಯಲ್ಲ. ಸಾವಯವ ಕೃಷಿಯ ಬಗ್ಗೆ ರೈತರಲ್ಲಿ ಜಾಗೃತಿ ಮೂಡಿಸುವ ಕೆಲಸ ಆಗಬೇಕಿದೆ. ಡಿಎಪಿಯಂತಹ ರಸಗೊಬ್ಬರಗಳಿಗೆ ಪರ್ಯಾಯ ಗೊಬ್ಬರಗಳ ಬಳಕೆ ಬಗ್ಗೆ ರೈತರಿಗೆ ಮನವರಿಕೆ ಮಾಡಬೇಕು.

ರೈತರ ಆತ್ಮಹತ್ಯೆ ಪ್ರಕರಣಗಳು ಯಾಕೆ ಹೆಚ್ಚಾಗುತ್ತಿದೆ. 983 ರೈತರ ಆತ್ಮಹತ್ಯೆ ಪ್ರಕರಣಗಳು ಕಳೆದ ಸಾಲಿನಲ್ಲಿ ದಾಖಲಾಗಿದೆ. ರೈತರು ಆತ್ಮಹತ್ಯೆ ಮಾಡಿಕೊಳ್ಳದಂತೆ ಎಲ್ಲಾ ರೀತಿಯ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.

ಕೆರೆಗಳ ಒತ್ತುವರಿ ತೆರವುಗೊಳಿಸಿ:

ರಾಜ್ಯದಲ್ಲಿ 10931 ಕೆರೆಗಳು ಒತ್ತುವರಿಯಾಗಿವೆ. ಇದುವರೆಗೆ 6065 ಕೆರೆಗಳ ಒತ್ತುವರಿ ತೆರವು ಮಾಡಲಾಗಿದೆ. ಎಲ್ಲಾ ಕೆರೆಗಳ ಸಮೀಕ್ಷೆ ನಡೆಸಿ ಒತ್ತುವರಿ ತೆರವುಗೊಳಿಸಲು ಕಳೆದ ಸಭೆಯಲ್ಲಿ ತಿಳಿಸಿದ್ದರೂ ನಿರೀಕ್ಷಿತ ಪ್ರಗತಿಯಾಗಿಲ್ಲ. ಕೂಡಲೇ ಇದರ ಬಗ್ಗೆ ಗಮನಹರಿಸಿ, ಎಲ್ಲಾ ಕೆರೆಗಳ ಸಮೀಕ್ಷೆ ನಡೆಸಿ, ಒತ್ತುವರಿ ತೆರವುಗೊಳಿಸಿ, ಮಳೆ ನೀರು ಸರಾಗವಾಗಿ ಕೆರೆಗೆ ಹರಿದು ಬರುವಂತೆ ವ್ಯವಸ್ಥೆ ಮಾಡಬೇಕು. ಕೆರೆಗಳ ಒತ್ತುವರಿ ವಿಷಯದಲ್ಲಿ ಸರಿಯಾಗಿ ಕಾರ್ಯನಿರ್ವಹಿಸದ ಜಿಲ್ಲಾಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಮುಖ್ಯ ಕಾರ್ಯದರ್ಶಿಗಳಿಗೆ ಸೂಚನೆ ನೀಡಿದರು.

ರಾಜ್ಯದಲ್ಲಿ ಈ ವರ್ಷ 1395 ಪೊ?ಕ್ಸೋ ಪ್ರಕರಣಗಳು ದಾಖಲಾಗಿವೆ. ಪೊ?ಕ್ಸೋ ಪ್ರಕರಣಗಳಲ್ಲಿ ಕಟ್ಟುನಿಟ್ಟಿನ ಕಾನೂನು ಕ್ರಮ ಜರುಗುವಂತೆ ನೋಡಿಕೊಳ್ಳಬೇಕು. ತಪ್ಪಿತಸ್ಥರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಸರಿಯಾದ ಶಿಕ್ಷೆಯಾಗುವಂತೆ ನೋಡಿಕೊಳ್ಳಬೇಕು.

ಸಿಂಧುತ್ವ ಪ್ರಮಾಣ ಪತ್ರವನ್ನು ನಿಗದಿತವಾಗಿ ಒಂದು ತಿಂಗಳ ಒಳಗಾಗಿ ನೀಡಬೇಕಿದ್ದರೂ, ಅದನ್ನು ಕೆಲವು ಜಿಲ್ಲೆಗಳಲ್ಲಿ ತಿಂಗಳುಗಟ್ಟಲೆ ವಿಲೇವಾರಿ ಮಾಡದೆ ಸತಾಯಿಸುವ ಬಗ್ಗೆ ದೂರುಗಳು ಬರುತ್ತಿವೆ. ಅಂತಹ ವಿಳಂಬ ಪ್ರವೃತ್ತಿಯನ್ನು ಸಹಿಸಲು ಸಾಧ್ಯವಿಲ್ಲ ಎಂದು ತಿಳಿಸಿದ ಮುಖ್ಯಮಂತ್ರಿಗಳು ಸಿಂಧುತ್ವ ಪ್ರಮಾಣ ಪತ್ರಗಳನ್ನು ನಿಗದಿತ ಸಮಯದಲ್ಲಿ ನೀಡಲು ಕ್ರಮ ವಹಿಸುವಂತೆ ತಿಳಿಸಿದರು.

ಎಸ್.ಎಸ್.ಎಲ್.ಸಿ. ಮತ್ತು ಪಿಯುಸಿ ಫಲಿತಾಂಶ ಕಳಪೆ: ಆತ್ಮಾವಲೋಕ ಮಾಡಿಕೊಳ್ಳಿ:

ಸರ್ಕಾರಿ ಶಾಲೆಗಳಿಗೆ ಎಲ್ಲಾ ಸವಲತ್ತುಗಳನ್ನು ನೀಡದರೂ ಎಸ್.ಎಸ್.ಎಲ್.ಸಿ. ಮತ್ತು ಪಿಯುಸಿ ಫಲಿತಾಂಶ ಕಳಪೆಯಾಗಿರಲು ಕಾರಣವೇನು? ಈ ಬಗ್ಗೆ ಆತ್ಮಾವಲೋಕನ ನಡೆಸಬೇಕು. ತಮ್ಮ ಜಿಲ್ಲೆಗಳಲ್ಲಿ ಫಲಿತಾಂಶ ಸುಧಾರಿಸುವುದು ಆಯಾ ಜಿಲ್ಲಾಧಿಕಾರಿ ಹಾಗೂ ಸಿಇಒಗಳ ಜವಾಬ್ದಾರಿ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಶಿಕ್ಷಣ ಸುಧಾರಣೆಗೆ ಹೆಚ್ಚಿನ ಅನುದಾನ ಒದಗಿಸುತ್ತಿದ್ದರೂ, ಫಲಿತಾಂಶದಲ್ಲಿ ಯಾವಾಗಲೂ ಹಿಂದಿರಲು ಕಾರಣವೇನು? ಶಿಕ್ಷಣದ ಗುಣಮಟ್ಟವನ್ನು ಸುಧಾರಿಸಲು ಕೈಗೊಂಡಿರುವ ಕ್ರಮಗಳ ಬಗ್ಗೆ ಜಿಲ್ಲಾಧಿಕಾರಿ, ಸಿಇಒಗಳು ನಿರಂತರ ಗಮನ ಹರಿಸಬೇಕು ಎಂದು ತಿಳಿಸಿದರು.

6 ತಿಂಗಳ ಒಳಗಾಗಿ ಕಂದಾಯ ಗ್ರಾಮಗಳನ್ನು ಘೋಷಿಸುವ ಕಾರ್ಯ ಪೂರ್ಣಗೊಳಿಸಲು ಸೂಚನೆ:

ರಾಜ್ಯದಲ್ಲಿ ಕಂದಾಯ ಗ್ರಾಮಗಳ ಘೋಷಣೆ

ದಾಖಲೆ ಪ್ರಮಾಣದಲ್ಲಿ ಆಗಿದೆ. ಆದರೆ ಇನ್ನೂ ಬಾಕಿಯುಳಿದಿರುವ ಕಂದಾಯ ಗ್ರಾಮಗಳನ್ನು ಘೋಷಿಸುವ ಕಾರ್ಯ ಮುಂದಿನ 6 ತಿಂಗಳ ಒಳಗಾಗಿ ಪೂರ್ಣಗೊಳಿಸಬೇಕು. ಬಗರ್ ಹುಕುಂ

ಅರ್ಜಿಗಳ ವಿಲೇವಾರಿ ತ್ವರಿತಗೊಳಿಸಬೇಕು. ಇದು ಯಾಕೆ ಕಡಿಮೆಯಾಗುತ್ತಿದೆ? ಪೊ?ಡಿಮುಕ್ತ ಅಭಿಯಾನ ನಿರಂತರವಾಗಿ ಮುಂದುವರೆಸಬೇಕು. ಶೇ.63 ಪೊ?ಡಿಮುಕ್ತ ಆಗಿದ್ದು,

ಇದರಲ್ಲಿ ಶೇ.100ರಷ್ಟು ಪ್ರಗತಿ ಸಾಧಿಸಬೇಕು ಎಂದು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು.

ರುದ್ರಭೂಮಿ, ಕಬರಸ್ಥಾನಗಳಿಗೆ ಜಮೀನು ಒದಗಿಸುವಲ್ಲಿ ವಿಳಂಬ ಕೂಡದು:

ಶಾಲೆ, ಆಸ್ಪತ್ರೆ, ಅಂಗನವಾಡಿ, ಸ್ಮಶಾನ, ಕಬರಸ್ತಾನಗಳಿಗೆ ನಿವೇಶನ ಒದಗಿಸುವುದನ್ನು ಆದ್ಯತೆ ಮೇರೆಗೆ ಕೈಗೊಳ್ಳಬೇಕು. ಯಾವುದೇ ಕಾರಣಕ್ಕೂ ರುದ್ರಭೂಮಿ, ಕಬರಸ್ಥಾನಗಳಿಗೆ ಜಮೀನು ಒದಗಿಸುವುದನ್ನು ವಿಳಂಬ ಮಾಡಬಾರದು. ನಿವೇಶನಗಳು ಅಗತ್ಯವಿರುವ ಇಲಾಖೆಗಳಿಗೆ ನಿವೇಶನಗಳನ್ನು ಆದ್ಯತೆ ಮೇರೆಗೆ ಒದಗಿಸಬೇಕು. 1858 ಗ್ರಾಮೀಣ ಅಂಗನವಾಡಿಗಳಿಗೆ 5187 ನಗರ ಅಂಗನವಾಡಿಗಳಿಗೆ ನಿವೇಶನ ಅಗತ್ಯವಿದೆ. 14 ಸರ್ಕಾರಿ ಕಾಲೇಜು ನಿವೇಶನ ಹಂಚಿಕೆಯಾಗಿಲ್ಲ.

ಅರಣ್ಯ ಹಕ್ಕುಗಳಿಗಾಗಿ 295176 ಅರ್ಜಿಗಳು ಸಲ್ಲಿಕೆಯಾಗಿದ್ದು, 16700 ಮಾತ್ರ ಅರಣ್ಯ ಹಕ್ಕು ಪತ್ರ ಒದಗಿಸಲಾಗಿದೆ. ಇದನ್ನು ಸರಿಯಾಗಿ ವಿಲೇವಾರಿ ಮಾಡಬೇಕು. ಜಿಲ್ಲಾಧಿಕಾರಿ, ತಹಶೀಲ್ದಾರ್, ಎಸಿ ಕೋರ್ಟ್ ಗಳಲ್ಲಿ ಪ್ರಕರಣಗಳನ್ನು ಸರಿಯಾಗಿ ವಿಲೇವಾರಿ ಮಾಡಬೇಕು. ಮೆರಿಟ್ ಮೇಲೆ ತೀರ್ಮಾನ ಮಾಡಬೇಕು. ಪ್ರಕರಣಗಳನ್ನು ಮುಂದಕ್ಕೆ ಹಾಕುವ ಪ್ರವೃತ್ತಿ ಇರಬಾರದು.

ಅನರ್ಹ ಪಡಿತರ ಚೀಟಿಗಳನ್ನು ರದ್ದುಗೊಳಿಸಲು ಈಗಾಗಲೇ ಕಟ್ಟುನಿಟ್ಟಿನ ಸೂಚನೆ ನೀಡಲಾಗಿತ್ತು. ಆದರೆ ಇದರಲ್ಲಿ ನಿರೀಕ್ಷಿತ ಪ್ರಗತಿ ಯಾಕೆ ಸಾಧ್ಯವಾಗಿಲ್ಲ. ರಾಜ್ಯದಲ್ಲಿ ಸುಮಾರು ಶೇ. 74 ರಷ್ಟು ಬಿಪಿಎಲ್ ಕಾರ್ಡುಗಳಿದ್ದು, ಅನರ್ಹರನ್ನು ಗುರುತಿಸಿ ತೆಗೆದು ಹಾಕುವ ಕಾರ್ಯ ನಡೆಯಬೇಕಿದೆ.

ಇಂದಿರಾ ಕ್ಯಾಂಟೀನ್ ಗಳಲ್ಲಿ ಆಹಾರ ವಿತರಣೆಗೆ ಕ್ರಮ ಕೈಗೊಳ್ಳಿ:

ಇಂದಿರಾ ಕ್ಯಾಂಟೀನ್‌ಗಳಿಗೆ ಇನ್ನೂ 5 ಕಡೆ ಸ್ಥಳ ಗುರುತಿಸಬೇಕಾಗಿದೆ. ತಕ್ಷಣ ನಿವೇಶನ ಗುರುತಿಸಬೇಕು. ಹೊಸದಾಗಿ ಘೋಷಣೆ ಮಾಡಲಾಗಿರುವ 186 ಇಂದಿರಾ ಕ್ಯಾಂಟೀನ್‌ಗಳ ಪೈಕಿ ಕೇವಲ

103 ನಿರ್ಮಾಣ ಕಾರ್ಯ ಪೂರ್ಣಗೊಂಡಿವೆ. ಆಹಾರ ವಿತರಣೆ 43 ಇಂದಿರಾ

ಕ್ಯಾಂಟೀನ್‌ಗಳಲ್ಲಿ ಮಾತ್ರ ಪ್ರಾರಂಭವಾಗಿದೆ. ಎಲ್ಲಾ ಕಡೆ ಆಹಾರ ವಿತರಣೆ ಪ್ರಾರಂಭಿಸಲು ಜಿಲ್ಲಾಧಿಕಾರಿಗಳು ಕ್ರಮಕೈಗೊಳ್ಳಬೇಕು.

ಸಭೆಯಲ್ಲಿ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಕೆ.ಎಚ್. ಮುನಿಯಪ್ಪ, ಕೆ.ಜೆ. ಜಾರ್ಜ್, ಚೆಲುವರಾಯಸ್ವಾಮಿ, ಶಿವನಂದ ಪಾಟೀಲ್, ತಿಮ್ಮಾಪುರ್, ವೆಂಕಟೇಶ್, ಕೃಷ್ಣಬೈರೇಗೌಡ, ಪ್ರಿಯಾಂಕ್ ಖರ್ಗೆ, ಭೋಸರಾಜ್, ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಎಳೆದು ತುಳಿಯುತ್ತೇವೆ: ಮೋದಿ

ನಾನು ಬಿಹಾರಕ್ಕೆ ಬಂದಿದ್ದೆ. ಅಲ್ಲಿ ನಮ್ಮ ಅನೇಕ ಸಹೋದರಿಯರು ತಮ್ಮ ಗಂಡಂದಿರನ್ನು ಕಳೆದುಕೊಂಡಿದ್ದರು. ಅಪರಾಧಿಗಳಿಗೆ ಅವರು ಕನಸಿನಲ್ಲಿಯೂ ಊಹಿಸಲಾಗದ ಶಿಕ್ಷೆಯನ್ನು ನೀಡಲಾಗುವುದು ಎಂದು ನಾನು ಭರವಸೆ ನೀಡಿದ್ದೆ. ಇಂದು, ಭರವಸೆಯನ್ನು ಈಡೇರಿಸಿದ ನಂತರ ನಾನು ಬಿಹಾರಕ್ಕೆ ಮತ್ತೆ ಬಂದಿದ್ದೇನೆಂದು ತಿಳಿಸಿದ್ದಾರೆ.

ಪಾಕಿಸ್ತಾನ ಮತ್ತು ಜಗತ್ತು ಭಾರತದ ಹೆಣ್ಣುಮಕ್ಕಳ 'ಸಿಂಧೂರ' (ಆಪರೇಷನ್ ಸಿಂಧೂರ) ಶಕ್ತಿಯನ್ನು ನೋಡಿದೆ. ಪಾಕಿಸ್ತಾನ ಸೇನೆಯ ರಕ್ಷಣೆಯಲ್ಲಿ ಭಯೋತ್ಪಾದಕರು ಸುರಕ್ಷಿತ ಭಾವನೆ ಹೊಂದಿದ್ದರು. ಆದರೆ ಭಾರತೀಯ ಪಡೆಗಳು ಅವರನ್ನು ಬಲಿಹಾಕಿದ್ದಾರೆ ಎಂದು ಹೇಳಿದ್ದಾರೆ.

ನಾವು ಪಾಕಿಸ್ತಾನದ ವಾಯುನೆಲೆಗಳು ಮತ್ತು ಅದರ ಮಿಲಿಟರಿ ಸ್ಥಾಪನೆಗಳನ್ನು ಸಹ ನಾಶಪಡಿಸಿದ್ದೇವೆ. ಇದು ನವ ಭಾರತ ಮತ್ತು ಅದರ ಶಕ್ತಿ ಎಲ್ಲರೂ ನೋಡುವುದಕ್ಕಾಗಿ ಎಂದಿದ್ದಾರೆ.

# ಚನ್ನಬಸವೇಶ್ವರ ಗುರುಕುಲದಲ್ಲಿ ವಿ.ಸೋಮಣ್ಣ ಅಭಿನಂದನಾ ಸಮಾರಂಭ ಇಂದು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.30:ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದಲ್ಲಿ ಹಿರೇಮಠ ಸಂಸ್ಥಾನದ ವತಿಯಿಂದ ಶನಿವಾರ ಸಾಯಂಕಾಲ 4 ಗಂಟೆಗೆ ಕೇಂದ್ರದ ರಾಜ್ಯ ರೈಲ್ವೆ ಮತ್ತು ಜಲಶಕ್ತಿ ಇಲಾಖೆ ಸಚಿವ ವಿ.ಸೋಮಣ್ಣ ಅವರ



ಅಭಿನಂದನಾ ಸಮಾರಂಭ

ಜರುಗಲಿದೆ.

ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಸಮಾರಂಭದ ದಿವ್ಯಸಾನ್ನಿಧ್ಯ ವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಮಳೆಗೆ 6 ಮಂದಿ ಬಲಿ

ಮನೆಯೊಳಗೆ ಅವರ ತಂದೆ 65 ವರ್ಷದ ಕಾಂತಪ್ಪ ಪೂಜಾರಿ, ತಾಯಿ 60 ವರ್ಷದ ಪ್ರೇಮ, ಪತ್ನಿ 31 ವರ್ಷದ ಅಶ್ವಿನಿ ಮತ್ತು ಇಬ್ಬರು ಮಕ್ಕಳಾದ ಎರಡೂವರೆ ವರ್ಷದ ಆರ್ಯನ್ ಹಾಗೂ ಒಂದು ವರ್ಷದ ಮಗು ಆಯುಷ್ ಅಡಿಯಲ್ಲಿ ಸಿಲುಕಿಕೊಂಡಿದ್ದರು. ಸ್ಥಳೀಯರು ಬಂದು ಕಾಂತಪ್ಪ ಪೂಜಾರಿಯವರನ್ನು ರಕ್ಷಿಸಿದ್ದು, ಅವರ ಕಾಲಿಗೆ ಗಂಭೀರ ಗಾಯವಾಗಿ ಆಸ್ಪತ್ರೆಗೆ ದಾಖಲಿಸಿದ್ದರು. ಪ್ರೇಮ ಮಣ್ಣಿನಡಿಯಲ್ಲಿ ಸಿಲುಕಿ ಸಾವನ್ನಪ್ಪಿದ್ದಾರೆ. ಮಣ್ಣಿನಡಿಯಲ್ಲಿದ್ದ ಒಂದು ಮಗು ಸಾವನ್ನಪ್ಪಿದ್ದು, ಬಳಿಕ ತಾಯಿ ಹಾಗೂ ಒಂದು ಮಗುವನ್ನು ರಕ್ಷಣೆ ಮಾಡಲಾಗಿತ್ತು. ಆಸ್ಪತ್ರೆಗೆ ಸಾಗಿಸುವಾಗ ಆ ಮಗುವೂ ಮೃತಪಟ್ಟಿರುವ ದುರಂತ ಘಟನೆ ನಡೆದಿದೆ.

ವಿದ್ಯುತ್ ಶಾಕ್‌ಗೆ ಲೈನ್‌ಮನ್ ಬಲಿ

ಓಡಿನ್ನಾಳ ಗ್ರಾಮದ ಕುಮ್ಮಂಜ ಎಂಬಲ್ಲಿ ಘಟನೆ ವಿದ್ಯುತ್ ಶಾಕ್‌ನಿಂದ ಲೈನ್‌ಮನ್ ವೀರೇಶ್ ಜೈನ್ (27) ಮೃತಪಟ್ಟಿದ್ದಾರೆ. ಕೆಂಜಿಲ ಮನೆ ನಿವಾಸಿ ಸುಕುಮಾರ್ ಜೈನ್ ಮತ್ತು ಪೂರ್ಣಿಮಾ ದಂಪತಿಯ ಎರಡನೇ ಮಗ ಇವರು. ಹೆಚ್‌ಡಿ ಲೈನ್ ಕೆಲಸ ಮಾಡುತ್ತಿದ್ದಾಗ ವಿದ್ಯುತ್ ಪ್ರವಹಿಸಿ ಸಾವಿಗೀಡಾಗಿದ್ದಾರೆ. ಬೆಳ್ತಂಗಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಾಡದೋಣಿ ಮಗುಚಿ ಇಬ್ಬರು ನೀರುಪಾಲು

ಮಂಗಳೂರಿನಲ್ಲಿ ಮಳೆಯ ಜೊತೆ ಕಡಲಬ್ಬರ ಜೋರಾಗಿದೆ. ಪರಿಣಾಮ ನಾಡದೋಣಿ ಮಗುಚಿ ಇಬ್ಬರು ನೀರುಪಾಲಾಗಿರುವ ಘಟನೆ ತೋಟಬೆಂಗ್ರೆ ಅಳಿವೆ ಬಾಗಿಲು ಎಂಬಲ್ಲಿ ನಡೆದಿದೆ. ತೋಟಬೆಂಗ್ರೆ ನಿವಾಸಿಗಳಾದ ಯಶವಂತ, ಕಮಲಾಕ್ಷ ನೀರುಪಾಲಾದ ಮೀನುಗಾರರಾಗಿದ್ದಾರೆ. ನಾಡದೋಣಿಯ ಅವಶೇಷಗಳು ಕಡಲತೀರದಲ್ಲಿ ಬಂದು ಬಿದ್ದಿವೆ. ನೀರಿನಲ್ಲಿ ಕಣ್ಮರೆಯಾಗಿರುವ ಮೀನುಗಾರರಿಗೆ ಶೋಧ ಕಾರ್ಯ ನಡೆಯುತ್ತಿದೆ.

# ಪಾಕ್ ನಾಲ್ಕು ಹೋಳಾಗುತ್ತಿತ್ತು:ರಾಜನಾಥ ಸಿಂಗ್

ಪಟ್ಟಿಯಲ್ಲಿದ್ದಾರೆ. ಮಾತ್ರವಲ್ಲದೆ ವಿಶ್ವಸಂಸ್ಥೆಯಿಂದ ಗೊತ್ತುಪಡಿಸಿದ ಭಯೋತ್ಪಾದಕರೂ ಆಗಿದ್ದಾರೆ ಎಂದು ಸಿಂಗ್ ಗಮನಸೆಳೆದರು.2008ರ ಮುಂಬೈ ದಾಳಿಯ ಆರೋಪಿ ತಹವ್ವೂರ್ ರಾಣಾ ಅವರನ್ನು ಇತ್ತೀಚೆಗೆ ಭಾರತಕ್ಕೆ ಹಸ್ತಾಂತರಿಸಿರುವುದನ್ನು ಎತ್ತಿ ತೋರಿಸಿದ ರಾಜನಾಥ್ ಸಿಂಗ್, ಹಫೀಜ್ ಸಯೀದ್ ಕೂಡ ದಾಳಿಯಲ್ಲಿ ಭಾಗಿಯಾಗಿದ್ದಾರೆ ಎಂದು ಹೇಳಿದರು.ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ನಡೆದ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ಪ್ರಾರಂಭಿಸಲಾದ ಆಪರೇಷನ್ ಸಿಂಧೂರ್ ಇನ್ನೂ ಮುಗಿದಿಲ್ಲ ಎಂದ ರಕ್ಷಣಾ ಸಚಿವರು, "ಇದು ಕೇವಲ ವಿರಾಮ, ಎಚ್ಚರಿಕೆ". "ಪಾಕಿಸ್ತಾನ ಅದೇ ತಪ್ಪನ್ನು ಪುನರಾವರ್ತಿಸಿದರೆ, ಭಾರತದ ಪ್ರತಿಕ್ರಿಯೆ ಇನ್ನಷ್ಟು ಕಠಿಣವಾಗಿರುತ್ತದೆ" ಎಂದು ಎಚ್ಚರಿಸಿದರು.ಭಾರತೀಯ ಸಶಸ್ತ್ರ ಪಡೆಗಳು ನಡೆಸಿದ ಆಪರೇಷನ್ ಸಿಂಧೂರ್, ಪಾಕಿಸ್ತಾನ ಮತ್ತು ಪಿಒಕೆಯಲ್ಲಿನ ಭಯೋತ್ಪಾದಕ ನೆಲೆಗಳನ್ನು ಗುರಿಯಾಗಿಸಿ ದಾಳಿ ನಡೆಸಲಾಗಿದೆ. ಈ ಕಾರ್ಯಾಚರಣೆಯು ಕೇವಲ ಮಿಲಿಟರಿ ತಂತ್ರವಲ್ಲ, ಬದಲಾಗಿ ಭಯೋತ್ಪಾದನೆಯ ಬಗ್ಗೆ ಭಾರತದ ಶೂನ್ಯ ಸಹಿಷ್ಣುತಾ ನೀತಿಯ ಸ್ಪಷ್ಟ ಘೋಷಣೆಯಾಗಿದೆ ಎಂದು ಸಿಂಗ್ ಒತ್ತಿ ಹೇಳಿದರು.

ಇದೇ ವೇಳೆ ಭಾರತೀಯ ನೌಕಾಪಡೆಯ ಅಪ್ರತಿಮ ಶಕ್ತಿಯ ಬಗ್ಗೆಯೂ ಪಾಕಿಸ್ತಾನಕ್ಕೆ ಎಚ್ಚರಿಕೆ ನೀಡಿದ ರಕ್ಷಣಾ ಸಚಿವರು, ಆಪರೇಷನ್ ಸಿಂಧೂರ್ ಸಮಯದಲ್ಲಿ ನೌಕಾಪಡೆಯು, ವಾಯುಪಡೆ ಮತ್ತು ಸೇನೆಯೊಂದಿಗೆ ಸೇರಿಕೊಂಡಿದ್ದರೆ, ಪಾಕಿಸ್ತಾನವು 1971 ಕ್ಕಿಂತ ಕೆಟ್ಟ ಪರಿಣಾಮ ಎದುರಿಸುತ್ತಿತ್ತು ಮತ್ತು ಪಾಕಿಸ್ತಾನ ನಾಲ್ಕು ಹೋಳಾಗುತ್ತಿತ್ತು ಎಂದು ಹೇಳಿದರು.

# ಜಿಡಿಪಿ ಶೇ.7.4ಕ್ಕೆ ಏರಿಕೆ

ಎಂದು ಹೇಳಲಾಗಿದೆ.ನಾಲ್ಕನೇ ತ್ರೈಮಾಸಿಕ ಜಿಡಿಪಿಯು ಕಳೆದ ನಾಲ್ಕು ತ್ರೈಮಾಸಿಕಗಳಲ್ಲೇ ಗರಿಷ್ಠವಾಗಿದ್ದು, ಸಂಪೂರ್ಣ ವರ್ಷದ ಜಿಡಿಪಿ ಬೆಳವಣಿಗೆ

ಶೇ. 6.5ರಷ್ಟು ಇರಲಿದೆ ಎಂದು ಅಂದಾಜಿಸಲಾಗಿದೆ.

ಕಳೆದ ಅಂದರೆ ಡಿಸೆಂಬರ್ ತ್ರೈಮಾಸಿಕದಲ್ಲಿ ದೇಶದ ಆರ್ಥಿಕ ಬೆಳವಣಿಗೆ ದರ ಶೇ. 6.3ರಷ್ಟು ಇತ್ತು. ಇದಕ್ಕೆ ಹೋಲಿಸಿದರೆ ಈ ಬಾರಿ ಜಿಡಿಪಿ ಬೆಳವಣಿಗೆ ದರ ದೊಡ್ಡ ಮಟ್ಟಕ್ಕೆ ಏರಿಕೆ ಕಂಡಿದೆ. ಆದರೆ ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಕಡಿಮೆಯಾಗಿದೆ. 2023ನೇ ಆರ್ಥಿಕ ವರ್ಷದ ನಾಲ್ಕನೇ ತ್ರೈಮಾಸಿಕದಲ್ಲಿ ದೇಶದ ಜಿಡಿಪಿ ಬೆಳವಣಿಗೆ ದರ ಶೇ. 8.4ರಷ್ಟು ಇತ್ತು ಎಂದು ವರದಿಯಲ್ಲಿ ತಿಳಿಸಲಾಗಿದೆ.ರಾಷ್ಟ್ರೀಯ ಅಂಕಿಅಂಶ ಕಚೇರಿ(ಎನ್‌ಎಸ್‌ಒ) ಬಿಡುಗಡೆ ಮಾಡಿದ ಮಾಹಿತಿಯ ಪ್ರಕಾರ, 2023–24ರಲ್ಲಿ ಶೇ 9.2ರಷ್ಟು ಬೆಳವಣಿಗೆ ಕಂಡಿದ್ದ ಆರ್ಥಿಕತೆಯು 2024–25ರಲ್ಲಿ ಶೇ 6.5 ರಷ್ಟಾಗಿದೆ. 2025ರ ಮೊದಲ ಮೂರು ತಿಂಗಳಲ್ಲಿ (ಜನವರಿ–ಮಾರ್ಚ್) ಚೀನಾ ಶೇ 5.4 ರಷ್ಟು ಆರ್ಥಿಕ ಬೆಳವಣಿಗೆಯನ್ನು ದಾಖಲಿಸಿದೆ.

ಆದಾಯ ತೆರಿಗೆ ಮಿತಿ 7 ಲಕ್ಷದಿಂದ 12 ಲಕ್ಷ ರೂ.ಗೆ ಏರಿಕೆ, ಆರ್‌ಬಿಐನಿಂದ ಬಡ್ಡಿ ದರ ಇಳಿಕೆ ಹಾಗೂ ವಿದೇಶಿ ನಿಧಿಯ ಒಳ ಹರಿವಿನಿಂದ ಪ್ರಸಕ್ತ ಹಣಕಾಸು ವರ್ಷ

(2025–26)ದಲ್ಲಿ ಆರ್ಥಿಕ ಬೆಳವಣಿಗೆ ದರ ಶೇ.6.8ಕ್ಕೆ ಮುಟ್ಟಬಹುದು ಎಂದು ಸಚಿವಾಲಯ ಅಂದಾಜಿಸಿತ್ತು. ಆದರೆ ಆರ್‌ಬಿಐ ಬೆಳವಣಿಗೆ ದರವನ್ನು ಶೇ. 6.5ರಷ್ಟಿರಬಹುದು ಎಂದು ಹೇಳಿತ್ತು.ಖಾಸಗಿ ಬಳಕೆ (ಕಈಅಇ) ಪೂರ್ಣ ವರ್ಷಕ್ಕೆ 7.2% ರಷ್ಟು ಏರಿಕೆಯಾಗಿದ್ದು, ಇದು ಸ್ಥಿತಿಸ್ಥಾಪಕ ಬೇಡಿಕೆಯನ್ನು ಸೂಚಿಸುತ್ತದೆ. ಆದರೆ ಹೂಡಿಕೆ (ಉಈಅಈ) ಕಿ4 ರಲ್ಲಿ 9.4% ರಷ್ಟು ಜಿಗಿದಿದೆ, ಇದು ನವೀಕೃತ ವ್ಯವಹಾರ ವಿಶ್ವಾಸವನ್ನು ಸೂಚಿಸುತ್ತದೆ. ಅಂತೆಯೇ ಕೃಷಿಯು ಕಿ4 ರಲ್ಲಿ 5.0% ಬೆಳವಣಿಗೆಗೆ ಮರಳಿದ್ದು, ಕಳೆದ ವರ್ಷದ ಇದೇ ತ್ರೈಮಾಸಿಕದಲ್ಲಿ 0.8% ರಷ್ಟಿತ್ತು. ಇದೀಗ ತೀವ್ರ ಚೇತರಿಕೆ ಕಂಡಿದೆ.ಈಙ25 ರಲ್ಲಿ ನಾಮಮಾತ್ರ

ಉಆಕ 9.8% ರಷ್ಟು ಏರಿಕೆಯಾಗಿ ಖ 330 ಲಕ್ಷ ಕೋಟಿಗಳಿಗೆ ತಲುಪಿದೆ, ಇದನ್ನು ಡಾಲರ್ ಪರಿಭಾಷೆಯಲ್ಲಿ ಪರಿವರ್ತಿಸಿದರೆ ಸರಾಸರಿ ಡಾಲರ್/ಖಒಖ ವಿನಿಮಯ ದರ 84 ಎಂದು ಊಹಿಸಿದರೆ ಸುಮಾರು $3.92 ಟ್ರಿಲಿಯನ್ ಆಗುತ್ತದೆ. ಈಙ25 ರ ನೈಜ ಉಆಕ ?187.97 ಲಕ್ಷ ಕೋಟಿಗಳಷ್ಟಿದ್ದು, ಈಙ24 ರಲ್ಲಿ ?176.51 ಲಕ್ಷ ಕೋಟಿಗಳಿಂದ ಹೆಚ್ಚಾಗಿದೆ.

ಬಲವಾದ ಕಿ4 ಕಾರ್ಯಕ್ಷಮತೆಯು ಭಾರತವು ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಗಳಲ್ಲಿ ಒಂದಾಗಿ ಉಳಿದಿದೆ ಎಂದು ಸೂಚಿಸುತ್ತದೆ, ನಿರ್ಮಾಣ ಮತ್ತು ಸಾರ್ವಜನಿಕ ಖರ್ಚು

ಆವೇಗವನ್ನು ಹೆಚ್ಚಿಸುತ್ತದೆ. ಆದಾಗ್ಯೂ, ಖಾಸಗಿ ಹೂಡಿಕೆ ಮತ್ತು ಗ್ರಾಮೀಣ ಬೇಡಿಕೆಯನ್ನು ಉಳಿಸಿಕೊಳ್ಳುವುದು ಈಙ26 ಬೆಳವಣಿಗೆಗೆ ನಿರ್ಣಾಯಕವಾಗಿರುತ್ತದೆ.

# ಭಾರೀ ಮಳೆಗೆ 5 ಸಾವು

ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಜೂನ್ 5 ರವರೆಗೆ ರಾಜ್ಯಾದ್ಯಂತ ಭಾರೀ ಮಳೆ ಮುಂದುವರಿಯಲಿದೆ. ಕೇರಳದಲ್ಲಿ ಮುಂದಿನ ಐದು ದಿನಗಳವರೆಗೆ ಪಶ್ಚಿಮ ದಿಕ್ಕಿನ ಗಾಳಿ ಬೀಸುವ ನಿರೀಕ್ಷೆಯಿದೆ. ಗುಡ್ಡಗಾಡು ಪ್ರದೇಶಗಳಲ್ಲಿ ಮತ್ತು ನದಿ ದಂಡೆಯ ಬಳಿ ಹೈ ಅಲರ್ಟ್ ಘೋಷಿಸಲಾಗಿದೆ ಎಂದು ರಾಜ್ಯ ಕಂದಾಯ ಸಚಿವ ಕೆ. ರಾಜನ್ ತಿಳಿಸಿದ್ದಾರೆ.

ಕೊಟ್ಟಾಯಂ ಜಿಲ್ಲೆಯಲ್ಲಿ ಮೀನುಗಾರಿಕೆ ನಡೆಸುತ್ತಿದ್ದ ಇಬ್ಬರು ಯುವಕರು ಮುಳುಗಿ ಸಾವನ್ನಪ್ಪಿದ್ದರೆ, ತಿರುವನಂತಪುರಂ ಬಳಿಯ ಸಮುದ್ರದಲ್ಲಿ ಮೀನುಗಾರಿಕೆ ದೋಣಿ ಮಗುಚಿ ಬಿದ್ದು ಮೀನುಗಾರನೊಬ್ಬ ಸಾವನ್ನಪ್ಪಿದ್ದಾನೆ. ಕೊಚ್ಚಿಯಲ್ಲಿ ಮರ ಬಿದ್ದು 85 ವರ್ಷದ ಎಂಜಿಎನ್‌ಆರ್‌ಇಜಿಎ ಕಾರ್ಯಕರ್ತೆಯೊಬ್ಬರು ಮೃತಪಟ್ಟಿದ್ದಾರೆ. ಪಶ್ಚಿಮ ಬಂಗಾಳದ ಮೂಲದ ವ್ಯಕ್ತಿಯೊಬ್ಬ ಕೊಚ್ಚಿಯಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ.

ಬಹುತೇಕ ಎಲ್ಲಾ ಜಿಲ್ಲೆಗಳ ತಗ್ಗು ಪ್ರದೇಶಗಳು ಜಲಾವೃತಗೊಂಡಿವೆ. ಡಿಂಗಿ ದೋಣಿಗಳ ಮೂಲಕ ಕುಟುಂಬಗಳನ್ನು ಪರಿಹಾರ ಶಿಬಿರಗಳಿಗೆ ಸ್ಥಳಾಂತರಿಸಲಾಯಿತು. ನದಿಗಳ ಬಳಿ ವಾಸಿಸುವ ಜನರನ್ನು ಸಹ ಪರಿಹಾರ ಶಿಬಿರಗಳಿಗೆ ಸ್ಥಳಾಂತರಿಸಲಾಯಿತು. ರಾಜ್ಯಾದ್ಯಂತ 2,000 ಕ್ಕೂ ಹೆಚ್ಚು ಜನರನ್ನು ಪರಿಹಾರ ಶಿಬಿರಗಳಿಗೆ ಸ್ಥಳಾಂತರಿಸಲಾಯಿತು.

ರಾಜ್ಯಾದ್ಯಂತ ಭಾರೀ ಮಳೆಗೆ ಮರಗಳು ಉರುಳಿಬಿದ್ದ ಪರಿಣಾಮ ಮನೆಗಳಿಗೆ ಹಾನಿಯಾಗಿದೆ. ರಾಜ್ಯದಾದ್ಯಂತ ಕರಾವಳಿ ಪ್ರದೇಶಗಳಲ್ಲಿನ ಅನೇಕ ಮನೆಗಳು ಉಬ್ಬರವಿಳಿತದ ಪರಿಣಾಮವಾಗಿ ನಾಶವಾದವು. ಮಳೆಯಿಂದಾಗಿ ರಾಜ್ಯಾದ್ಯಂತ ವ್ಯಾಪಕ ಬೆಳೆ ನಷ್ಟವಾಗಿದೆ.

# ವೆಂಕಟೇಶಮೂರ್ತಿ ಇನ್ನಿಲ್ಲ

ಕೃತಿಗಳನ್ನು ಬರೆದಿರುವ ಅವರು, ಕವಿತೆ, ನಾಟಕ, ಪ್ರಬಂಧ, ಕಾದಂಬರಿ, ಮಕ್ಕಳ ಸಾಹಿತ್ಯ, ಅನುವಾದ, ವಿಮರ್ಶೆ ಸೇರಿದಂತೆ ಹಲವು ಪ್ರಕಾರಗಳಲ್ಲಿ ಸಾಹಿತ್ಯ ಕ್ಷೇತ್ರಕ್ಕೆ ಕೊಡುಗೆ ನೀಡಿದ್ದಾರೆ. ಜೊತೆಗೆ ಮಕ್ಕಳಿಗಾಗಿ ಕವಿತೆ, ನಾಟಕ, ಕಥೆಗಳನ್ನು ಬರೆದಿದ್ದಾರೆ. ಇವರು ಅನುವಾದಿಸಿದ ಕಾಳಿದಾಸನ ಋತುಸಂಹಾರ ಕಾವ್ಯಕೃತಿಗಾಗಿ ಕೇಂದ್ರ ಸಾಹಿತ್ಯ ಅಕಾಡೆಮಿ ಅನುವಾದ ಪುರಸ್ಕಾರವನ್ನು ನೀಡಿ ಗೌರವಿಸಿದೆ.

ಕೃತಿಗಳು:

ಇವರ ಪ್ರಮುಖ ನಾಟಕಗಳು : ಕ್ರಿಯಾಪರ್ವ, ಎಷ್ಟೊಂದು ಮುಗಿಲು, ನದೀತೀರದಲ್ಲಿ, ಉತ್ತರಾಯಣ, ಅಗ್ನಿವರ್ಣ, ಚಿತ್ರಪಟ, ಉರಿಯ ಉಯ್ಯಾಲೆ, ಮಂಥರೆ, ಕಂಸಾಯಣ ಮೊದಲಾದವು.

ಇವರ ಮುಖ್ಯ ಕಾವ್ಯಕೃತಿಗಳು; ಅಗ್ನಿವರ್ಣ, ಚಿತ್ರಪಟ, ಉರಿಯ ಉಯ್ಯಾಲೆ, ಮಂಥರೆ ಮೊದಲಾದವು.

ಕವನ ಸಂಕಲನಗಳು: ಸಿಂದಬಾದನ ಆತ್ಮಕಥೆ, ಕ್ರಿಯಾಪರ್ವ, ಒಣಮರದ ಗಿಳಿಗಳು, ಎಷ್ಟೊಂದು ಮುಗಿಲು

ನದೀತೀರದಲ್ಲಿ, ಉತ್ತರಾಯಣ.

ಮಕ್ಕಳ ಕೃತಿಗಳು: ಹಕ್ಕಿಸಾಲು, ಅಳಿಲು ರಾಮಾಯಣ, ಅಜ್ಜೀ ಕಥೆ ಹೇಳು, ಚಿನ್ನಾರು ಮುತ್ತ

85ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿದ್ದ ಇವರು ಅನುವಾದಿಸಿದ ಕಾಳಿದಾಸನ ಋತುಸಂಹಾರ ಕಾವ್ಯಕೃತಿಗಾಗಿ ಕೇಂದ್ರ ಸಾಹಿತ್ಯ ಅಕಾಡೆಮಿ ಅನುವಾದ ಪುರಸ್ಕಾರವನ್ನು ನೀಡಿ ಗೌರವಿಸಿದೆ. ಜೊತೆಗೆ ರಾಜ್ಯೋತ್ಸವ ಪ್ರಶಸ್ತಿ, ಆಕಾಶವಾಣಿ ರಾಷ್ಟ್ರೀಯ ಪ್ರಶಸ್ತಿ, ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಲಭಿಸಿವೆ.

# ಇಂದು"ವಿಶ್ವ ತಂಬಾಕು ರಹಿತ ದಿನಾಚರಣೆ" ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.30:ಕಲಬುರಗಿ ಜಿಲ್ಲಾಡಳಿತ, ಜಿಲ್ಲಾಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ರಾಷ್ಟ್ರೀಯ ಬಾಯಿ ಆರೋಗ್ಯ ಕಾರ್ಯಕ್ರಮ ಮತ್ತು ಸಿದ್ಧಾರ್ಥ ಕಾನೂನು ಮಹಾವಿದ್ಯಾಲಯ ಎನ್.ಎಸ್.ಎಸ್. ಘಟಕ ಇವುಗಳ ಸಂಯುಕ್ತಾಶ್ರಯದಲ್ಲಿ "ವಿಶ್ವ ತಂಬಾಕು ರಹಿತ ದಿನಾಚರಣೆ" ಕಾರ್ಯಕ್ರಮವನ್ನು ಇದೇ ಮೇ 31 ರಂದು ಬೆಳಿಗ್ಗೆ 10 ಗಂ–ಟೆಗೆ ಕಲಬುರಗಿ ಕೋರ್ಟ್ ರಸ್ತೆಯಲ್ಲಿರುವ ಸಿದ್ಧಾರ್ಥ ಕಾನೂನು ಮಹಾವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.

# ನಾಳೆ ಮಾಶಾಳದಲ್ಲಿ ಬೃಹತ ರಾಷ್ಟ ಧರ್ಮ ಜಾಗೃತಿ ಸಮಾವೇಶ

ಮಲ್ಲಮ್ಮ ನುಡಿ ವಾರ್ತೆ

ಅಫಜಲಪೂರ :ಮೇ.30: ತಾಲೂಕಿನ ಮಾಶಾಳ ಗ್ರಾಮದಲ್ಲಿ ಮೇ 31 ರಂದು ಶನಿವಾರ ಶ್ರೀ ಮರುಳಾರಾಧ್ಯ ಶಿವಾಚಾರ್ಯರ ಹುಟ್ಟುಹಬ್ಬದ ಪ್ರಯುಕ್ತ ಗುರುವಂದನಾ ಕಾರ್ಯಕ್ರಮ ಹಾಗೂ ಬೃಹತ ರಾಷ್ಟ, ಧರ್ಮ ಜಾಗೃತಿ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದ ಪ್ರಯುಕ್ತ ಪಟ್ಟಣದಲ್ಲಿ ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ಮಾಶಾಳ




ಗ್ರಾಮದ ಶ್ರೀ ಮರುಳಾರಾಧ್ಯ ಶಿವಾಚಾರ್ಯರು ಇದೆ ಮೇ 31 ರಂದು ಶನಿವಾರ ನನ್ನ ಹುಟ್ಟು ಹಬ್ಬವಿರುವದರಿಂದ ಯಾವುದೇ ಆಡಂಬರವಿಲ್ಲದೆ ಅತ್ಯಂತ ಸರಳವಾಗಿ ಆಚರಿಸಲು ನಿರ್ಧರಿಸಿದ್ದು ಹಾಗಾಗಿ ಈ ಪ್ರಯುಕ್ತ ರಾಷ್ಟ ಹಾಗೂ ಧರ್ಮದ ಬಗ್ಗೆ ಜಾಗೃತಿ ಮೂಡಿಸಲು ಗುರುವಂದನಾ ಕಾರ್ಯಕ್ರಮ ಹಾಗೂ ರಾಷ್ಟ, ಧರ್ಮ ಜಾಗೃತಿ ಕಾರ್ಯಕ್ರಮ ಆಯೋಜನೆ ಮಾಡಿದ್ದೂ, ಕಾರ್ಯಕ್ರಮದಲ್ಲಿ ವಿಜಯಪುರ ಶಾಸಕ ಬಸವನಗೌಡ ಪಾಟೀಲ್ ಯತ್ನಾಳ, ಹಿಂದೂಪರ ಹೋರಾಟಗಾರ ನಾಯಕ ಪ್ರಮೋದ ಮುತಾಲಿಕ್ ಹಾಗೂ ಕಲಬುರಗಿಯ ಹಿಂದೂ ಫೈರ್ ಬ್ರಾಂಡ್ ಆಂದೋಲದ ಶ್ರೀ ಸಿದ್ದಲಿಂಗ ಶಿವಾಚಾರ್ಯರು ಭಾಗವಹಿಸಲಿದ್ದಾರೆ.ಕಾರ್ಯಕ್ರಮವನ್ನು ಮಾಶಾಳದ ಶ್ರೀ ಸಿದ್ದರಾಮೇಶ್ವರ ದೇವಸ್ಥಾನದ ಅವರಣದಲ್ಲಿ ಆಯೋಜನೆ ಮಾಡಲಾಗಿದ್ದು ಹಾಗಾಗಿ ಈ ರಾಷ್ಟ ಧರ್ಮ ಜಾಗೃತಿ ಸಮಾವೇಶ ಹಾಗೂ ಗುರುವಂದನಾ ಕಾರ್ಯಕ್ರಮಕ್ಕೆ ಎಲ್ಲ ಜಿಲ್ಲೆಯ ಹಾಗೂ ತಾಲೂಕಿನ ಮತ್ತು ಸುತ್ತಮುತ್ತಲಿನ ಎಲ್ಲ ಗ್ರಾಮದ ಸಮಸ್ತ ಸದ್ಭಕ್ತಮಂಡಳಿ ಹಾಗೂ ರಾಷ್ಟಪ್ರೇಮಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕರೆ ನೀಡಿದರು

# ಕಮಲ ಹಾಸನ್ ಪ್ರತಿ ಕೃತಿ ದಹಿಸಿ ಪ್ರತಿಭಟನೆ

ಕಲಬುರಗಿ:ಮೇ.30: ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಬೃಹತ್ ಪ್ರತಿಭಟನೆ ನಡೆಸಲಾಯಿತು

ಕಲ್ಬುರ್ಗಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಆನಂದ್ ದೊಡ್ಮನಿ ಅವರು ನಟ ಕಮಲ್ ಹಾಸನ್ ಪ್ರತಿಕೃತಿ ದಹಿಸಿ ಪ್ರತಿಭಟನೆ ಮಾಡಿ

ಕಮಲ್ ಹಾಸನ್ ಭಾವ ಚಿತ್ರಕ್ಕೆ ತುಳಿದು ಆಕ್ರೋಶ ವ್ಯಕ್ತಪಡಿಸಿದರು.



ಕಮಲ್ ಹಾಸನ್ ಅವರ ಥಗ್ ಲೈಫ್' ಸಿನಿಮಾ ಕಲಬುರಗಿಯಲ್ಲಿ ಬಿಡುಗಡೆಯನ್ನು ಕನ್ನಡಿಗರ ಭಾವನೆಗಳಿಗೆ ಧಕ್ಕೆತರುವಂತೆ, ತಮಿಳು ಭಾಷೆಯಿಂದ ಕನ್ನಡ ಭಾಷೆಯ ಉಗಮವಾಯಿತು ಎಂಬ ತಪ್ಪು ಮತ್ತು ದುರುದೇಶಪೂರಿತ ಹೇಳಿಕೆಯನ್ನು ನಟ–ರಾಜ–ಕಾರಣಿ ಕಮಲ್ ಹಾಸನ್ ಅವರು ನೀಡಿದ್ದಾರೆ. ಈ ಸುಳ್ಳು ಮತ್ತು ಆಧಾರರಹಿತ ಹೇಳಿಕೆಯು ಕನ್ನಡ ಭಾಷೆಯ ಶ್ರೀಮಂತ ಇತಿಹಾಸ, ಸಂಸ್ಕೃತಿ ಮತ್ತು ಸ್ವಾಭಿಮಾನಕ್ಕೆ ತೀವ್ರ ಆಘಾತವನ್ನುಂಟು ಮಾಡಿದೆ. ಕನ್ನಡಿಗರಿಂದ ತೀವ ಖಂಡನೆ ಮತ್ತು ವಿರೋಧ ವ್ಯಕ್ತವಾದರೂ, ಕಮಲ್ ಹಾಸನ್ ಅವರು ತಮ್ಮ ತಪ್ಪನ್ನು ಒಪ್ಪಿಕೊಂಡು ಕ್ಷಮೆಯಾಚಿಸದೆ, ತಮ್ಮ ಹೇಳಿಕೆಗೆ ಬದ್ಧರಾಗಿರುವುದು ಕನ್ನಡಿಗರ ಆಕ್ರೋಶವನ್ನು ಮತ್ತಷ್ಟು ಹೆಚ್ಚಿಸಿದೆ.

ಕನ್ನಡ ಭಾಷೆ ಮತ್ತು ಸಂಸ್ಕೃತಿಯ ರಕ್ಷಣೆಗಾಗಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ರಕ್ಷಣಾ ವೇದಿಕೆಯು, ಕಮಲ್ ಹಾಸನ್ ಅವರ ಈ ಧೋರಣೆಯನ್ನು ತೀವ್ರವಾಗಿ ಖಂಡಿಸುತ್ತವೆ ಎಂದರು ಕರ್ನಾಟಕ ರಕ್ಷಣಾ ವೇದಿಕೆ ಪದಾಧಿಕಾರಿಗಳು ಉಪಸ್ಥಿತರಿದ್ದರು

ಕರ್ನಾಟಕ ಸರ್ಕಾರ
(ಮೀನುಗಾರಿಕೆ ಇಲಾಖೆ)
ಮೀನುಗಾರಿಕೆ ಸಹಾಯಕ ನಿರ್ದೇಶಕರು, ಕಛೇರಿ, ಬಸವಕಲ್ಯಾಣ
(ಸ್ಥಳ:- ತಾಲೂಕ ಪಂಚಾಯತ ಆವರಣ ಬಸವಕಲ್ಯಾಣ:-585327 )

ಆದೇಶ ಸಂಖ್ಯೆ: ಪಸಮೀ125/ಮಿಇಇ/2013 ಬೆಂಗಳೂರು ದಿನಾಂಕ;21-02-2014

ಅನುಬಂಧ-08

ಸರ್ಕಾರಿ ಸ್ವಾಮ್ಯದ ಜಲಸಂಪನ್ಮೂಲಗಳ ಮೀನುಪಾಶುವಾರು ಹಕ್ಕನ್ನು ನೇರಗುತ್ತಿಗೆ ಮುಂಖಾತರ ವಿಲೇವಾರಿ ಮಾಡುವ ಬಗ್ಗೆ ಪ್ರಟಕಣೆ

ಸಂಖ್ಯೆ.ಮೀ ಸ.ನಿ ಬ./ಹಗುಪ/ನೇಗು/01/2025-26 ದಿನಾಂಕ 22-05-2025.

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೆನಂದರೆ ಬೀದರ ಜಿಲ್ಲೆಬಸವಕಲ್ಯಾಣ,ಹುಲಸೂರ.ಹುಮನಾಬಾದ ,ಮತ್ತು ಚಿಟ್ಟಗುಪ್ಪಾ ತಾಲೂಕಗಳ ಈ ಕೆಳಕಂಡ ಜಲಸಂಪನ್ಮೂಲಗಳ ಮೀನುಪಾಶುವಾರು ಹಕ್ಕನ್ನು2025-26 ನೇ ಸಾಲಿ ಮೀನುಗಾರಿಕೆ ಫಸಲಿ ವರ್ಷದಿಂದ 29-30 ನೇ ಸಾಲಿನ ಫಸಲಿನ ವರ್ಷದವರೆಗೆ(ಅಂದರೆ) ದಿನಾಂಕ 01-07-2030 ರವರೆಗೆ ಗರಿಷ್ಟ ಐದು ವರ್ಷಗಳ ಅವಧಿಗೆ ಸರಕಾರದ ನಿಯಮಗಳ ಮೇರೆಗೆ ಅರ್ಹ ಮೀನುಗಾರರ ಸಹಕಾರ ಸಂಘ/ಮೀನುಗಾರರ ಉತ್ಪಾದಕರ ಸಂಘಕ್ಕೆನೇರಗುತ್ತಿಗೆಗ ಮೂಲಕ ಈ ಕೆಳಗೆ ನಮೂದಿಸಿರುವ ದಿನಾಂಕದಂದು ಮತ್ತು ವೇಳೆಯಲ್ಲಿ ಸರ್ಕಾರದ ಮೀನುಗಾರಿಕೆ ಇಲಾಖೆಯ ಷರತ್ತು ಮತ್ತು ನಿಬಂಧನೆಗೊಳಪಟ್ಟಂತೆ ವಿಲೇವಾರಿ ಮಾಡಲಾಗುವುದು.

**ಮೀನುಪಾಶುವಾರು ಹಕ್ಕನ್ನು ವಿಲೇವಾರಿ ಮಾಡಲು ಪ್ರಸ್ತಾಪಿಸಿರುವ ಜಲಸಂಪನ್ಮೂಲಗಳಕೆರೆ/ಜಲಾಶಯ ನದಿ ಬಾಗ ವಿವರ**

| ಕ್ರಂ | ಜಲಸಂಪನ್ಮೂಲದ ಹೆಸರು | ತಾಲೂಕ | ಜಲವಿಸ್ತೀರ್ಣ ಹೆ,ಗಳಲ್ಲಿ | ಅಚ್ಚುಕಟ್ಟು ಪ್ರಹೇಗಳಲ್ಲಿ | ಭದ್ರುತಾ ಠೇವಣೆ ಮೊತ್ತ ರೂ.ಗಳಲ್ಲಿ | ಗುತ್ತಿಗೆ ಮೊತ್ತ ರೂ.ಗಳಲ್ಲಿ | ಷರಾ |
|---|---|---|---|---|---|---|---|
| 01 | ನಾರಾಯಣಪೂರ ಕೆರೆ | ಬಸವಕಲ್ಯಾಣ | 84 ಹೆ. | 77 | 8294 | 33177 | |
| 02 | ಬೇಟ್ಟಬಾಲಕುಂದಾ ಕೆರೆ | ,, | 1060 | 141.58 | 12471 | 49883 | |
| 03 | ಪರ್ತಾಪೂರ ಕೆರೆ | ,, | 77 | 33.2 | 3136 | 12542 | |
| 04 | ತಿಪೂರಾಂತ ಕೆರೆ | ,, | 144 | 90 | 7929 | 31714 | |
| 05 | ಸೈದಾಪೂರ ಕೆರೆ | ,, | 260 | 39.5 | 1733 | 6933 | |
| 06 | ಹಂದ್ರಾಳ ಕೆರೆ | ,, | 40 | 39.50 | 1500 | 6000 | |
| 07 | ಮುಡಬೀ ಕೆರೆ | ,, | 150 | 19 | 1250 | 5000 | |
| 08 | ಮೀರಖಲ್ ಕೆರೆ | ಹುಲಸೂರ | 79 | 5.99 | 1217 | 4867 | |
| 09 | ಹಳ್ಳಿಖೇಡ ಕೆರೆ | ಹುಮನಾಬಾದ | 258 | 40 | 1824 | 7297 | |
| 10 | ಚೀನಕೇರಾ ಕೆರೆ | ,, | 71 | 5.22 | 512 | 2050 | |
| 11 | ಫಾತ್ಮೀಮಾಪೂರ ಕೆರೆ | ಚಿಟ್ಟಗುಪ್ಪಾ | 167 | 14.4 | 902 | 3606 | |
| 12 | ಮೀನಕೇರಾ ಕೆರೆ | ,, | 71 | 19 | 712 | 2850 | |
| 13 | ಬನ್ನಳೀ ಕೆರೆ | ,, | 154 | 21.23 | 796 | 3184 | |
| 14 | ಚಾಂಗಲೇರಾ ಕೆರೆ | ಚಿಟ್ಟಗುಪ್ಪಾ | 175 | 30 | 13072 | 52287 | |
| 15 | ಬೇಳಕೇರಾ ಕೆರೆ | ,, | 266 | 37 | 1642 | 6566 | |

ಮೇಲಕಡ ಜಲಸಂಪನ್ಮೂಲಗಳ ಮೀನುಪಾಶುವಾರು ಹಕ್ಕನ್ನು ಅನುಬಂಧ 09 ರ ಪ್ರಕಾರ ಅರ್ಜಿ ಪಡೆಯಲು ಇಚ್ಚಿಸಿರುವ ಅರ್ಹ ಮೀನುಗಾರರ ಸಹಕಾರ ಸಂಘ/ಮೀನು ಉತ್ಪಾದಕರ ಸಂಘ FPO )ಗಳಲ್ಲಿ ಮಾತ್ರ ನಿಗದಿತ ನಮೂನೆಯಲ್ಲಿ ದಿನಾಂಕ 10-06-2025 ರ ಒಳಗಾಗಿ ಕಛೇರಿಯ ವೇಳೆಯಲ್ಲಿ ಪ್ರಸ್ತಾವನೆ ಸಲ್ಲಿಸತಕ್ಕದು ನಿಗದಿತ ಅವಧಿ ನಂತರ ಸಲ್ಲಿಸುವ ಅರ್ಜಿಯನ್ನು ಪರಿಗಣಿಸುವುದಿಲ್ಲ.ಗುತ್ತಿಗೆ ಪಡೆಯಲು ಸಲ್ಲಿಸಬೇಕಾದ್ ಅರ್ಜಯನ್ನು (ಅನುಬಂಧ -09 ಷರತ್ತು ಮತ್ತು ನಿಬಂಧಗಳು ಅನುಬಂಧ -11 ಗುತ್ತಿಗೆದಾರರು ಬರೆದುಕೊಡಬೇಕಾದ ಗುತ್ತಿಗೆ ಕರಾರಿನ ಮುಚ್ಚಳಿಕೆ ಪತ್ರದ ಅನುಬಂಧ 10 ಪ್ರತಿಯನ್ನು ಕಛೇರಿಯ ವೇಳೆಯಲ್ಲಿ ಪಡೆಯಬಹುದು.( ವಿಶೇಷ ಸೂಚನೆ )ಹೆಚ್ಚಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು ಕಛೇರಿ ಬಸವಕಲ್ಯಾಣ ರವರನ್ನು ಸಂಪರ್ಕಿಸಬಹುದು.

ಮೀನುಗಾರಿಕೆ ಸಹಾಯಕ ನಿರ್ದೇಶಕರು
ಬಸವಕಲ್ಯಾಣ

ಪ್ರತಿ

1) ಮಾನ್ಯ ಮೀನುಗಾರಿಕೆ ನಿರ್ದೇಶಕರು ಬೆಂಗಳೂರ ರವರ ಮಾಹಿತಿಗೆ.
2) ಮೀನುಗಾರಿಕೆ ಉಪನಿರ್ದೇಶಕರು ಬೀದರ ರವರ ಮಾಹಿತಿಗೆ .
3) ಮೀನುಗಾರಿಕೆ ಜಂಟಿ ನಿರ್ದೇಶಕರು ಬಳ್ಳಾರಿ ರವರ ಮಾಹಿಗೆ.
4) ಮೀನುಗಾರರಸಹಾಕರಸಂಘಗಳಿಗೆ ,ಮೀನು ಉತ್ಪಾದಕರ FPO ರವರ ಮಾಹಿತಿಗೆ.
5) ಕಛೇರಿ ಕಡತಕ್ಕೆ.

# ಕಸಾಪ 111ನೇ ಸಂಸ್ಥಾಪನಾ ದಿನಾಚರಣೆ

# ಕನ್ನಡಿಗರನ್ನು ಒಗ್ಗೂಡಿಸುವ ಕಾರ್ಯ ಕಸಾಪ ಮಾಡುತ್ತಿದೆ:ಬಿರಾದಾರ್





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಕನ್ನಡಿಗರ ಹಿತ ಕಾಪಾಡುವುದು, ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ, ಕಲೆ, ನೆಲ, ಜಲ ಸಂರಕ್ಷಣೆ, ಇವುಗಳ ಬೆಳವಣಿಗೆ, ಕನ್ನಡ ಗ್ರಂಥಗಳನ್ನು ಪ್ರಕಟಿಸುವುದು, ಸಮ್ಮೇಳನಗಳ ಆಯೋಜನೆ, ಜನಜಾಗೃತಿ ಮೂಡಿಸುವ ಧ್ಯೇಯೋದ್ದೇಶಗಳೊಂದಿಗೆಸದಾಕಾಲ ಕಾರ್ಯೋನ್ಮುಖವಾದಕನ್ನಡಸಾಹಿತ್ಯ ಪರಿಷತ್ತು ಕನ್ನಡಿಗರ ಹೆಮ್ಮೆಯ, ಅಭಿಮಾನದ ಸಂಸ್ಥೆಯಾಗಿದೆ ಎಂದು ಲಕ್ಷ್ಮೀ ಬಿರಾದಾರ್ ಹೇಳಿದರು. ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ 111ನೇ ಸಂಸ್ಥಾಪನಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು,ನಾಡು-ನುಡಿ ಒಳಿತಿಗಾಗಿ ವೈಶಿಷ್ಟಪೂರ್ಣ ಕಾರ್ಯಕ್ರಮಗಳನ್ನು, ಸಮ್ಮೇಳನಗಳನ್ನುಆಯೋಜಿಸಿ ಜನ ಸಾಮಾನ್ಯರು ಕನ್ನಡ ಕಾರ್ಯಕ್ರಮಗಳಲ್ಲಿಭಾಗವಹಿಸುವ, ಕನ್ನಡಿಗರನ್ನು ಒಗ್ಗೂಡಿಸುವ ಕಾರ್ಯ ಮಾಡುತ್ತಿದೆ.ರಾಜ್ಯ,ಜಿಲ್ಲೆ, ತಾಲೂಕು,ಹೋಬಳಿ ಮಟ್ಟದಲ್ಲಿ ಕಸಾಪ ಘಟಕಗಳಿವೆ. ದೇಶ ವಿದೇಶಗಳಲ್ಲಿಯೂ ಕನ್ನಡ ಪರ ಕಾರ್ಯಕ್ರಮಗಳು ನಡೆಯುತ್ತಿವೆ ಎಂದು ಹೇಳಿದರು.

ಕಾಲೇಜಿನ ಪ್ರಾಂಶುಪಾಲ ಡಾ. ಜಯಕುಮಾರ್ ಸಿಂಧೆ ಮಾತನಾಡಿ, ಕನ್ನಡ ಭಾಷೆ ಬೆಳವಣಿಗೆಗೆ ಕಂಕಣ ಬದ್ಧವಾಗಿ ಕನ್ನಡ ಸಾಹಿತ್ಯ ಪರಿಷತ್ತು ನಿರಂತರವಾಗಿಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ಸಂತೋಷದ ಸಂಗತಿ.ಶಾಲಾ,ಕಾಲೇಜುಗಳಲ್ಲಿಯೂ ಕಾರ್ಯಕ್ರಮಗಳನ್ನುಹಮ್ಮಿಕೊಂಡು ಶಿಕ್ಷಕರು, ಶಾಲಾ ಮಕ್ಕಳು ಕನ್ನಡ ಭಾಷಾಭಿಮಾನ ಬೆಳೆಸಿಕೊಂಡು ಮಾತೃಭಾಷೆಮಹತ್ವಅರಿಯುವಂತೆ ಕಸಾಪ ಒಳ್ಳೆಯ ಕಾರ್ಯ ಮಾಡುತ್ತಿದೆ. ಸಾಧಕರನ್ನು, ಹಿರಿಯ ಸಾಹಿತಿಗಳನ್ನು ಗೌರವಿಸುವುದು. ಕೃತಿಗಳನ್ನು ಪ್ರಕಟಿಸುವುದು ಹೀಗೆತಾಲೂಕಿನಲ್ಲಿ ಸಿಂಧೆಯವರ ನೇತೃತ್ವದಲ್ಲಿ ಕಸಾಪ ಕ್ರಿಯಾಶೀಲವಾಗಿ ಕಾರ್ಯವಾಗುತ್ತಿವೆಎಂದುಹೇಳಿದರು. ನಮ್ಮ ಮಹಾವಿದ್ಯಾಲಯದಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಜನ ಪ್ರತಿನಿಧಿಗಳಿಗೆ ಮತ್ತುಅಧಿಕಾರಿಗಳಿಗೆತಿಳಿಸಿದ್ದೇವೆ. ಶೀಘ್ರದಲ್ಲಿ ಒದಗಿಸಿಕೂಡಬೇಕು ಎಂದು ಮನವಿ ಮಾಡಿದರು. ಉಪನ್ಯಾಸಕ ಶಾಂತಕುಮಾರ ಪಾಟೀಲ್ ಮಾತನಾಡಿ,ಕನ್ನಡ ಸಾಹಿತ್ಯಪರಿಷತ್ತಿಗೆ 111 ವರ್ಷಗಳ ಸಂಭ್ರಮ. ಕನ್ನಡ ನಾಡು, ನುಡಿ, ಸಂಸ್ಕೃತಿ ರಕ್ಷಣೆಗಾಗಿ 1915ರಲ್ಲಿ ಆಗಿನ ಮೈಸೂರು ಅರಸರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ಕಾಳಜಿ ವಹಿಸಿ ಕನ್ನಡಿಗರ ಪ್ರಾತಿನಿಧಿಕಸಂಸ್ಥೆಯಾಗಿ ಪರಿಷತ್ ಸಂಸ್ಥಾಪನೆಗೊಳ್ಳಲು ಪ್ರಮುಖ ಕಾರಣರಾಗಿದ್ದರು. ಆಗಿನಿಂದ ಈಗಿನವರೆಗೂಹಲವುಮಹನೀಯರು ಕನ್ನಡ ಕಟ್ಟುವ ಕಾರ್ಯದಲ್ಲಿ ತೊಡಗಿ ಕನ್ನಡ ನಾಡು, ನುಡಿ ಬೆಳವಣಿಗೆಗೆ ನೆರವಾಗಿದ್ದಾರೆ ಎಂದು ಹೇಳಿದರು. ನಗರ ಘಟಕ ಅಧ್ಯಕ್ಷ ರಾಜಕುಮಾರ ಆರ್. ಹಡಪದ ಮಾತನಾಡಿ, ಚಿಟಗುಪ್ಪಪ್ರಥಮ ದರ್ಜೆ ಕಾಲೇಜು ಮಾದರಿ ಕಾಲೇಜು ಮಾಡಲು ಸರ್ವರ ಸಹಕಾರ ಅಗತ್ಯವಾಗಿದೆ. ನೂತನ ಪ್ರಾಂಶುಪಾಲ ಡಾ. ಜಯಕುಮಾರ್ ಸಿಂಧೆ ಅವರು ಅಧಿಕಾರ ವಹಿಸಿಕೊಂಡ ಮೇಲೆ ಮಹಾವಿದ್ಯಾಲಯದಲ್ಲಿ ಹೊಸ ಬದಲಾವಣೆ ಆಗಿದೆ, ಚಿಟಗುಪ್ಪ ತಾಲೂಕಿನಗ್ರಾಮೀಣಪ್ರದೇಶದಿಂದ ನೂರಾರು ವಿದ್ಯಾರ್ಥಿಗಳು ಮಹಾವಿದ್ಯಾಲಯಕ್ಕೆ ಶಿಕ್ಷಣ ಪಡೆಯಲು ಬರುತ್ತಿದ್ದಾರೆ ಕಾಲೇಜಿಗೆಬರಲು ತೀವ್ರತೊಂದರೆ ಅನುಭವಿಸುತ್ತಿದ್ದಾರೆ. ಕೆಕೆಆರ್ ಟಿಸಿ ಅವರು ವಿದ್ಯಾರ್ಥಿಗಳಿಗೆ ಕಾಲೇಜಿಗೆ ಬರಲು ಪ್ರತ್ಯೇಕ ಬಸ್ಸಿನ ವ್ಯವಸ್ಥೆ ಮಾಡಬೇಕೆಂದು ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಅವರಿಗೆ ಮನವಿ ಮಾಡಿದ್ದರು. ವಿದ್ಯಾರ್ಥಿಗಳಲ್ಲಿ, ಕನ್ನಡ ಭಾಷೆಯ ಬಗ್ಗೆ ಗೌರವ ಇರಬೇಕು ಕನ್ನಡ ಭಾಷೆಗೆ ಅನ್ಯಾಯವಾದಗಾ ವಿದ್ಯಾರ್ಥಿಗಳು ಕೆಚ್ಚೆದೆಯಿಂದ ಹೋರಾಟ ಮಾಡಲು ಸಿದ್ದರಾಗಿರಬೇಕು ಎಂದು ಹೇಳಿದರು. ಕಸಾಪ ಉಪಾಧ್ಯಕ್ಷ ಮಹಮ್ಮದ್ ಅಸ್ಲಾಂಮಿಯಾ ಮಾತನಾಡಿ, ಕನ್ನಡ ನಾಡು, ನುಡಿ, ನೆಲ, ಜಲ, ಭಾಷೆಗಾಗಿ ಎಲ್ಲರೂ ಶ್ರಮಿಸೋಣ ಎಂದು ಹೇಳಿದರು. ಕಸಾಪ ಅಧ್ಯಕ್ಷ ಅನೀಲಕುಮಾರ ಸಿಂಧೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕನ್ನಡ ಭವನ ನಿರ್ಮಾಣಕ್ಕೆ ಈಗಾಗಲೇ ನಿವೇಶನ ಮಂಜೂರಾಗಿದೆ. ಕಳೆದ 2ನೇ ಕನ್ನಡ ಸಾಹಿತ್ಯ ಪರಿಷತ್ತು ಸಮ್ಮೇಳನದಲ್ಲಿ ಶಾಸಕ ಡಾ. ಸಿದ್ದು ಪಾಟೀಲ್ 20 ಲಕ್ಷ ರೂಪಾಯಿ,ಎಂಎಲ್ಸಿ ಡಾ. ಚಂದ್ರಶೇಖರ್ ಪಾಟೀಲ್ 10ಲಕ್ಷ ರೂಪಾಯಿ ನೀಡುವುದಾಗಿ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು. ಅತೀ ಶೀಘ್ರದಲ್ಲೇ ಭವನ ನಿರ್ಮಾಣ ಮಾಡಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲುಕಾಧ್ಯಕ್ಷ ರಾಜಪ್ಪಜಮಾದರ್,ಸಾವಿತ್ರಿಬಾಯಿ ಫುಲೇ ಶಿಕ್ಷಕಿಯರ ಸಂಘದ ತಾಲೂಕಾಧ್ಯಕ್ಷೆ ಪ್ರೇಮಿಳಾ ರೆಡ್ಡಿ, ಕಸಾಪ ಗೌರವಾಧ್ಯಕ್ಷ ಮಹಾರುದ್ರಪ್ಪ ಆಣದೂರ, ಯುವ ಘಟಕ ಅಧ್ಯಕ್ಷ ದಿಲೀಪಕುಮಾರ್ ಪಸಾರೆ, ಉಪಾಧ್ಯಕ್ಷರಾದ ಸಂಜೀವನ ಭೋಸ್ಲೆ, ಗುಂಡಪ್ಪ ಕೋರೆ, ಅಲ್ಪಸಂಖ್ಯಾತ ಪ್ರತಿನಿಧಿ ಹಸನ್ ಲಚ್ಚಿಕೆ, ಸೈಯದ್ ಅಜೀಮ್, ರವಿ ಪಡಗಿ, ಮಲ್ಲಿಕಾರ್ಜುನ ತಿರಲಾಪುರ್,ಬಾಲಾಜಿ ಪಾಟೀಲ್, ಡಾ. ಚಿತ್ರಶೇಖರ್ ಚಿರಳ್ಳಿ, ಡಾ. ನಮೋಶಿ ಉಮೇಶ, ಪವನಕುಮಾರ, ಡಾ. ಗೀತಾ, ಡಾ. ಪಾರ್ವತಿ, ಡಾ.ಹಲಿಮಾ, ಸೇರಿದಂತೆ ಕನ್ನಡಾಭಿಮಾನಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಲಕ್ಷ್ಮಿಕಾಂತ ತಮ್ಮನೋರ್ ನಿರೋಪಿಸಿ ವಂದಿಸಿದರು.



ಕನ್ನಡ ಸಾಹಿತ್ಯ ಪರಿಷತ್ತಿನ 111ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮಕ್ಕೆ ಪ್ರತಿಕ್ಷ ಹಾಗೂ ಪರೋಕ್ಷವಾಗಿ ಸಹಕಾರಿಸಿದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಿಗೂ, ಕನ್ನಡ ಪರಿಷತ್ತಿನ ಅಜೀವ ಸದಸ್ಯರಿಗೂ ಹಾಗೂ ಕನ್ನಡ ಅಭಿಮಾನಿಗಳು ಕಾರ್ಯಕ್ರಮಕ್ಕೆ ಆಗಮಿಸಿ ಯಶಸ್ವಿಗೊಳಿಸಿದಕ್ಕೆ ಧನ್ಯವಾದಗಳು.

– ಅನೀಲಕುಮಾರ ಎಂ.ಸಿಂಧೆ
ಕಸಾಪ ತಾಲ್ಲೂಕಾಧ್ಯಕ್ಷ ಚಿಟಗುಪ್ಪ

# ಕರ್ನಾಟಕ ಸಮತಾ ಸೈನಿಕ ದಳದ ಹುಮನಾಬಾದ ತಾಲ್ಲೂಕು ಅಧ್ಯಕ್ಷರಾಗಿ ಚಂದ್ರಕಾಂತ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಕರ್ನಾಟಕ ಸಮತಾ ಸೈನಿಕ ದಳದ ಹುಮನಾಬಾದ ತಾಲ್ಲೂಕು ಅಧ್ಯಕ್ಷರಾಗಿ ಚಂದ್ರಕಾಂತ ಪೀರಪ್ಪಾ ನಿಟ್ಟೂರೆ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಜರುಗಿದ ಪದಾಧಿಕಾರಿಗಳ ನೇಮಕ ಕಾರ್ಯಕ್ರಮದಲ್ಲಿ ಕರ್ನಾಟಕ ಸಮತಾ ಸೈನಿಕ ದಳದ ಜಿಲ್ಲಾಧ್ಯಕ್ಷ ಶಂಕರ ಫಿರಂಗೆ ತಿಳಿಸಿದರು. ಕಾರ್ಯಾಧ್ಯಕ್ಷರಾಗಿ ರಮೇಶ ಸಿಂಧೆ, ಗೌರವಾಧ್ಯಕ್ಷರಾಗಿ ಮಹಾಚಿತೇಶ ಕುಂದನ್, ಉಪಾಧ್ಯಕ್ಷರಾಗಿ ನಾಗೇಶ ಚವ್ಹಾಣ, ಪ್ರಧಾನ ಕಾರ್ಯದರ್ಶಿಯಾಗಿ ರಘುವೀರ ಹಿರೋಳೆ, ಜಂಟಿ ಕಾರ್ಯದರ್ಶಿಯಾಗಿ ಓಂಕಾರ ಸಿಂಧೆ, ಸಂಘಟನಾ ಕಾರ್ಯದರ್ಶಿಯಾಗಿ ಸಂಜೀವಕುಮಾರ ಚವ್ಹಾಣ, ಜಂಟಿ ಸಂಘಟನಾ ಕಾರ್ಯದರ್ಶಿಯಾಗಿ ದೇವಾನಂದ ಗಾಯಕವಾಡ, ಸಲಹೆಗಾರರಾಗಿ ಧರ್ಮರಾಯ ಘಾಂಗ್ರೆ, ಶಾಲಿವಾನ ರೋಗನ್, ಸಂಜೀವಕುಮಾರ ಜಂಜೀರ್, ಶಾಂತಲಿಂಗ ಸಾಗರ, ಪ್ರಭು ಮಾಲೆ, ಸದಸ್ಯರಾಗಿ ಉತ್ತಮಕುಮಾರ ಕೀರ್ತಿಕರ್, ಅರ್ಜುನ ಜಂಜೀರ ಇವರುಗಳನ್ನುಆಯ್ಕೆಮಾಡಲಾಗಿದೆ ಎಂದು ಜಿಲ್ಲಾಧ್ಯಕ್ಷ ಶಂಕರ ಫಿರಂಗೆ ಹಾಗೂ ಜಿಲ್ಲಾ ಕಾರ್ಯಾಧ್ಯಕ್ಷ ಕಾಶಿನಾಥ ಕಟ್ಟಿಮನಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಬುದ್ಧ, ಬಸವ ಅಂಬೇಡ್ಕರ್ ಅವರ ತತ್ವ ಸಿದ್ಧಾಂತಗಳಿಗೆ ಬದ್ಧರಾಗಿ, ಶೋಷಿತ ವರ್ಗದ ಧ್ವನಿಯಾಗಿ ಸಂಘಟನೆಯನ್ನು ಹುಟ್ಟುಹಾಕಲಾಗಿದೆ. ಸಂಘಟನೆ ಶೋಷಿತ ಪರವಾಗಿ ಕೆಲಸ ಮಾಡಲಿದೆ ಎಂದರು. ರಾಜ್ಯದ ಎಲ್ಲಾ ಜಿಲ್ಲೆ, ತಾಲ್ಲೂಕುಗಳಲ್ಲೂ ಇರುವ ಏಕೈಕ ಸಂಘಟನೆ ಕರ್ನಾಟಕ ಸಮತಾ ಸೈನಿಕ ದಳ ನಾವೇಲ್ಲರೂ ಅಂಬೇಡ್ಕರ್ ಋಣ ತೀರಿಸಲು ಬಂದಿದ್ದೇವೆ, ಹೊಟ್ಟೆ ಪಾಡಿಗೆ ನಮಗೆ ಒಳ್ಳೆಯ ಉದ್ಯೋಗ ಇದೆ. ಆದರೆ ಸಂಘಟನೆಯ ಬಲವರ್ಧನೆಗಾಗಿ ಪ್ರತಿ ಹಳ್ಳಿ ಹಳ್ಳಿಯಲೂ ಕರ್ನಾಟಕ ಸಮತಾ ಸೈನಿಕ ದಳ ಶಾಖೆ ತರೆಯುತ್ತದ್ದೇವೆ ಎಂದರು. ತಾಲ್ಲೂಕಾ ಅಧ್ಯಕ್ಷ ಚಂದ್ರಕಾಂತ ನಿಟ್ಟೂರೆ ಮಾತನಾಡಿ, ಸಂಘಟನೆ ನಾವು ಶಕ್ತಿಮಿರಿ ಬಲಪಡಿಸುತ್ತೇವೆ ಎಂದು ತಿಳಿಸಿದರು. ಈ ಸಂಘಟನೆಯನ್ನು ಒಗ್ಗಟ್ಟಾಗಿ ಹಗಲಿರಳನ್ನದೇ ಅಚ್ಚುಕಟ್ಟಾಗಿ ನಿಭಾಯಿಸುತ್ತೇವೆ ಎಂದು ಹೇಳಿದರು. ಈ ಸಭೆಯಲ್ಲಿ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ರೈಲ್ವೆ ಸೋಲಾಪೂರ ಬದಲಾಗಿ ಬೀದರ-ಹುಮನಾಬಾದ-ಕಲಬುರಗಿ ಮಾರ್ಗದಿಂದ ಹಾಸನಕ್ಕೆ ತಲುಪಿಸುವಂತೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಪಟ್ಟಣದಲ್ಲಿ ಹೊಸಾದಾಗಿ ರೈಲ್ವೆ ಷ್ಟೇಷನ್ ರಚನೆಯಾಗಿದ್ದು,ಚಾಲ್ತಿಯಲ್ಲಿರುವ ರೈಲ್ವೆ ಸ್ಟೇಷನ್ ಲೈನ್ ವಿದ್ಯುತ್ತೀಕರಣವಾಗಿದ್ದು, ಹುಮನಾಬಾದ ಪಟ್ಟಣವು ಮೂರು ರಾಜ್ಯಗಳನ್ನು ಒಟ್ಟುಗೂಡಿಸುವ ರಾಷ್ಟ್ರೀಯ ಹೆದ್ದಾರಿ ಹೊಂದಿದೆ. ಸಾಯಾಂಕಾಲ 6-30ರ ಸುಮಾರಿಗೆ ಹೋಗುವ ಸೋಲಾಪುರದಿಂದ ಕಲಬುರಗಿಗೆ ಹೆಚ್ಚಾಗಿ ಪ್ರಯಾಣಿಕರು ಬರುತ್ತಿಲ್ಲಾ. ಆದಕಾರಣ ಈ ರೈಲ್ವೆಯನ್ನು ಸೋಲಾಪೂರ ಬದಲಾಗಿಬೀದರ-ಹುಮನಾಬಾದ-ಕಲಬುರಗಿ ಮಾರ್ಗದಿಂದ ಹಾಸನಕ್ಕೆ ತಲುಪುವಂತೆ ಮಾಡಬೇಕೆಂದು ಜನಕಲ್ಯಾಣ ಸೇವಾ ಸಮಿತಿ ಅಧ್ಯಕ್ಷ ಕಾಶಿನಾಥ ವಾರದ್‌ರವರು ಇಂದು ರೈಲ್ವೆ ಮಂತ್ರಿಗಳಾದ ವಿ. ಸೋಮಣ್ಣಾರವರಿಗೆ ಮನವಿ ಪತ್ರ ಸಲ್ಲಿಸಲಿದ್ದಾರೆ ಎಂದು ಪತ್ರಿಕೆಗೆ ವಿನಂತಿಸಿದ್ದಾರೆ. ಹಾಗಯೇ ದಿನಾಲು ಬಸ್‌ನಿಂದ ಹೈದ್ರಬಾದಗೆ ವ್ಯಾಪಾರ ಮಾಡಲೇಂದು ಹೋಗಿ ಬರಲು ಸುಮಾರು 12 ಘಂಟೆ ಕಾಲ ವ್ಯಯವಾಗುತ್ತಿದ್ದ ಕಾರಣ ಜನರ ಈ ತೋಂದರೆ ತಪ್ಪಿಸಲು ಪ್ರಸ್ತುತ ಬೀದರ-ಹೈದ್ರಾಬಾದ ಇಂಟರ್‌ಸಿಟಿ ರೈಲ್ವೆ ಸಂಖ್ಯೆ:17009 ಬೀದರದಿಂದ ಮುಂಜಾನೆ ಸುಮಾರು 6-30ಕ್ಕೆ ಹೋಗುವ ಬದಲು ಸದರಿ ರೈಲ್ವೆಯು ಸುಮಾರು 6-00 ಗಂಟೆಗೆ ಹುಮನಾಬಾದದಿಂದ ಬೀದರ ಮುಖಾಂತರ ಹೈದ್ರಬಾದಗೆ ಹಾದು ಹೋದಲ್ಲಿ ಹುಮನಾಬಾದ ಪಟ್ಟಣದಿಂದ ಹೈದ್ರಾಬಾದಗೆ ಹೋಗುವ ವ್ಯಾಪರಸ್ಥರಿಗೆ ಅನಕೂಲವಾಗುತ್ತದೆ. ಹೀಗಾಗಿ ಸೋಲಾಪೂರ-ಹಾಸನ ರೈಲ್ವೆ ಸಂಖ್ಯೆ:11311 ಹಾಗೂ ಬೀದರ-ಹೈದ್ರಾಬಾದ ಇಂಟರ್‌ಸಿಟಿ ರೈಲ್ವೆ ಸಂಖ್ಯೆ:17009ಗಳನ್ನು ಕೇವಲ ಮಾರ್ಗಗಳ ಸ್ಥಳ ಬದಲಾಯಿಸಿಕೊಂಡರು ಸಹ ಯಾವುದೇ ರೀತಿಯಿಂದ ರೈಲ್ವೆ ಇಲಾಖೆಗೂ ಹಾನಿಯೂಗುವುದಿಲ್ಲಾ ಹಾಗೂ ಪ್ರಯಾಣಿಕರಿಗೆ ಸಾಹಾಯುವಾಗುತ್ತದೆಂದು ಜನಕಲ್ಯಾಣ ಸೇವಾ ಸಮಿತಿ ಹುಮನಾಬಾದ ಅಧ್ಯಕ್ಷರಾದ ಕಾಶಿನಾಥ ಗುರಪ್ಪಾ ವಾರದ ರೈಲ್ವೆ ಮಂತ್ರಿಗಳಾದ ವಿ. ಸೋಮಣ್ಣಾರವರಿಗೆ ಮನವಿ ಪತ್ರಸಲ್ಲಿಸಲಿದ್ದಾರೆ ಎಂದು ತಿಳಿಸಿದ್ದಾರೆ.

# ಬೆಂಗಳೂರಿನಲ್ಲಿ ವಿಶೇಷ ಚೇತನರ ಸಬಲೀಕರಣಕ್ಕಾಗಿ ಕೃತಕ ಬುದ್ಧಿಮತ್ತೆಯ ಕುರಿತು ರಾಷ್ಟ್ರೀಯ ಸಮ್ಮೇಳನ

ಮಲ್ಲಮ್ಮ ನುಡಿ ವಾರ್ತೆ

ಕೃತಕಬುದ್ಧಿಮತ್ತೆ(ಎ.ಐ.) ಜೀವನವನ್ನು ಪರಿವರ್ತಿಸುತ್ತಿದೆ ಮತ್ತು ಪ್ರಪಂಚದಾದ್ಯಂತ ಸಮಗ್ರ ಅಭಿವೃದ್ಧಿಗೆ ಕಾರಣವಾಗುತ್ತಿದೆ . ಕರ್ನಾಟಕದ ಬೆಂಗಳೂರಿನಲ್ಲಿ ಇಂದು ನಡೆದ ವಿಶೇಷಚೇತನರ ಸಬಲೀಕರಣಕ್ಕಾಗಿ ಎಐ ಕುರಿತಾದ ರಾಷ್ಟ್ರೀಯ ಸಮ್ಮೇಳನದ ಪ್ರಮುಖ ಸಂದೇಶ ಇದಾಗಿತ್ತು. ಈ ಕಾರ್ಯಕ್ರಮವು ಪ್ರಮುಖ ತಜ್ಞರು, ಸರ್ಕಾರಿ ಅಧಿಕಾರಿಗಳು, ತಂತ್ರಜ್ಞರು ಮತ್ತು ವಕೀಲರನ್ನು ಒಟ್ಟುಗೂಡಿಸಿ ಎಐ ವಿಶೇಷಚೇತನರಿಗೆ ಸುಲಭಲಭ್ಯತೆ ಮತ್ತು ಅವಕಾಶಗಳನ್ನು ಹೇಗೆ ಹೆಚ್ಚಿಸುತ್ತಿದೆ ಎನ್ನುವುದನ್ನು ಪ್ರದರ್ಶಿಸಿತು.

ಮುಖ್ಯವಾದ ಭಾಷಣ ಮಾಡುತ್ತಾ, ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಅಂಗವಿಕಲರ (ವಿಶೇಷಚೇತನರ) ಸಬಲೀಕರಣ ಇಲಾಖೆಯ(ಡಿ.ಇ.ಪಿ.ಡಬ್ಲ್ಯೂಡಿ) ಕಾರ್ಯದರ್ಶಿ ಶ್ರೀ ರಾಜೇಶ್ ಅಗರ್ ವಾಲ್ ಅವರು "ಕೃತಕ ಬುದ್ಧಿಮತ್ತೆಯಿಂದ ಎಲ್ಲರನ್ನೂ ಒಳಗೊಳ್ಳುವ ಹೊಸ ಯುಗ ಪ್ರಾರಂಭವಾಗಿದೆ" ಎಂದು ಹೇಳಿದರು. ಅವರ ಮುಖ್ಯ ಭಾಷಣವು ಆಳವಾದ ಕಲಿಕೆ, ರೊಬೊಟಿಕ್ಸ್ ಮತ್ತು ಕಂಪ್ಯೂಟರ್ ದೃಷ್ಟಿಯಲ್ಲಿನ ಪ್ರಗತಿ ಹಾಗು ವಿಶೇಷಚೇತನ ವ್ಯಕ್ತಿಗಳ ಜೀವನದ ಗುಣಮಟ್ಟವನ್ನು ಸುಧಾರಿಸುವಲ್ಲಿ ಅವುಗಳ ಸಾಮರ್ಥ್ಯವನ್ನು ಒತ್ತಿಹೇಳಿತು. ಸಮ್ಮೇಳನದಲ್ಲಿ, ಶ್ರೀ ಅಗರ್ವಾಲ್ ಅವರು ಎಐ ಮತ್ತು ಸುಲಭಲಭ್ಯತೆಯ ಮೇಲೆ ಕೇಂದ್ರೀಕರಿಸಿದ ನಾಲ್ಕು ಪ್ರಮುಖ ಉಪಕ್ರಮಗಳಿಗೆ ಚಾಲನೆ ನೀಡಿದರು :

1. ಮಿಷನ್ ಎಐ ಪ್ರವೇಶಸಾಧ್ಯತೆ (ಸುಲಭಲಭ್ಯತೆ)

2. ಮಿಷನ್ ಎಐ : ವಿಶೇಷಚೇತನರನ್ನು ಸಬಲೀಕರಣಗೊಳಿಸಲು ಸಹಾಯಕ ತಂತ್ರಜ್ಞಾನಗಳು ಮತ್ತು ಪರಿಕರಗಳಲ್ಲಿ ಎಐ ಅನುಷ್ಠಾನ

3. ರಾಷ್ಟ್ರೀಯ ವಿಶೇಷಚೇತರಿಗೆ ಬೆಂಬಲ ಎಐ ಚಾಟ್ ಬಾಟ್

4. ಯುನೈಟೆಡ್ ಬೆನಿಫಿಟ್ಸ್ ಇಂಟರ್ಫೇಸ್ (ಯು.ಬಿ.ಐ.)

ಸಹಾಯಕ ತಂತ್ರಜ್ಞಾನದಲ್ಲಿ ಅಗತ್ಯಕ್ಕೆ ತಕ್ಕಂತೆ ಅಭಿವೃದ್ಧಿಯಾಗುವ ಪರಿಹಾರಗಳನ್ನು ನೀಡುವ ಮೂಲಕ, ಅಂತರ್ಗತ ಡಿಜಿಟಲ್ ಪರಿಸರ ವ್ಯವಸ್ಥೆಗಳ ಸೃಷ್ಟಿಗೆ ಎಐ ಅನ್ನು ಬಳಸಿಕೊಳ್ಳುವ ಗುರಿಯನ್ನು ಈ ಧ್ಯೇಯಗಳು ಹೊಂದಿವೆ.

ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಅಂಗವಿಕಲರ (ವಿಶೇಷಚೇತನರ) ಸಬಲೀಕರಣ ಇಲಾಖೆಯ (ಡಿ.ಇ.ಪಿ.ಡಬ್ಲ್ಯೂ ಡಿ) , ಸಚಿವಾಲಯದ ಅಡಿಯಲ್ಲಿ ಕಾರ್ಯನಿರ್ವಹಿಸುವ ಮಿನಿ ರತ್ನ ಕೇಂದ್ರ ಸಾರ್ವಜನಿಕ ವಲಯದ ಉದ್ಯಮವಾದ ಭಾರತೀಯ ಕೃತಕ ಅಂಗಗಳ ಉತ್ಪಾದನಾ ನಿಗಮ (ಎ.ಎಲ್.ಐ.ಎಂ.ಕೊ.) ಸಹಯೋಗದೊಂದಿಗೆ ಸಮ್ಮೇಳನವನ್ನು ಜಂಟಿಯಾಗಿ ಆಯೋಜಿಸಲಾಗಿದೆ.

ಎ.ಎಲ್.ಐ.ಎಂ.ಕೊ.ದ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಶ್ರೀ ಪ್ರವೀಣ್ ಕುಮಾರ್ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು ಹಾಗು ಸಹಾಯಕ ತಂತ್ರಜ್ಞಾನ ಮತ್ತು ಅಂತರ್ಗತ ವಿನ್ಯಾಸದಲ್ಲಿ ನಾವೀನ್ಯತೆಗೆ ಸಂಸ್ಥೆಯ ಬದ್ಧತೆಯನ್ನು ಪುನರುಚ್ಚರಿಸಿದರು.

ಈ ಹೊಸ ಮೈಲಿಗಲ್ಲಿನ ಸಮ್ಮೇಳನವು ಕೃತಕ ಬುದ್ಧಿಮತ್ತೆಯು ಹೆಚ್ಚು ಅಂತರ್ಗತ ಮತ್ತು ಸುಲಭಲಭ್ಯವಾಗುವ ಭಾರತವನ್ನು ರಚಿಸುವಲ್ಲಿ ಹೇಗೆ ಸಾಮರ್ಥ್ಯವನ್ನು ಹೆಚ್ಚಿಸಲು ಕಾರಣವಾಗಬಹುದು ಎಂಬುದನ್ನು ಪ್ರದರ್ಶಿಸಿತು. ಇಂದು ಪ್ರದರ್ಶಿಸಲಾದ ಅಂತರ-ವಲಯ ಸಹಯೋಗವು ಲಕ್ಷಾಂತರ ವಿಶೇಷಚೇತನರಿಗೆ ತಂತ್ರಜ್ಞಾನ ಆಧಾರಿತ ಸಬಲೀಕರಣಕ್ಕೆ ದಾರಿ ಮಾಡಿಕೊಡುತ್ತದೆ.

ಈ ಕಾರ್ಯಕ್ರಮದಲ್ಲಿ ಶೈಕ್ಷಣಿಕ, ಉದ್ಯಮ ಮತ್ತು ಸರ್ಕಾರದ ಚಿಂತಕರು ಮತ್ತು




ಪ್ರವರ್ತಕರು ಭಾಗವಹಿಸಿದ್ದರು, ಅವರಲ್ಲಿ ಕೆಲವರು :

* ಪ್ರೊ. ವೇಣು ಗೋವಿಂದರಾಜು, ಅಮೆರಿಕದ ಬಫಲೋ ವಿಶ್ವವಿದ್ಯಾಲಯದ ಕಂಪ್ಯೂಟರ್ ವಿಜ್ಞಾನ ವಿಭಾಗದ ಖ್ಯಾತ ಪ್ರಾಧ್ಯಾಪಕರು (ವಿಡಿಯೋ ಕಾನ್ಫರೆನ್ಸ್ ಮೂಲಕ)
* ಪ್ರೊ. ಪಿ.ವಿ.ಎಂ. ರಾವ್ ಮತ್ತು ಪ್ರೊ. ರೋಹನ್ ಪಾಲ್, ಪ್ರಾಧ್ಯಾಪಕರು, ಐಐಟಿ ದೆಹಲಿ
* ಡಾ. ಬುದ್ಧ ಚಂದ್ರಶೇಖರ್, ಸಿಇಒ, ಅನುವಾಧಿನಿ
* ಶ್ರೀಮತಿ ಪ್ರಜ್ಞಾ ಮಿಶ್ರಾ, ಪಾರ್ಟನರ್ ಶಿಪ್ ಲೀಡ್, ಓಪನ್ ಎಐ – ಭಾರತ
* ಶ್ರೀ ಆಲೇಖ್ ಶರಣ್, ಮುಖ್ಯಸ್ಥರು, ಎಂಟರ್ಪ್ರೈಸ್ ಎಐ ಮತ್ತು ಸ್ಟ್ರಾಟಜಿ, ಸರ್ವಮ್ ಎಐ
* ಶ್ರೀ ಮನು ಚೋಪ್ರಾ, ಸಿಇಒ, ಕಾರ್ಯ ಇಂಕ್.
* ಶ್ರೀ ಸಂದೀಪ್ ಆಲೂರ್, ಸಿಟಿಒ , ಮೈಕ್ರೋಸಾಫ್ಟ್ ಇನ್ನೋವೇಶನ್ ಹಬ್, ಭಾರತ
* ಶ್ರೀಮತಿ ಚಂದ್ರಿಕಾ ಜೈನ್, ಮಾರ್ಕೆಟಿಂಗ್ ನಿರ್ದೇಶಕರು, ಲೆನೊವೊ
* ಶ್ರೀ. ಶೇಖರ್ ನಾಯ್ಕ್, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರು ಮತ್ತು ಇನ್ಕಲೂಷನ್ ಅಡ್ವೋಕೇಟ್, ಐಐಎಂ ಬೆಂಗಳೂರು
* ಶ್ರೀ ಅರ್ಷದ್ ಸಯ್ಯದ್, ಸಹ-ಸ್ಥಾಪಕ ಮತ್ತು ಚೀಫ್ ಬ್ಯುಸಿನೆಸ್ ಆಫೀಸರ್, ಸ್ಟ್ಯಾಕ್-ಜೆನ್
* ಡಾ. ಅನಂತಲಕ್ಷ್ಮಿ ವೆಂಕಟರಾಮನ್, ಸಿಇಒ, ಇಕ್ವಿಬೀಯಿಂಗ್ ಫೌಂಡೇಶನ್
* ಶ್ರೀ ಪ್ರತೀಕ್ ಮಾಧವ್, ಸಹ-ಸಂಸ್ಥಾಪಕ ಮತ್ತು ಸಿಇಒ , ಅಸಿಸ್-ಟೆಕ್ ಫೌಂಡೇಶನ್ (ಎಟಿ ಎಫ್)
* ಪ್ರೊ. ಅಮಿತ್ ಪ್ರಕಾಶ್, ಪ್ರೊಫೆಸರ್ ಮತ್ತು ಮುಖ್ಯಸ್ಥರು, ಮಾನವ-ಕೇಂದ್ರಿತ ಕಂಪ್ಯೂಟಿಂಗ್ ವಿಭಾಗ,ಐಐಐಟಿ ಬೆಂಗಳೂರು
* ಶ್ರೀಮತಿ ಅಮೃತಾ ಕಾಮತ್, ಪ್ರತಿನಿಧಿ, ಗೂಗಲ್ ಇಂಡಿಯಾ
* ಡಾ. ಏಕ್ ರೂಪ್ ಕೌರ್, ಕರ್ನಾಟಕ ಸರ್ಕಾರದ ಎಲೆಕ್ಟ್ರಾನಿಕ್ಸ್, ಐಟಿ, ಬಿಟಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಕಾರ್ಯದರ್ಶಿಗಳು
* ಶ್ರೀ ಅಭಿಷೇಕ್ ಸಿಂಗ್, ಹೆಚ್ಚುವರಿ ಕಾರ್ಯದರ್ಶಿ, ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಮತ್ತು ಮಹಾನಿರ್ದೇಶಕರು, ರಾಷ್ಟ್ರೀಯ ಮಾಹಿತಿ ಕೇಂದ್ರ (ಎನ್.ಐ.ಸಿ.) ನವದೆಹಲಿ.

# ಬೀಜ ವಿತರಣೆಗೆ ಸ್ಕ್ಯಾನಿಂಗ್; ರೈತರ ಆಕ್ರೋಶ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 30 : ಹುಮನಾಬಾದ ತಾಲ್ಲೂಕು ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರಿಗೆ ಬಿತ್ತನೆ ಬೀಜ ವಿತರಣೆಯಲ್ಲಿ ಕ್ಯೂಆರ್-ಕೋಡ್ ಸ್ಕ್ಯಾನ್ ಮಾಡುತ್ತಿರುವುದು ಸಮಯ ವ್ಯರ್ಥವಾಗುತ್ತಿದೆ ಎಂದು ರೈತರ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಹುಮನಾಬಾದ್ ಹಾಗೂ ಚಿಟಗುಪ್ಪ ತಾಲ್ಲೂಕಿನಲ್ಲಿ 6 ರೈತ ಸಂಪರ್ಕ ಕೇಂದ್ರಗಳು ಸೇರಿ ವಿಶೇಷವಾಗಿ ವಿವಿಧ ಗ್ರಾಮಗಳಲ್ಲಿ 9 ಕಡೆಗಳಲ್ಲಿ ರೈತರಿಗೆ ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತಿದೆ.

ಆದರೆ ರೈತರಿಗೆ ಬೀಜ ವಿತರಣೆ ಮಾಡುವ ಮೊದಲು ಬೀಜದ ಪ್ಯಾಕೇಟ್ ಮೇಲಿನ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಬೇಕು. ಕೆಲ ತಾಂತ್ರಿಕ ಸಮಸ್ಯೆಯಿಂದ ಬೀಜ ವಿತರಣೆಯಲ್ಲಿ ಸಮಯ ತೆಗೆದುಕೊಳ್ಳುತ್ತಿದೆ ಎಂಬುದು ರೈತರು ಅಸಮಾಧಾನ.

ರೈತರು ಖರೀದಿಸುವ ಬೀಜದ ಪ್ಯಾಕೇಟ್ ಮೇಲೆ ಕ್ಯೂಆರ್ ಕೋಡ್ ಇದೆ, ಇದನ್ನು ರೈತರ ಎಫ್ಐಡಿ ಸಂಖ್ಯೆ ಅಥವಾ ಆಧಾರ್ ಸಂಖ್ಯೆ ಹಾಕಿ ಸ್ಕ್ಯಾನ್ ಮಾಡಿದ ನಂತರ ಕಂಪ್ಯೂಟರ್‌ನಲ್ಲಿ ನೋಂದಣಿ ಆಗಿ ರೈತರಿಗೆ ರಸೀದಿ ಬರುತ್ತದೆ. ಇದರಿಂದ ಒಬ್ಬ ರೈತರಿಗೆ ಯಾವ ಕಂಪನಿ ಬೀಜ ನೀಡಲಾಗಿದೆ, ಯಾವ ಬೀಜ ನೀಡಲಾಗಿದೆ ಎಂಬುದು ಸೇರಿದಂತೆ ನಿಗದಿತ ಬೆಲೆ ದಾಖಲಾಗಿ, ಈ ಕುರಿರು ರೈತರ ದೂರವಾಣಿ ಸಂ-ಖ್ಯೆಗೆ ಸಂದೇಶವೂ ಬರುತ್ತಿದೆ. ಇದರಿಂದ ಬೇರೆ ವ್ಯಕ್ತಿಗಳು ರೈತರಿಗೆ ಮೋಸ ಮಾಡಲು ಸಾಧ್ಯವಾಗುವುದಿಲ್ಲ.

'ಮೊದಲು ಬಿತ್ತನೆ ಬೀಜ ತೆಗೆದುಕೊಳ್ಳಲು ಅರ್ಧ ಗಂಟೆ ಸರತಿ ಸಾಲಿನಲ್ಲಿ ನಿಂತಿದ್ದರೆ ನಮ್ಮ ಪಾಲಿನ ಬೀಜ ತೆಗೆದು-ಕೊಂಡು ಹೋಗಿ ಮತ್ತೆ ನಮ್ಮ ಕೆಲಸಗಳು ಮಾಡುತ್ತಿದ್ದೇವು. ಆದರೆ ಕಳೆದ ವರ್ಷದಿಂದ ಹೊಸ ತಂತ್ರಜ್ಞಾನದಿಂದ ನಮ್ಮ ಬೇರೆಲ್ಲ ಕೆಲಸ ಕಾರ್ಯ ಬಿಟ್ಟು ಗಂಟೆಗಟ್ಟಲೇ ಕಾಯಬೇಕಿದೆ' ಎನ್ನುತ್ತಾರೆ ಹುಡಗಿ ಗ್ರಾಮದ ರೈತ ಕರಿಬಸಪ್ಪ.

– ಡಾ.ಸಿದ್ದಲಿಂಗಪ್ಪ ಪಾಟೀಲ, ಶಾಸಕ ಬಿತ್ತನೆ ಬೀಜದ ತೊಂದರೆ ಇಲ್ಲ. ಸ್ಕ್ಯಾನಿಂಗ್ ವ್ಯವಸ್ಥೆಯಿಂದ ಸ್ವಲ್ಪ ಸಮಯ ಆಗಬಹುದು. ಆದರೆ ಇದ-ರಿಂದ ಬೀಜಗಳು ಕಳ್ಳಸಂತೆಗೆ ಹೋಗುವುದಿಲ್ಲ. ಎಲ್ಲ ರೈತರು ಸಹಕರಿಸಬೇಕು.-ಶರಣ್‌ಕುಮಾರ್, ಸಹಾಯಕ ಕೃಷಿ ನಿರ್ದೇಶಕ ಸ್ಕ್ಯಾನಿಂಗ್ ವ್ಯವಸ್ಥೆಯಿಂದ ಬೀಜ ತೆಗೆದುಕೊಂಡ ರೈತರ ಮಾಹಿತಿಯನ್ನು ತಂತ್ರಾಂಶದಲ್ಲಿ ದಾಖಲಾಗುತ್ತದೆ. ಇದರಿಂದಾಗಿ ಬೀಜ ತೆಗೆದುಕೊಳ್ಳುವುದು ಪುನರಾವರ್ತನೆ ಆಗುವುದಿಲ್ಲ.

# ನಾಳಿನ ಯೋಗ ಮಹೋತ್ಸವದಲ್ಲಿ ಭಾಗವಹಿಸಿ: ಅನಂತ ಬಿರಾದಾರ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಮೇ. 30 : ಭಾರತ ಸರ್ಕಾರವು ಈ ಸಲ ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ ಎಂಬ ಉದ್ದೇಶದೊಂದಿಗೆ ನಾಳೆ ನಗರದ ನೆಹರು ಕ್ರೀಡಾಂಗಣದಲ್ಲಿ ಯೋಗ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುತ್ತಿದೆ ಎಂದು ಐ.ಎನ್.ಓ ರಾಷ್ಟ್ರೀಯ ಅದ್ಯಕ್ಷ ಹಾಗೂ ಆಯುಶ್ ಇಲಾಖೆಯ ಯೋಗ ಸರ್ಟಿಫಿಕೇಶನ್ ಬೋರ್ಡ್ ಸದಸ್ಯ ಅನಂತ ಬಿರಾದಾರ ಅವರು ತಿಳಿಸಿದರು.

ಶುಕ್ರವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾ ಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಭಾರತ ಸರ್ಕಾರದ ಆಯುಶ್ ಇಲಾಖೆಯ ಸಹಕಾರದೊಂದಿಗೆ ಸೂರ್ಯ ಫೌಂಡೇಶನ್, ಐ ಎನ್ ಓ ವತಿಯಿಂದ ದೇಶಾದ್ಯಂತ ನೂರು ಕಡೆ ಯೋಗ ಮಹೋತ್ಸವ ಕಾರ್ಯಕ್ರಮ ಆಚರಿಸಲಾಗುತ್ತಿದೆ ಅದೆ ರೀತಿ ಬೀದರ ನಗರದ ನೇಹರು ಕ್ರೀಡಾಂಗಣದಲ್ಲಿ ಸ್ಥಳಿಯ ಸಂಘ ಸಂಸ್ಥೆಗಳ ಸಹಕಾರದೊಂದಿಗೆ ಈ ಕಾರ್ಯಕ್ರಮ ಬೆಳಿಗ್ಗೆ 6ರಿಂದ 8 ಗಂಟೆ ವರೆಗೆ ಜರುಗಲಿದೆ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನ ಚಿದಂಬರಾಶ್ರಮದ ಡಾ.ಶಿವಕುಮಾರ ಸ್ವಾಮಿ ಹಾಗೂ ಹಿರೇಮಠ ಸಂಸ್ಥಾನ ಭಾಲ್ಕಿಯ ಗುರುಬಸವ ಪಟ್ಟದ್ದೇವರು ವಹಿಸಲಿದ್ದು, ಪತಂಜಲಿ ಸಂಸ್ಥೆಯ ರಾಜ್ಯ ಪ್ರಭಾರಿ ಭವರಲಾಲ್ ಆರ್ಯ ಅವರು ಯೋಗವನ್ನು ಹೇಳಿಕೊಡಲಿದ್ದು ಬೆಂಗಳೂರಿನ ಆರ್ಟ ಆಫ್ ಲಿವಿಂಗ್ ಸಂಸ್ಥೆಯ ಋಷಿ ದೇವವೃತ ಉಪಸ್ಥಿತರಿರಲಿದ್ದಾರೆ. ಯೋಗವು ದೈಹಿಕ, ಮಾನಸಿಕ, ಭಾವನಾತ್ಮಕ, ಸಾಮಾಜಿಕ ಮತ್ತು ಆಧ್ಯಾತ್ಮಿಕ ಯೋಗಕ್ಷೇಮವನ್ನು ಒಳಗೊಳ್ಳುವ ಸಮಗ್ರ ಸಾಧನವಾಗಿದ್ದು ಈ ನಿಟ್ಟಿನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಯೋಗ ಮಹೋತ್ಸವ ಕಾರ್ಯ್ರಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಜೂನ್ 21 ರಂದು ಆಂದ್ರ ಪ್ರದೇಶ ರಾಜ್ಯದ ವಿಶಾಖಪಟ್ಟಣಂ ನಲ್ಲಿ ನಡೆಯುವ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ, ಆ ದಿನ ಸೂರ್ಯ ಫೌಂಡೇಶನ್ ಹಾಗೂ ಐ.ಎನ್.ಓ ವತಿಯಿಂದ ದೇಶಾದ್ಯಂತ ಐದು ಸಾವಿರ ಸ್ಥಳಗಳಲ್ಲಿ ಯೋಗ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಐ.ಎನ್.ಓ ರಾಜ್ಯ ಸಂಚಾಲಕ ಗುರುನಾಥ ರಾಜಗೀರಾ, ರಾಜ್ಯ ಕಾರ್ಯದರ್ಶಿ ಯೋಗೇಂದ್ರ ಯದಲಾಪುರೆ, ಜಿಲ್ಲಾದ್ಯಕ್ಷ ಗೋರಖನಾಥ ಕುಂಬಾರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂತೋಷ ಪಾಟೀಲ, ಜಿಲ್ಲಾ ಸಂಚಾಲಕ ಡಾ.ಮಂಜುಳಾ ಮುಚಳಂಬೆ, ತಾಲ್ಲೂಕು ಸಂಚಾಲಕ ವಿನೋದ ಪಾಟೀಲ ಸೇರಿದಂತೆ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಛಲವಾದಿ ನಾರಾಯಣಸ್ವಾಮಿ ಹೇಳಿಕೆಗೆ ತೀವ್ರ ಖಂಡನೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 30: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರ ಕುರಿತು ವಿಧಾನ ಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ ನೀಡಿರುವ ಅವಹೇಳನಕಾರಿ ಹೇಳಿಕೆಯನ್ನು ಕಾಂಗ್ರೆಸ್ ಹಿರಿಯ ಮುಖಂಡ ಅಬ್ದುಲ್ ಮನ್ನಾನ್ ಸೇಠ್ ತೀವ್ರವಾಗಿ ಖಂಡಿಸಿದ್ದಾರೆ.

ರಾಜ್ಯ ಹಾಗೂ ರಾಷ್ಟಕ್ಕೆ ಖರ್ಗೆ ಕುಟುಂಬದ ಕೊಡುಗೆ ಅಪಾರವಾಗಿದೆ. ಅವರ ಬಗ್ಗೆ ಹಗುರವಾಗಿ ಮಾತನಾಡುವುದು ಸಲ್ಲದು ಎಂದು ಹೇಳಿದ್ದಾರೆ.

ಪ್ರಿಯಾಂಕ್ ಖರ್ಗೆ ಅವರನ್ನು ನಾಯಿಗೆ ಹೋಲಿಸಿರುವುದು ಕೀಳುಮಟ್ಟದ ರಾಜಕೀಯ.



ವಿಧಾನ ಪರಿಷತ್ ಸದಸ್ಯ ಸ್ಥಾನದಲ್ಲಿರುವವರಿಗೆ ಇದು ಶೋಭೆ ತರುವಂತಹದ್ದಲ್ಲ ಎಂದು ತಿಳಿಸಿದ್ದಾರೆ.

ಖರ್ಗೆ ಕುಟುಂಬವನ್ನು ಟೀಕಿಸುವುದೇ ಛಲವಾದಿ ನಾರಾಯಣಸ್ವಾಮಿ ಅವರ ಕಾಯಕವಾಗಿದೆ. ಖರ್ಗೆ ಅವರು ಏನಿದ್ದಾರೆ ಎಂಬುದು ಎಲ್ಲರಿಗೂ ಗೊತ್ತಿದೆ ಹೇಳಿದ್ದಾರೆ.

ಪ್ರಿಯಾಂಕ್ ಖರ್ಗೆ ಅವರು ಪ್ರತಿಭಾವಂತ ನಾಯಕರಾಗಿದ್ದಾರೆ. ಅಭಿವೃದ್ಧಿ ಪರ ದೃಷ್ಟಿಕೋನ ಹೊಂದಿದ್ದಾರೆ. ಎಲ್ಲ ಸಮುದಾಯವನ್ನು ಒಟ್ಟಿಗೆ ಕರೆದೊಯ್ಯುವ ಗುಣ ಹೊಂದಿದ್ದಾರೆ. ಅವರ ಬೆಳವಣಿಗೆಯನ್ನು ಸಹಿಸದೆ, ಅವರ ವರ್ಚಸ್ಸಿಗೆ ಧಕ್ಕೆ ಉಂಟು ಮಾಡಲು ನಾರಾಯಣಸ್ವಾಮಿ ತಲೆಬುಡವಿಲ್ಲದ ಹೇಳಿಕೆ ಕೊಡುತ್ತಿದ್ದಾರೆ. ಅವರಿಗೆ ಮಾತಿನ ಮೇಲೆ ಹಿಡಿತವಿಲ್ಲ. ಅವರ ಹೇಳಿಕೆಗೆ ಯಾರೂ ಕಿವಿಗೊಡಬಾರದು ಎಂದು ತಿಳಿಸಿದ್ದಾರೆ. ಛಲವಾದಿ ನಾರಾಯಣಸ್ವಾಮಿ ಅವರು ಕೂಡಲೇ ಪ್ರಿಯಾಂಕ್ ಖರ್ಗೆ ಅವರ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿದ್ದಾರೆ.

## ಜೂ. 3 ರಿಂದ 12ರ ವರೆಗೆ 10 ದಿವಸಗಳ ಕಾಲ ಬೀದರ ನಗರದಲ್ಲಿ ಸನಾತನ ಧರ್ಮ ಸಭೆ

# ಸನಾತನ ಧರ್ಮದ ಐಕ್ಯತೆ ಸಮಾವೇಶದ ಮೂಲಗುರಿ: ರಾಮಕೃಷ್ಣನ್ ಸಾಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 30 : ಜೂನ್ 3 ರಿಂದ 12ರ ವರೆಗೆ ಸುಮಾರು 10 ದಿವಸಗಳ ಕಾಲ ನಗರದ ಶಿವನಗರದಲ್ಲಿರುವ ಸ್ವಾಮಿ ಸಮರ್ಥ ಕಲ್ಯಾಣ ಮಂಟಪದಲ್ಲಿ ಸನಾತನ ಸಂಸ್ಕೃತಿ ಧರ್ಮ ಸಭೆ ಜರುಗಲಿದೆ ಎಂದು ವಿಶ್ವ ಹಿಂದೂ ಪರಿಷತ್ತಿನ ಪ್ರಾಂತೀಯ ಸದಸ್ಯರು ಹಾಗೂ ಕಾರ್ಯಕ್ರಮದ ಸಂಚಾಲಕರಾದ ರಾಮಕೃಷ್ಣನ್ ಸಾಳೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಆಯೋಜಿಸಿದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಶ್ರೀ ತುಳಸಿಮಾನಸ ಸೇವಾ ಪ್ರತಿಷ್ಠಾನ ಮತ್ತು ರಾಧಾಕೃಷ್ಣ ಸತ್ಸಂಗ ಸಮಿತಿ ವತಿಯಿಂದ ನಡೆಯುತ್ತಿರುವ ಈ ಕಾರ್ಯಕ್ರಮದಲ್ಲಿ ರಾಷ್ಟ್ರ ಮಟ್ಟದ ಉಪನ್ಯಾಸಕರು, ಜಿಲ್ಲೆಯ ಮಠಾಧೀಶರು ಹಾಗೂ ಪೂಜ್ಯ ಕಾಶಿ ಜಗದ್ಗುರುಗಳು ಸೇರಿದಂತೆ ಸನಾತನ ಹಿಂದೂ ಧರ್ಮದ ಸಾವಿರಾರು ಜನರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು. ಅಖಂಡ ಹರಿನಾಮ ಸಪ್ತಾಹ, ರಾಮಚರಿತ ಮಾನಸ ಪಾರಾಯಣ ಸಮಾರೋಪ ಮತ್ತು ಶ್ರೀಮದ್ ಭಗವತ ಕಥಾ ಜ್ಞಾನಯಜ್ಞ ಕೂಡಾ ಜರುಗಲಿದೆ. ಕಾರ್ಯಕ್ರಮದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಕರೆ ನೀಡಿದರು. ಪ್ರತಿದಿನ ಬೆಳಿಗ್ಗೆ 4 ರಿಂದ 6 ಗಂಟೆವರೆಗೆ ಕಾಕಡಾರತಿ, 6 ರಿಂದ 8ರ ವರೆಗೆ ವಿಷ್ಣು ಸಹಸ್ರನಾಮ ಪಠಣ ಮತ್ತು ಪುಷ್ಪಾಂಜಲಿ, 9 ರಿಂದ 11ರ ವರೆಗೆ ರಾಮಚರಿತ ಮಾನಸ ಸಂಗೀತಮಯ ಪಠಣ, 12 ರಿಂದ 4ರ ವರೆಗೆ ಶ್ರೀಮದ್ ಭಗವತ್ ಕಥಾ, ಸಂಜೆ 5 ರಿಂದ 7ರ ವರೆಗೆ ಸನಾತನ ಧರ್ಮ ಸಭೆ, 7–30ರಿಂದ ಹರಿ ಕೀರ್ತನೆ ಹಾಗೂ ಭಜನೆ ಕಾರ್ಯಕ್ರಮಗಳು ಜರುಗಲಿವೆ ಎಂದು ಮಾಹಿತಿ ನೀಡಿದರು. ಕಾರ್ಯಕ್ರಮದ ಆಯೋಜಕರಲ್ಲಿ ಒಬ್ಬರಾದ ನಂದಕಿಶೋರ ವರ್ಮಾ ಮಾತನಾಡಿ, ಸನಾತನ ಹಿಂದೂ ಧರ್ಮದ ಪ್ರಚಾರ ಕಾರ್ಯ ಇದರಲ್ಲಿ ನಡೆಯಲಿದೆ. ಹರಿದು ಹಂಚಿ ಹೋಗಿರುವ ಹಿಂದೂ ಧರ್ಮಿಯರನ್ನು ಒಂದುಗೂಡಿಸಿ ಐಕ್ಯತೆ ಸಾರುವುದು, ಜಾತಿಯತೆ ನಿರ್ಮೂಲನೆ ಮಾಡಿ ಸನಾತನ ಧರ್ಮದವರಲ್ಲಿ ಐಕ್ಯತೆ ಮೂಡಿಸುವುದಕ್ಕಾಗಿ ಪುಷ್ಪೇಂದ್ರ ಕುಲಶ್ರೇಷ್ಠರು, ಸುಪ್ರಿಂ ಕೋರ್ಟ್ ನ್ಯಾಯವಾದಿ ಅಶ್ವಿನಿ ಉಪಾಧ್ಯಾಯ, ಹಾರಿಕಾ ಮಂಜುನಾಥ ಸೇರಿದಂತೆ ಹಲವು ಭಾಷಣಕಾರರು ಆಗಮಿಸಲಿದ್ದಾರೆ. ಸುಮಾರು ಮೂರು ತಿಂಗಳಿನಿಂದ ಕಾರ್ಯಕ್ರಮದ ಆಯೋಜನೆಗೆ ಶ್ರಮಿಸಲಾಗುತ್ತಿದೆ ಎಂದು ತಿಳಿಸಿದರು.

ಖ್ಯಾತ ಕಥಾಕಾರರಾದ ಕೃಷ್ಣ ಮಹಾರಾಜ ಮಾತನಾಡಿ, ಸನಾತನ ಹಿಂದೂ ಧರ್ಮ ಸಭೆ ನಗರದಲ್ಲಿ ಒಂದು ಹಬ್ಬದ ವಾತಾವರಣ ನಿರ್ಮಾಣ ಮಾಡಲಿದೆ. ಹಲವು ಉತ್ಕೃಷ್ಟವಾದ ವಿಚಾರಗಳು ಇಲ್ಲಿ ಉಪನ್ಯಾಸಕರು ಮಂಡಿಸಲಿದ್ದಾರೆ. ಆದ್ದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಸನಾತನ ಧರ್ಮದವರು ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಕೋರಿದರು. ಸಿವಿಲ್ ಇಂಜಿನಿಯರ್ ವೀರಶೆಟ್ಟಿ ಮಣಗೆ ಮಾತನಾಡಿದರು. ರಾಜಕುಮಾರ ಅಗರವಾಲ್, ಉಪೇಂದ್ರ ದೇಶಪಾಂಡೆ ಹಾಗೂ ಇತರರು ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಶೈಕ್ಷಣಿಕ ಪ್ರವಾಸ ಉತ್ಸವ ರೂಪದಲ್ಲಿರಲಿ : ಪ್ರಸನ್ನಕುಮಾರ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಮೇ.30: ಸುಮಾರು ಎರಡು ತಿಂಗಳ ಕಾಲ ರಜೆಯ ಮೇಲಿದ್ದ ವಿದ್ಯಾರ್ಥಿಗಳು, ಶಾಲಾ ಪ್ರಾರಂಭದ ದಿನವನ್ನು ಉತ್ಸವ ರೀತಿಯಲ್ಲಿ ಪ್ರಾರಂಭಿಸಿದರೆ, ಶೈಕ್ಷಣಿಕ ಪ್ರವಾಸ ಉತ್ಸವ ರೂಪದಲ್ಲಿರುತ್ತದೆ ಎಂದು ಡಯಟ್ ಪ್ರಾಂಶುಪಾಲರೂ ಹಾಗು ಉಪನಿರ್ದೇಶಕರು (ಅಭಿವೃದ್ಧಿ) ಪ್ರಸನ್ನಕುಮಾರ ಅಭಿಪ್ರಾಯಪಟ್ಟರು.

ತಾಲೂಕಿನ ಮದಕಟ್ಟಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಶುಕ್ರವಾರ ನಡೆದ ಶಾಲಾ ಪ್ರಾರಂಭೋತ್ಸವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಉತ್ಸವದ ರೀತಿಯಲ್ಲಿ ಶಾಲೆ ಪ್ರಾರಂಭಿಸಿ, ಮುಂದಿನ ಶಿಕ್ಷಣಕ್ಕೆ ಉತ್ತಮ ರೀತಿಯಿಂದ ಅನುವು ಮಾಡಿಕೊಡುವುದೇ ಶಾಲಾ ಪ್ರಾರಂಭೋತ್ಸವದ ಮೂಲ ಉದ್ದೇಶವಾಗಿದೆ. ಶಾಲಾ ಆರಂಭ ವೈಜ್ಞಾನಿಕವಾಗಿ, ಉತ್ಸವದ ರೀತಿಯಲ್ಲಿ ನಡೆಸಿ, ಅಧ್ಯಯನದಲ್ಲಿ ಆಸಕ್ತಿ ಮೂಡಿಸುವುದೇ ಪ್ರಾರಂಭೋತ್ಸವದ ಧ್ಯೇಯವಾಗಿದೆ. ಶಿಕ್ಷಕರು ತೊಡಗಿಸಿಕೊಳ್ಳುವಿಕೆಯಿಂದ ಉತ್ತಮ ಸಾಧನೆ ಮಾಡಬಹುದು ಎನ್ನುವುದಕ್ಕೆ ಮದಕಟ್ಟಿ ಸರ್ಕಾರಿ ಶಾಲೆಯೇ ಸಾಕ್ಷಿಯಾಗಿದೆ. ಎಲ್ಲಾ ಶಿಕ್ಷಕರು ಉತ್ತಮವಾಗಿ ತೊಡಗಿಸಿಕೊಳ್ಳುವುದರಿಂದ ಯಾವುದೇ ಕಾನ್ವೆಂಟ್ ಶಾಲೆಗೂ ಮೀರಿಸುವ ರೀತಿಯಲ್ಲಿ ಇಲ್ಲಿಯ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡಿ ಉತ್ತಮ ಫಲಿತಾಂಶ ಪಡೆದಿದ್ದಾರೆ ಎಂದು ಹೇಳಿದರು.

ಕ್ಷೇತ್ರಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್ ಮಾತನಾಡಿ, ನೂರು ಜನ ಶಿಕ್ಷಕರಿಗೆ ಒಬ್ಬ ತಾಯಿ ಸಮಾನ, ಹೀಗಾಗಿ ಪಾಲಕರು ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವಲ್ಲಿ ಶ್ರಮ ಪಡೆಬೇಕು ಎಂದು ಪಾಲಕರಿಗೆ ಸಲಹೆ ನೀಡಿದರು. ಸರ್ಕಾರಿ ಶಾಲೆಯಲ್ಲಿ ಉತ್ತಮ ಶಿಕ್ಷಣದೊಂದಿಗೆ, ವಿದ್ಯಾರ್ಥಿಗಳಿಗಾಗಿ ಹಲವಾರು ಸೌಲಭ್ಯಗಳಿವೆ, ಪಾಲಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು. ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ ಮಾತನಾಡಿ, ಫಲಿತಾಂಶದ ಫಲಾಪೇಕ್ಷೆಯಂತೆ ಕಾರ್ಯನಿರ್ವಹಿಸಬೇಕು. ಕೆಲಸ ಮಾಡುವಾಗ ಭಕ್ತಿಯಿಂದ ಮಾಡಿದರೆ ಉತ್ತಮ ಫಲಿತಾಂಶ ನಿರೀಕ್ಷಿಸಬಹುದು. ತುರ್ತು ಪರಿಸ್ಥಿತಿ ಬರುವ ಮುನ್ನವೇ ಚಿಕಿತ್ಸೆ ಕೊಡಬೇಕು. ಹಾಗೆಯೇ ವಿದ್ಯಾರ್ಥಿಗಳಿಗೆ ಜೂನ್‌ನಿಂದಲೇ ಉತ್ತಮ ಶಿಕ್ಷಣ ನೀಡಿದರೆ ಪರೀಕ್ಷೆಯಲ್ಲಿ ಸರಿಯಾಗಿ ಬರೆದು, ಉತ್ತಮ ಫಲಿತಾಂಶ ನೀಡುವರು ಎಂದು ಹೇಳಿದರು. ಇದೇವೇಳೆ 2025ರ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿ, ಸರ್ಕಾರಿ ಶಾಲೆಗಳಲ್ಲಿ ತಾಲೂಕಿಗೆ ಪ್ರಥಮ ಬಂದ ವಿದ್ಯಾರ್ಥಿಗಳಿಗೆ ಶಾಲೆಯ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಅಲ್ಲದೇ ಪ್ರತಿ ವಿಷಯಗಳಲ್ಲಿ ಪ್ರತಿಶತ ಅಂಕ ಪಡೆದ ವಿದ್ಯಾರ್ಥಿಗಳಿಗೆ ವಿಷಯ ಶಿಕ್ಷಕರು ವೈಯಕ್ತಿಕ ಬಹುಮಾನ ವಿತರಿಸಿದರು.

ಡಯಟ್ ಉಪನ್ಯಾಸಕ ಮಹಾದೇವ ಸಜ್ಜನ್, ಶಿವಶಂಕರ ಸ್ವಾಮಿ ಮಾತನಾಡಿದರು. ಮುಖ್ಯ ಶಿಕ್ಷಕ ಅಶೋಕ ಬರ್ಮಾ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಇಸಿಓ ಮಲ್ಲಿಕಾರ್ಜುನ ಕನ್ನಾಳೆ, ಕ್ಷೇತ್ರ ಸಮನ್ವಯಾಧಿಕಾರಿ ಮನೋಹರ ಹೊಳಕರ, ಗ್ರಾ.ಪಂ. ಅಧ್ಯಕ್ಷೆ ಪಾರ್ವತಿ ಖಂಡಾಳೆ, ಡಯಟ್ ಉಪನ್ಯಾಸಕ ಶಿವಾಜಿ ಧನ್ನೆ, ಸಿಆರ್‌ಪಿ ಅಶೋಕಕುಮಾರ ಕಲ್ಯಾಣೆ, ಚನ್ನಬಸಪ್ಪ ತಳವಾಡೆ, ವಿಜಯಕುಮಾರ ಹುಡಗೆ, ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜಯರಾಜ ದಾಬಶೆಟ್ಟಿ, ಮುಖಂಡರಾದ ಲಿಂಗರಾಜ ಖಂಡಾಳೆ, ಕಲ್ಲಪ್ಪ ಮಿರಾಜದಾರ, ಕವಿರತ್ನ ಬರ್ಮಾ, ದೀಪಕ ಹೊನ್ನಾಳೆ, ಶಿವಶರಣಪ್ಪ, ಹಣಮಂತ ಕಾರಾಮುಂಗೆ, ದೀಪಕ ಥಮಕೆ, ಬಾಲಾಜಿ ಕಾಂಬಳೆ ಉಪಸ್ಥಿತರಿದ್ದರು. ಶಿಕ್ಷಕಿ ಪ್ರಭಾವತಿ ಸ್ವಾಗತಿಸಿದರು. ಹಣಮಂತ ಕಾರಾಮುಂಗೆ ನಿರೂಪಿಸಿದರು. ಶಿವಶರಣಪ್ಪ ಬಿರಾದಾರ ವಂದಿಸಿದರು.

# ರಂಡ್ಯಾಳ ರಸ್ತೆ ಅಭಿವೃದ್ಧಿಗಾಗಿ ಗುರುನಾಥ ವಡ್ಡೆಯವರಿಂದ ಸರ್ಕಾರಕ್ಕೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಮೇ.30: ತಾಲುಕಿನ ಡೊಣಗಾಂವ (ಎಂ) ಗ್ರಾಮದಿಂದ ರಂಡ್ಯಾಳ ಗ್ರಾಮದವರೆಗಿನ ಸುಮಾರು 2 ಕಿ.ಮೀ. ರಸ್ತೆಯನ್ನು ಹೊಸದಾಗಿ ನಿರ್ಮಾಣ ಮಾಡಬೇಕೆಂದು ಸಮಾಜ ಸೇವಕ ಗುರುನಾಥ ವಡ್ಡೆಯವರು ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ. ಬೀದರ ಜಿಲ್ಲೆಯ ಕಮಲನಗರ ತಾಲೂಕಿನ ಡೊಣಗಾಂವ ಗ್ರಾಮದಿಂದ ರಂಡ್ಯಾಳ ಗ್ರಾಮಕ್ಕೆ ಹೋಗುವ ರಸ್ತೆ ಸಂಪೂರ್ಣವಾಗಿ ಕೆ-ಟ್ಟು ಹೋಗಿದೆ. ರಸ್ತೆಯ ಮೇಲಿನ ಡಾಂಬರ್ ಹಾಗೂ ಕಾಂಕ್ರಿಟ್ ಕಿತ್ತು ಹೋಗಿದೆ, ರಸ್ತೆಯ ಮೇಲೆ ಗುಂಡಿಗಳು ನಿರ್ಮಾಣವಾಗಿವೆ. ಇದ-ರಿಂದ ಸಾರ್ವಜನಿಕರಿಗೆ ಈ ರಸ್ತೆಯಿಂದ ಸಂಚರಿಸುವುದು ಬಹಳ ಕಷ್ಟಕರವಾಗಿದೆ. ರಂಡ್ಯಾಳ ಗ್ರಾಮಸ್ಥರು ಗ್ರಾಮ ಪಂಚಾಯತ್ ಕೇಂದ್ರವಾದ ಡೊಣಗಾಂವ (ಎಂ) ಹಾಗೂ ತಾಲುಕಾ ಕೇಂದ್ರವಾದ ಕಮಲನಗರಕ್ಕೆ ಹೋಗುವ ಈ ರಸ್ತೆ ಅನೇಕ ವರ್ಷಗಳಿಂದ ಕಿತ್ತುಹೋಗಿದೆ.

ಇದರಿಂದ ಸದರಿ ರಸ್ತೆಯಿಂದ ವಾಹನಗಳು ಸಂಚರಿಸುವುದು ಬಹಳ ಕಷ್ಟದ ಕೆಲಸವಾಗಿದೆ. ಇದರಿಂದ ಗ್ರಾಮಸ್ಥರಿಗೆ ಅನೇಕ ಕಷ್ಟಗಳು ಆಗುತ್ತಿದೆ. ರಸ್ತೆಯನ್ನು ಅಭಿವೃದ್ಧಿಪಡಿಸಿ, ಸುಗಮ ಸಂಚಾರಕ್ಕೆ ಯೋಗ್ಯವಾಗಿ ಮಾಡುವುದು ಸರ್ಕಾರದ ಸಂವಿಧಾನಿಕ ಕರ್ತವ್ಯವಾಗಿರುತ್ತದೆ. ಅದರಿಂದ ಬೀದರ ಜಿಲ್ಲೆಯ ಕಮಲನಗರ ತಾಲೂಕಿನ ಡೊಣಗಾಂವ (ಎಂ) ಗ್ರಾಮದಿಂದ ರಂಡ್ಯಾಳ ಗ್ರಾಮಕ್ಕೆ ಹೋಗುವ ಸುಮಾರು 2.00 ಕಿ.ಮೀ. ರಸ್ತೆ ಅಭಿವೃದ್ಧಿಪಡಿಸುವ ಕೆಲಸ ಮಾಡಬೇಕೆಂದು ಸಮಾಜ ಸೇವಕ ಗುರುನಾಥ ವಡ್ಡೆಯವರು ಮುಖ್ಯಮಂತ್ರಿಗಳು, ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾ. ಇಲಾಖೆ, ಮಾನ್ಯ ಕಾರ್ಯದರ್ಶಿಗಳು, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ, ಜಿಲ್ಲಾಧಿಕಾರಿಗಳು ಬೀದರ ಹಾಗೂ ಮಾನ್ಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಬೀದರ ಇವರಿಗೆ ಮನವಿ ಸಲ್ಲಿಸಿದ್ದಾರೆ.

# ಕನ್ನಡ ಜನ ಜಾಗೃತಿ ಸಮಿತಿ ಸಭೆ ಜೂ.2 ರಂದು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 30 : ಇಲ್ಲಿಯ ಚಿಕ್ಕಪೇಟೆ ರಸ್ತೆಯಲ್ಲಿ ಇರುವ ಜಿಲ್ಲಾ ಕನ್ನಡ ಭವನದಲ್ಲಿ ಜೂನ್ 2 ರಂದು ಬೆಳಿಗ್ಗೆ 11ಕ್ಕೆ ಕನ್ನಡ ಜನ ಜಾಗೃತಿ ಸಮಿತಿಯ ಜಿಲ್ಲಾ ಘಟಕದ ಸಭೆ ಕರೆಯಲಾಗಿದೆ.

'ಕನ್ನಡ ಶಾಲೆ ಉಳಿಸಿ, ಕರ್ನಾಟಕ ಉಳಿಸಿ' ಶೀರ್ಷಿಕೆಯಡಿ ಕನ್ನಡದ ಕುರಿತು ಚಿಂತನ-ಮಂಥನ ನಡೆಯಲಿದೆ.

ಕನ್ನಡ ಪರ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಕನ್ನಡಾಭಿಮಾನಿಗಳು ಸಭೆಯಲ್ಲಿ ಪಾಲ್ಗೊಂಡು ಕನ್ನಡದ ಬೆಳವಣಿಗೆಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಲಹೆ ನೀಡಬೇಕು ಎಂದು ಕನ್ನಡ ಜನ ಜಾಗೃತಿ ಸಮಿತಿಯ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ ಹಾಗೂ ಸಂಚಾಲಕ ರೇವಣಸಿದ್ದಪ್ಪ ಜಲಾದೆ ಮನವಿ ಮಾಡಿದ್ದಾರೆ.

# ಪತ್ರಕರ್ತರು ಅಧ್ಯಾಯನ ಶೀಲರಾಗಬೇಕು-ಡಾ. ಶಿರವಾಳ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ಮಾಹಿತಿ ತಂತ್ರಜ್ಞಾನದ ಹೊಸತನದ ಯುಗದಲ್ಲಿ ಸುದ್ದಿಮಾಧ್ಯಮಗಳು ಪಾರದರ್ಶಕವಾಗಿಪ್ರಸಾರಗೊಳ್ಳಬೇಕು, ಸಮಾಜದ ಸುಧಾರಣೆಯಲ್ಲಿ ಪತ್ರಿಕಾರಂಗದ ಪಾತ್ರ ಅತ್ಯಂತ ಪ್ರಮುಖ ಪಾತ್ರವಾಗಿದೆ, ಇಂದಿನ ಅವ್ಯವಸ್ಥೆಯಲ್ಲಿ ಪತ್ರಕರ್ತರು ಅಧ್ಯಾಯನ ಶೀಲತೆಯಿಂದ ಸುದ್ದಿಮಾಡಿದಲ್ಲಿ ಕಲುಷಿತ ವಾತವಾರಣಕ್ಕೆ ಸುದ್ದಿಕರಣ ಮಾಡಲು ಸಾಧ್ಯವಾಗುತ್ತದೆ ಎಂದು ಖ್ಯಾತ ಸಂಶೋಧಕ: ಖಜಾನ ಅಧಿಕಾರಿ ಡಾ, ಎಮ್,ಎಸ್,ಶಿರವಾಳರವರು ಅಭಿಪ್ರಾಯ ವ್ಯಕ್ತಪಡಿಸಿದರು. ಅವರು ತಾಲುಕಿನ ಭೀ,ಗುಡಿ ಶ್ರೀ ಭುವನೇಶ್ವರಿ ಕಲ್ಯಾಣ ಮಂಟಪದಲ್ಲಿ ನಡೆದ ಪ್ರಜಾ ಪವರ ನ್ಯೂಜ್ ಚಾನಲ್ ಲೋಕಾರ್ಪಣೆಕಾರ್ಯಕ್ರಮದಲ್ಲಿ ಮುಖ್ಯಅಥಿತಿಗಳಾಗಿ ಆಗಮಿಸಿ ಮಾತನಾಡಿದರು,ಮುಂದುವರೆದು ಮಾತನಾಡಿದ ಅವರು, ದೃಶ್ಯಮಾಧ್ಯಮಗಳು ಇಂದು ಕಲ್ಯಾಣ ಕರ್ನಾಟಕ ವಿಭಾಗದಕ್ಕೆ ತಾತ್ಸಾರ ಮನೋಭಾವನೆಗಳಿಂದ ಟಿವಿಗಳನ್ನು ನಮ್ಮ ಸುದ್ದಿಗಳನ್ನು ಪ್ರಸಾರ ಮಾಡುತ್ತಿಲ್ಲ ಪ್ರಸಾರ ಮಾಧ್ಯಮದಿಂದಕಡೆಗಣಿಸಲಾಗುತ್ತಿದೆ, ಕಲ್ಯಾಣ ಕರ್ನಾಟಕದಲ್ಲಿ ನೂತನ ದೃಶ್ಯಮಾಧ್ಯಗಳುಎದ್ದುನಿಲ್ಲಬೇಕಾಗಿದೆ ಎಂದು ಅವರು ತಿಳಿಸಿದರು, ಈ ಕಾರ್ಯಕ್ರಮವನ್ನು ಉತ್ತರ ಕರ್ನಾಟಕಅಧ್ಯಕ್ಷರಾದ ಡಾ,ಶರಣು ಗದ್ದುಗೆಯವರು ಜ್ಯೋತಿ ಬೇಳಗಿಸಿ ಮಾತನಾಡಿದರು,ಸಮಾರಂಭದ ದಿವ್ಯಸಾನಿಧ್ಯವನ್ನು ಚೆಟ್ನಳ್ಳಿಯ ಆನಂದ ಸ್ವಾಮೀಗಳು ವಹಿಸಿದ್ದರು, ನಮ್ಮ ಕರ್ನಾಟಕ ಸೇನೆಯ ರಾಜ್ಯಾಧ್ಯಾಕ್ಷರಾದ ಬಸವರಾಜ ಪಡಕೊಟೆಯವರು ಮಾತನಾಡಿ,ಸತತ ಪರಿಶ್ರಮಗಳು ಮನುಷ್ಯನನ್ನು ಸಮಾಜದಲ್ಲಿ ಮೇಲ್ಮಟ್ಟಕ್ಕೆ ಗುರುತಿಸುತ್ತವೆ, ಎಂದರು,ಮುಖ್ಯ ಅತಿಥಿಗಳಾಗಿ ಅಪ್ಪುಗೌಡ ಯಾಳಗಿ, ಕೆಪಿಸಿಸಿ ರಾಜ್ಯ ಹಿಂದುಗಳದ ಘಟಕದ ಬಂಡಾರಪ್ಪ ನಾಟೇಕಾರ ನಮ್ಮ ಕರ್ನಾಟಕ ಸೇನೆಯ ರಾಜ್ಯ ಸಂಚಾಲಕರಾದ ಭೀಮಣ್ಣ ಶಖಾಪುರವರು ಪ್ರಾಸ್ತಾವಿಕವಾಗಿ ಮಾತನಾಡಿದರು, ಸಾರ್ವಜನಿಕ ಆಸ್ಪತ್ರೆಯ ಆಡಳಿತಾಧಿಕಾರಿ ಡಾ, ಪದ್ಮಾನಂದ ಗಾಯಕವಾಡ್, ಪತ್ರಕರ್ತರಾದ ಮಲ್ಲಿಕಾರ್ಜುನ ಮುದನೂರ, ನಗರಸಭೆ ಮಾಜಿ ಅಧ್ಯಕ್ಷರಾದ ರಾಯಪ್ಪ ಸಾಲಿಮನಿ, ನಗರಸಭೆ ಸದಸ್ಯರಾದ ರಾಜಶೇಖರ ಪಾಟೀಲ್, ಮಡ್ನಾಳ. ವೆಂಕಟೆಶಗೌಡ ಕಂಚನವಿ, ಅಲ್ಲಾಪಟೇಲ್ ಮಕ್ತಾಪುರ, ಕೃಷಿ ಸಾಹಾಯಕ ನಿರ್ದೇಶಕರಾದ ಅನಿಲಕುಮಾರ,ತಿರುಪತಿ ಹತ್ತಿಕಟಗಿ, ರಾಜು ಮಾಡಗಿ ಅಣಿಬಿ, ಮೌನೇಶ ಹಳಿಸಗರ, ವೆಂಕಟೇಶ ಬೋನೇರ, ಶುಭಾಶ ಪೂಜಾರಿ ಸೇರಿದಂತೆ ಅನೇಕ ಗಣ್ಯರು ಹಿರಿಯರು ನಮ್ಮ ಕರ್ನಾಟಕ ಸೇನೆಯ ಕಾರ್ಯಕರ್ತರು ಭಾಗವಹಿಸಿದ್ದರು, ಈ ಸಮಯದಲ್ಲಿ ನ್ಯೂಜ್ ಚಾನಲ್ ವ್ಯವಸ್ಥಾಪಕರ ನಿರ್ದೇಶಕರಾದ ಸಿದ್ದು ಪಟ್ಟೆದಾರವರು ಹಿರಿಯ ಪತ್ರಕರ್ತರಾದನಾರಾಯಣಚಾರ್ಯ ಸಗರ, ಈರಣ್ಣ ಹಾದಿಮನಿ, ಈರಣ್ಣ ಮೌರ್ಯ, ಮತ್ತು ಚೆನ್ನಬಸ್ಸು ದೊಡ್ಡಮನಿ. ವಿಶ್ವ ನಾಟೇಕಾರ, ಸಂಗನಬಸವಜಮಾದಾರ,ರವರಿಗೆ ಗೌರವಿಸಿದರು, ಪ್ರಶಕ್ತ ಸಾಲಿನಲ್ಲಿ ಎಸ್,ಎಸ್,ಎಲ್,ಸಿ, ಪಾಸಾದ ವಿಧ್ಯಾರ್ಥಿಗಳಿಗೆ ಸನ್ಮಾನಿಸಿದರು, ಮಲ್ಲಯ್ಯಸ್ವಾಮೀ ಇಟಗಿ ಕಾರ್ಯಕ್ರಮ ನೀರೂಪಿಸಿದರು, ವಿಜಯಸಿಂಗ್ ಠಾಕೋರ್ ಸ್ವಾಗತಿಸಿದರು, ಕೊನೆಯಲ್ಲಿ ಶಶಿಪಾಲರಡ್ಡಿ ಪಾಟೀಲ ವಂದಿಸಿದರು,

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

# ತೊಗರಿ, ಹೆಸರು ಬಿತ್ತನೆ ಬೀಜಗಳಿಗೆ ಬೀಜೋಪಚಾರದ ವಿಧಾನಕ್ಕೆ ಸಲಹೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 30-: ತೊಗರಿ,ಹೆಸರು ಬಿತ್ತನೆ ಬೀಜಗಳಿಗೆ ಬೀಜೋಪಚಾರದ ವಿಧಾನ ಕೈಗೊಳ್ಳಬೇಕು ಎಂದು ಯಾದಗಿರಿ ಉಪ ಕೃಷಿ ನಿರ್ದೇಶಕರಾದ ಮಂಜುಳ ಅವರು ತಿಳಿಸಿದ್ದಾರೆ.

ತೊಗರಿ ಹಾಗೂ ಹೆಸರು ಯಾದಗಿರಿ ಜಿಲ್ಲೆಯ ಪ್ರಮುಖ ದ್ವಿದಳ ಬೆಳೆಗಳಾಗಿದ್ದು, ಈ ಬೆಳೆಗಳಲ್ಲಿ ರೋಗ ನಿಯಂತ್ರಣ ಶಕ್ತಿ ಹೆಚ್ಚಿಸಲು, ಮಣ್ಣಿನಲ್ಲಿರುವ ಪೋಷಕಾಂಶಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಲು ಹಾಗೂ ಕೀಟನಾಶಕ ಸಿಂಪರಣೆಗಳ ಸಂಖ್ಯೆ ಕಡಿತಗೊಳಿಸಲು ಬೀಜೋಪಚಾರ ಮಾಡುವುದು ಅನಿವಾರ್ಯವಾಗಿರುತ್ತದೆ. ಜೈವಿಕ ನಿಯಂತ್ರಣಕಗಳಿಂದ ಬೀಜೋಪಚಾರ ಮಾಡುವುದರಿಂದ ಪೀಡೆನಾಶಕಗಳ ಬಳಕೆ ತಗ್ಗಿಸಿದಂತಾಗುತ್ತದೆ. ಜೈವಿಕ ಗೊಬ್ಬರಗಳಿಂದ ಬೀಜೋಪಚಾರ ಮಾಡುವದರಿಂದವಾತಾವರಣದಲ್ಲಿರುವ ಸಾರಜನಕವನ್ನು ಬೆಳೆಗಳಿಗೆ ದೊರಕಿಸಿಕೊಟ್ಟಂತಾಗುವುದಲ್ಲದೆ ರಸಾಯನಿಕ ಗೊಬ್ಬರದ ಬಳಕೆ-ಯ ಪ್ರಮಾಣ ಕಡಿತಗೊಳಿಸಿ, ಕಡಿಮೆ ಖರ್ಚಿನಲ್ಲಿ ರೈತರು ಬೆಳೆ ಬೆಳೆಯಲು ಸಹಕಾರಿಯಾಗುತ್ತದೆ.

ತೊಗರಿ ಮತ್ತು ಹೆಸರು ಬಿತ್ತನೆ ಬೀಜಗಳಿಗೆ ಬೀಜೋಪಚಾರದ ವಿಧಾನ ಬರ ನಿರೋಧಕತೆ ಹೆಚ್ಚಿಸಲು ಬಿತ್ತನೆ ಬೀಜಗಳನ್ನು 2 ಕ್ಯಾಲ್ಸಿಯಂ ಕ್ಲೋರೈಡ್ ದ್ರಾವಣದಲ್ಲಿ 1 ತಾಸು ನೆನೆಸಿ 7 ರಿಂದ 8 ತಾಸು ನೆರಳಿನಲ್ಲಿ ಒಣಗಿಸಬೇಕು. ಈ ರೀತಿ ಕಠಿಣಗೊಳಿಸಿದ ಬಿತ್ತನೆ ಬೀಜಗಳನ್ನು ಟ್ರೈಕೋಡರ್ಮಾ ವಿರಿಡೇ ಜೈವಿಕ ನಿಯಂತ್ರಕದಿಂದ 4 ಗ್ರಾಂ ಪ್ರತಿ ಕೆಜಿ ಬೀಜಗಳಿಗೆ ಬೀಜೋಪಚಾರ ಮಾಡಬೇಕು. ನಂತರ ಜೈವಿಕ ಗೊಬ್ಬರ ರೈಜೋಬಿಯಂ ಸಿಸಿ-1 ತಳಿಯಿಂದ 16 ಗ್ರಾಂ ಪ್ರತಿ ಕೆಜಿ ಬೀಜಗಳಿಗೆ ಬೀಜೋಪಚಾರ ಮಾಡಬೇಕು, ಈ ರೀತಿ ಉಪಚರಿಸಿದ ಬೀಜಗಳನ್ನು 5 ರಿಂದ 7 ಸೆಂ.ಮೀ ಆಳದ ಮಣ್ಣಿನಲ್ಲಿ ಬೀಳುವಂತೆ ಬಿತ್ತನೆ ಮಾಡಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಣ್ಣಿನ ಶಸ್ತ್ರ ಚಿಕಿತ್ಸೆಗೆ ಆಯ್ಕೆಯಾದ ಮೊದಲ ತಂಡ ರವಾನೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ತಾಲೂಕಿನ ಚಬನೂರ ಗ್ರಾಮದಲ್ಲಿ ಅನುಗ್ರಹ ಕಣ್ಣಿನ ಆಸ್ಪತ್ರೆ ವತಿಯಿಂದ ಹಮ್ಮಿಕೊಂಡ ಕಣ್ಣಿನ ಉಚಿತ ತಪಾಸಣಾ ಶಿಬಿರದಲ್ಲಿ ಶಸ್ತ್ರ ಚಿಕಿತ್ಸೆಗೆ ಆಯ್ಕೆಯಾದ 450 ಜನರ ಪೈಕಿ 50 ಜನರ ಮೊದಲು ತಂಡವನ್ನು ಕಲ್ಬುರ್ಗಿಯ ಅನುಗ್ರಹ ಕಣ್ಣಿನ ಆಸ್ಪತ್ರೆಗೆ ಗುರುವಾರ ಕಳಸಿಕೊಡಲಾಯಿತು. ಚಬನೂರ ಗ್ರಾಮದಲ್ಲಿ ಶ್ರೀ ಅಮೋಘಸಿದ್ದೇಶ್ವರ ಜಾತ್ರೋತ್ಸವದ ಅಂಗವಾಗಿ ಅನುಗ್ರಹ ಕಣ್ಣಿನ ಆಸ್ಪತ್ರೆ ಮುಖ್ಯಸ್ಥರಾದ ಡಾ.ಪ್ರಭುಗೌಡ ಲಿಂಗದಳ್ಳಿ ಇವರ ನೇತೃತ್ವದಲ್ಲಿ ಮೇ 27 ರಂದು ಹಮ್ಮಿಕೊಂಡ ಈ ಶಿಬಿರದಲ್ಲಿ ಒಟ್ಟು 1800 ಜನರ ಕಣ್ಣಿನ ತಪಾಸಣೆ ನಡೆಸಲಾಗಿತ್ತು ಅದರಲ್ಲಿ 450 ಜನರನ್ನು ಶಸ್ತ್ರ ಚಿಕಿತ್ಸೆಗೆ ಆಯ್ಕೆ ಮಾಡಲಾಗಿತ್ತು. ಇವರೆಲ್ಲರ ಕಣ್ಣಿನ ಶಸ್ತ್ರ ಚಿಕಿತ್ಸೆಯನ್ನು ಅನುಗ್ರಹ ಕಣ್ಣಿನ ಆಸ್ಪತ್ರೆಯಲ್ಲಿ ಉಚಿತವಾಗಿ ಮಾಡಲಾಗುತ್ತಿದ್ದು 50ರಂತೆ ಒಟ್ಟು 9 ತಂಡಗಳನ್ನು ರಚಿಸಿ ಕಳಸಿಕೊಡಲಾಗುತ್ತಿದೆ ಇದರ ಮೊದಲು ತಂಡವನ್ನು ನಿನ್ನೆ ತಾಳಿಕೋಟಿಯಿಂದ ಕಲಬುರ್ಗಿಗೆ ಕಳಿಸಿಕೊಡಲಾಯಿತು. ಈ ಸಂದರ್ಭದಲ್ಲಿ ತಾಳಿಕೋಟಿ ಅನುಗ್ರಹ ಕಣ್ಣಿನ ಆಸ್ಪತ್ರೆಯ ವ್ಯವಸ್ಥಾಪಕ ಮಲ್ಲನಗೌಡ ಬಿರಾದಾರ ಮಾತನಾಡಿ ಶಿಬಿರದಲ್ಲಿ ಶಸ್ತ್ರ ಚಿಕಿತ್ಸೆಗೆ ಆಯ್ಕೆಯಾದ ಎಲ್ಲಾ 450 ಜನರನ್ನು ತಾಳಿಕೋಟಿಯಿಂದ ಸರದಿಯಂತೆ ಡಾ.ಪ್ರಭುಗೌಡ ಲಿಂಗದಳ್ಳಿ ಅವರ ಕಲಬುರ್ಗಿಯ ಅನುಗ್ರಹ ಕಣ್ಣಿನ ಆಸ್ಪತ್ರೆಗೆ ಕರೆದು-ಕೊಂಡು ಹೋಗಿ ಸಂಪೂರ್ಣ ಉಚಿತವಾಗಿ ರೋಗಿಯ ಕಣ್ಣಿನ ಶಸ್ತ್ರಚಿಕಿತ್ಸೆ ಮಾಡಿ ಅಗತ್ಯ ಔಷಧಿ ಹಾಗೂ ಊಟೋಪಚಾರದ ವ್ಯವಸ್ಥೆಯನ್ನೂ ಮಾಡಿ ಅವರನ್ನು ಸುರಕ್ಷಿತವಾಗಿ ಮತ್ತೇ ತಾಳಿಕೋಟಿಗೆ ಕರೆತರಲಾಗುತ್ತದೆ ಎಂದರು. ಈ ಸಮಯದಲ್ಲಿ ಮಹಾಂತೇಶ ಹುಜರಾತಿ, ಮುಕ್ತದೀರ ಜಮಾದಾರ, ಮೀರಾಸಾಬ ಚಬನೂರ, ಮತ್ತಿತರರು ಇದ್ದರು.

# ಕೃಷಿ ಇಲಾಖೆಯಿಂದ ದೇಸಿ ತಳಿಗಳ ಸಂರಕ್ಷಣೆ, ಉತ್ತೇಜನ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ.30: ಕಣ್ಮರೆಯಾಗುತ್ತಿರುವರುವ ದೇಸಿ ತಳಿಗಳನ್ನು ಸಂರಕ್ಷಣೆ ಹಾಗೂ ಸಂರಕ್ಷಿಸಿ ಕೃಷಿ ಮಾಡುತ್ತಿರುವ ರೈತರಿಗೆ ಉತ್ತೇಜನ ನೀಡಲು ಕೃಷಿ ಇಲಾಖೆಯಿಂದ ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಸ್ಥಳಿಯ ತಳಿಗಳು ಅಥವಾ ಸಾಂಪ್ರಾದಾಯಿಕ ಕೃಷಿಪದ್ಧತಿಯಿಂದ ಅಭಿವೃದ್ಧಿ ನಿರ್ವಹಿಸಲ್ಪಡುವ ತಳಿಗಳು ದೇಸಿ ತಳಿಗಳೆಂದು ಕರೆಯಲ್ಪಡುತ್ತವೆ. ಇವು ರೈತರ ಸಾಂಪ್ರಾದಾಯಿಕ ಪರಂಪರೆ, ಜಾನಪದ ಪ್ರಭೇದಗಳಾಗಿರುತ್ತವೆ. ಈ ತಳಿಗಳಲ್ಲಿರುವ ವೀಶಷ್ಟ ಗುಣಲಕ್ಷಣಳು ಮತ್ತು ಭೌಗೋಳಕ ಮೂಲಗಳ ಕಾರಣದಿಂದಾಗಿ ವೈಜ್ಞಾನಿಕವಾಗಿ ಅಭಿವೃದ್ಧಿಪಡಿಸಲಾದ ಅಧಿಸೂಚಿತ ಪ್ರಭೇದಗಳಿಗಿಂತ ದೇಸಿ ತಳಿಗಳ ಪೋಷಕಾಂಶಳಲ್ಲಿ ಸಮೃದ್ಧವಾಗಿವೆ. ಆದರೇ ಕೆಲವೇ ರೈತರು ಇಂತಹ ದೇಸಿ ತಳಿ ಕೃಷಿ ಮಾಡುವುದನ್ನು ಮುಂದುವರೆಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಕೃಷಿಇಲಾಖಾವತಿಯಿಂದ ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ಕಾರ್ಯಕ್ರಮವನ್ನು ಅನುಷ್ಠಾನ ಮಾಡಲಾಗುತ್ತಿದೆ.

ಈ ಉತ್ತೇಜನ ಕಾರ್ಯಕ್ರಮದಡಿ ಕಣ್ಮರೆಯಾಗುತ್ತಿರುವ ತಳಿಗಳನ್ನೊಳಗೊಂಡಂತೆ ಆಯಾ ಸ್ಥಳೀಯ ಪ್ರದೇಶಕ್ಕೆ ಸೂಕ್ತವಾದ ದೇಸಿ ತಳಿಗಳ ಗುರುತಿಸುವಿಕೆ ಹಾಗೂ ಸಂರಕ್ಷಿಸುವುದು,ಗುರುತಿಸಿದ ದೇಸಿ ತಳಿಗಳನ್ನು ಅಭಿವೃದ್ಧಿ ಪಡಿಸುವುದು ದೇಸಿ ತಳಿಗಳನ್ನು ಹಿಂದಿನಿಂದಲೂ ಸಂರಕ್ಷಿಸಿ, ಕೃಷಿ ಮಾಡುತ್ತಿರುವ ರೈತರಿಗೆ ಬೆಂಬಲ ನೀಡುವುದು ದೇಸಿ ತಳಿಗಳ ನಿರಂತರ ಕೃಷಿಯನ್ನು ಪ್ರೋತ್ಸಾಹಿಸುವುದು, ಜೀವ ವೈವಿಧ್ಯತೆಯನ್ನು ಹಾಗೂ ಸುಸ್ಥಿರ ಕೃಷಿ ಪದ್ಧತಿಗಳನ್ನು ಕಾಪಾಡುವುದು ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ.

ಈ ಕಾರ್ಯಕ್ರದಡಿ ಭತ್ತ, ರಾಗಿ, ಜೋಳ, ತೊಗರಿ, ಹುರುಳಿ, ಅವರೆ, ಅಲಸಂದೆ, ಮಡಕಿ ಕಾಳು, ಹಚ್ಚೆಳ್ಳು, ಕುಸುಬೆ, ಎಳ್ಳು, ಮೆಣಸಿನಕಾಯಿ ನವಣೆ, ಸಾಮೆ, ಊದಲು,ಕೊರಲೆ,ಹಾರಕ,ಬರಗು ಹಾಗೂ ಸಲಹಾ ಸಮಿತಿಯು ಶಫಾರಸ್ಸು ಮಾಡುವ ಇತರೆ ಬೆಳೆಗಳನ್ನು ಆಯ್ಕೆಮಾಡಲಾಗಿದೆ. ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ಕಾರ್ಯಕ್ರಮದಡಿ ಬೆಂಬಲ ಹಾಗೂ ಪ್ರೋತ್ಸಾಹ ಪಡೆಯಲಿಚ್ಚಿಸುವ ಮತ್ತು ಹೆಚ್ಚಿನ ಮಾಹಿತಿಯನ್ನು ಪಡೆಯಲು ರೈತರು ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿಗಳನ್ನು ಸಂಪರ್ಕಿಸಬಹುದು ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರಾದ ಜಯಪ್ರಕಾಶ್ ಟಿ.ಸಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳ ಬಸ್ ಪಾಸ್‌ಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ.30- ಇಲ್ಲಿನ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ರಾಯಚೂರು ವಿಭಾಗದಿಂದ 2025-26ನೇ ಸಾಲಿನ ವಿದ್ಯಾರ್ಥಿಗಳ ಬಸ್ ಪಾಸ್ ಪಡೆಯಲು ಸೇವಾಸಿಂಧು ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಜೂನ್ 01 ರಿಂದ ಸೇವಾ ಸಿಂಧು ಪೋರ್ಟಲ್ URL:https://sevasindhuservices.karnataka.gov.in ಮುಖಾಂತರ ಅಥವಾ ಕರ್ನಾಟಕ ಒನ್, ಗ್ರಾಮ-ಒನ್ ಕೇಂದ್ರಗಳಲ್ಲಿ 30 ರೂ ಸೇವಾ ಶುಲ್ಕ ಪಾವತಿಸಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಿದ ನಂತರ ವಿದ್ಯಾರ್ಥಿಗಳ ಆಯ್ಕೆ ಮಾಡಿದ ಕೌಂಟರಗೆ ನಿಗದಿತ ಪಾಸಿನ ಶುಲ್ಕವನ್ನು ನಗದು ಅಥವಾ ಕ್ರೆಡಿಟ್ ಕಾರ್ಡ ಡೆಬಿಟ್ ಕಾರ್ಡ ಅಥವಾ ಯುಪಿಐ ಮೂಲಕ ಪಾವತಿಸಿ ಪಾಸ್ ಪಡೆಯುಬಹದಾಗಿದೆ.

# ಕೃಷಿ ಕಾರ್ಯಕ್ರಮಕ್ಕೆ ಖ್ಯಾತರಾಗಿದ್ದ ರಾಯಚೂರ ಆಕಾಶವಾಣಿ ಮುಖ್ಯಸ್ಥ ಡಾ.ವಿ.ಜಿ.ಬಾವಲತ್ತಿ ಅವರಿಗೆ ಬೀಳ್ಕೊಡುಗೆ, ಅಭಿನಂದನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರ ಮೆ 30-: ಆಕಾಶವಾಣಿಯಲ್ಲಿ ಕೃಷಿ ಕಾರ್ಯಕ್ರಮಗಳಿಗೆ ಖ್ಯಾತರಾಗಿರುವ ರಾಯಚೂರ ಆಕಾಶವಾಣಿ ಮುಖ್ಯಸ್ಥರಾದಡಾ.ವಿ.ಜಿ.ಬಾವಲತ್ತಿ ಅವರಿಗೆ ಆಕಾಶವಾಣಿಯಿಂದ ಬೀಳ್ಕೊಡುಗೆಹಾಗೂ ಅಭಿನಂದನಾ ಸಮಾರಂಭವು ಮೇ 29ರಂದು ರಾಯಚೂರಿನಲ್ಲಿ ಹೃದಯಸ್ಪರ್ಶಿಯಾಗಿ ನೆರವೇರಿತು.

ತಳಿರು ತೋರಣದಿಂದ ಅಲಂಕೃತಗೊಳಿಸಿದ್ದ ಎತ್ತಿನ ಬಂಡಿಯಲ್ಲಿ ಡಾ.ವಿ.ಜಿ.ಭಾವಲತ್ತಿ ದಂಪತಿ ಮತ್ತು ಪರಿವಾರದವರನ್ನು ಕೂಡಿಸಿ ಕಾರ್ಯಕ್ರಮ ಸ್ಥಳಕ್ಕೆ ಮೆರವಣಿಗೆಯೊಂದಿಗೆ ಗೌರವದಿಂದ ಕರೆತಂದಿದ್ದು ವಿಶೇಷವಾಗಿತ್ತು.

ಇಂದಿನ ಆಧುನೀಕತೆಯ ಕಾಲದಲ್ಲಿ ಎತ್ತು ಬಂಡಿಗಳು ಕಣ್ಮರೆಯಾಗಿರುವಾಗ ಗ್ರಾಮೀಣ ಶೈಲಿಯಲ್ಲಿ ಮೆರವಣಿಗೆ ನಡೆದಿರುವುದನ್ನು ಸಾರ್ವಜನಿಕರು ಕಣ್ತುಂಬಿಕೊಂಡು ಅಭಿನಂದಿಸಿದರು.

ಬಳಿಕ ಆಕಾಶವಾಣಿಯ ಆವರಣದಲ್ಲಿ ಕಿಕ್ಕಿರಿದು ಸೇರಿದ್ದ ಅಭಿಮಾನಿಗಳ ಸಮ್ಮುಖದಲ್ಲಿ ಡಾ.ಬಾವಲತ್ತಿ ಅವರಿಗೆ ನಡೆದ ಬೀಳ್ಕೊಡುಗೆ ಹಾಗು ಅಭಿನಂದನಾ ಸಮಾರಂಭವನ್ನು ಬಾವಲತ್ತಿ ಅವರ ಸಹಪಾಠಿಗಳಾಗಿರುವ

ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಎಂ.ಹನುಮಂತಪ್ಪ ಅವರು ಉದ್ಘಾಟಿಸಿದ್ದು ವಿಶೇಷವಾಗಿತ್ತು.

ಈ ವೇಳೆ ಹನುಮಂತಪ್ಪ ಅವರು ಮಾತನಾಡಿ, ಅಧಿಕಾರ ದೊಡ್ಡದಲ್ಲ ಅಭಿಮಾನ ದೊಡ್ಡದು ಎಂಬಂತೆ ಅಪಾರ ರೈತಾಪಿ ವರ್ಗ ಸೇರಿದಂತೆ ವಿವಿಧ ಕ್ಷೇತ್ರಗಳ ಅಭಿಮಾನಿಗಳನ್ನು ಹೊಂದಿದ ಡಾ. ವಿ.ಜಿ ಬಾವಲತ್ತಿ ಅವರು ಆಕಾಶವಾಣಿಯಲ್ಲಿ ಅನೇಕ ರೈತರ ಕಾರ್ಯಕ್ರಮಗಳನ್ನು ನೀಡಿ ಕೃಷಿ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದಾರೆ.

ಬಾವಲತ್ತಿ ಅವರು ನಾನು ಸಹಪಾಠಿಗಳಾಗಿದ್ದು, ಇಬ್ಬರೂ ಕೃಷಿ ಪದವಿ ಪಡೆದುಕೊಂಡೆವು. ಅವರು ಆಕಾಶವಾಣಿಗೆ ಸೇವೆಯಲ್ಲಿ ಸೇರಿ ರೈತಪರ ಕಾರ್ಯಕ್ರಮಗಳನ್ನು ಮಾಡುತ್ತಾ ಕೃಷಿ ಕ್ಷೇತ್ರಕ್ಕೆ ಸೇವೆ ಸಲ್ಲಿಸಿದ್ದಾರೆ. ಅವರ ಜೊತೆ ಕೃಷಿ ವಿವಿಯ ವಿವಿಧ ವಿಭಾಗಗಳ ಪ್ರಾಧ್ಯಾಪಕರೊಂದಿಗೆ ಅನೇಕ ಸಂದರ್ಶನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ರೈತರಿಗೆ ನಿಖರವಾದ ಮಾಹಿತಿ ನೀಡಿದ್ದಾರೆ. ಅವರ ಕೃಷಿ ಕಾರ್ಯಕ್ರಮಗಳು ಸೇರಿದಂತೆ ಜನಪದ, ಆರೋಗ್ಯ ಹಾಗೂ ವಿವಿಧ ಕ್ಷೇತ್ರಗಳ ಕುರಿತ ಕಾರ್ಯಕ್ರಮಗಳಿಂದ ಅವರು ರೈತರಷ್ಟೇ ಅಲ್ಲದೇ ವಿವಿಧ ಕ್ಷೇತ್ರದ ಅಪಾರ ಅಭಿಮಾನಿಗಳನ್ನು ಹೊಂದಿದ್ದಾರೆ. ಅವರ 30 ವರ್ಷಗಳ ಸುಧೀರ್ಘ ಪಯಣ-ಕ್ಕೆ ಅವರ ಧರ್ಮಪತ್ನಿ ಅವರ ಸಹಕಾರ ಮೆಚ್ಚುವಂತಹದ್ದು ಅವರ ನಿವೃತ್ತ ಜಿವನ ಸುಖಕರವಾಗಿರಲಿ ಅವರ ಸೇವೆ ಕೃಷಿ ಕ್ಷೇತ್ರಕ್ಕೆ ಹೀಗೆ ಮುಂದುವರೆಯಲಿ ಎಂದು ಶುಭ ಹಾರೈಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಆಕಾಶವಾಣಿ ನಿವೃತ್ತ ಮುಖ್ಯಸ್ಥರಾದ ಆಂಜನಪ್ಪ ಅವರು ಮಾತನಾಡಿ, ನನಗೆ ನನ್ನ ಅಧಿಕಾರವಧಿಯಲ್ಲಿ 17 ಬಾರಿ ವರ್ಗಾವಣೆ ಮಾಡಲಾಗಿದೆ.

ಒಬ್ಬ ಅಧಿಕಾರಿ ಒಂದೇ ಸ್ಥಳದಲ್ಲಿ ಸತತ 30 ವರ್ಷಗಳ ಸೇವೆಯಲ್ಲಿ ಯಾವುದೇ ಮನಸ್ತಾಪ, ಅಸಮಾಧಾನ ಹಾಗೂ ಸಿಬ್ಬಂದಿಯ ಜೊತೆ ಅಪಸ್ವರವಿಲ್ಲದೇ ಡಾ. ವಿ.ಜಿ ಬಾವಲತ್ತಿ ಅವರು ಸೇವೆ ಸಲ್ಲಿಸಿರುವುದು ಹಾಗೂ ಅಪಾರ ಅಭಿಮಾನಿಗಳನ್ನು ಹೊಂದಿರುವುದು ಅತ್ಯಂತ ಆಶ್ಚರ್ಯವಾಗಿದೆ ಎಂದರೆ ಅವರ ಸರಳ ಹಾಗೂ ಮೃದು ವ್ಯಕ್ತಿತ್ವ, ಅಧಿಕಾರಿ ಎಂಬ ಅಹಂ ಇಲ್ಲದೇ ಎಲ್ಲಾ ಸಿಬ್ಬಂದಿಯನ್ನು ಸೌಜನ್ಯ ಮತ್ತು ಸ್ನೇಹಮಯವಾಗಿ ಕಾಣುವ ಅವರ ಸ್ವಭಾವ ಅವರನ್ನು 30 ವರ್ಷಗಳ ಕಾಲ ಒಂದೇ ಸ್ಥಳದಲ್ಲಿ ಅಭಿಮಾನಿಗಳ ಪ್ರೀತಿ ಕಟ್ಟಿಹಾಕಿದೆ. ಇಂದು ಅವರ ನಿವೃತ್ತಿ ಜೀವನದ ಕಾರ್ಯಕ್ರಮ ನಾನು ಊಹಿಸಲಾಗದಷ್ಟು ವಿಜೃಂಭಣೆಯಾಗಿ ಜರುಗಿರುವುದು ಆಕಾಶವಾಣಿ ಇತಿಹಾಸದಲ್ಲೇ ಮೊದಲು ಆಗಿರಬಹುದು ಎಂದರು.

ನಿವೃತ್ತ ಆಕಾಶವಾಣಿ ಮುಖ್ಯಸ್ಥರಾದ ಬಸವರಾಜ ಜಡಿ ಅವರು ಮಾತನಾಡಿ, ಡಾ. ವಿ.ಜಿ ಭಾವಲತ್ತಿ ಅವರ ಸ್ವಭಾವ ಮತ್ತು ಅವರ ಸರಳತೆಗೆ ಸಾಕಷ್ಟು ಅಭಿಮಾನಿಗಳನ್ನು ಹೊಂದಿರುವುದು ಎಂಬುದಕ್ಕೆ ಈ ಕಾರ್ಯಕ್ರಮವೇ ಸಾಕ್ಷಿಯಾಗಿದೆ. ಯಾವುದೇ ಕ್ಷೇತ್ರಗಳು ಮುಖ್ಯವಾದರೂ ಪಂಚಭೂತಗಳ ಕ್ಷೇತ್ರ ಕೃಷಿ ಕ್ಷೇತ್ರವಾಗಿದೆ. ಆಧುನೀಕತೆ ಹೆಸರಲ್ಲಿ ಇತ್ತೀಚಿನ ದಿನಗಳಲ್ಲಿ ಬಹುತೇಕ ರಾಸಾಯನಿಕ ಬಳಕೆಯಿಂದ ಕೃಷಿ ಕ್ಷೇತ್ರದ ಅವನತಿಯ ಭೀತಿ ಹೆಚ್ಚಾಗುತ್ತಿದೆ . ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಅನ್ನದಾತನಿಲ್ಲದೇ ಕರಿಬೇವಿನ ಸೊಪ್ಪಿಗೂ ಅತ್ಯಂತ ಬೆಲೆ ತೆರಬೇಕಾದ ಪರಿಸ್ಥಿತಿ ನಿರ್ಮಾಣವಾಗುತ್ತದೆ.

ಆದ್ದರಿಂದ ಕೃಷಿಯಲ್ಲಿ ಸಾವಯವ ಪದ್ಧತಿ ಹೆಚ್ಚಾಗಿ ಭೂಮಿಯ ಫಲವತ್ತತೆ ಕಾಪಾಡುವಲ್ಲಿ ರೈತರಿಗೆ ಉತ್ತಮ ಮಾಹಿತಿ ಮತ್ತು ಸಲಹೆ ನೀಡಿ ಕೃಷಿ ಕ್ಷೇತ್ರವನ್ನು ಕಾಪಾಡಬೇಕಾಗಿದೆ. ಅಂತಹ ಕಾರ್ಯದಲ್ಲಿ ಡಾ.ವಿ.ಜಿ ಬಾವಲತ್ತಿ ಅವರ ಸೇವೆ ಶ್ಲಾಘನೀಯವಾಗಿದ್ದು ಅವರ ಮನಸ್ಸು ಪರಿಶುದ್ಧವಾಗಿದ್ದು ಅವರ ಸೇವೆಯಿಂದ ಅಪಾರ ರೈತಾಪಿ ಅಭಿಮಾನಿಗಳನ್ನು ಹೊಂದಿದ್ದಾರೆ. ಅಲ್ಲದೇ ವೈದ್ಯಕೀಯ, ಸಾಹಿತ್ಯ ಮತ್ತು ಸಂಗೀತ, ಶಿಕ್ಷಣ, ಬ್ಯಾಂಕ್ ಮತ್ತು ಮಾಧ್ಯಮ ಸೇರಿದಂತೆ ನಾನಾ ಕ್ಷೇತ್ರದ ಮಹನೀಯರು ಕಾರ್ಯಕ್ರಮಲ್ಲಿ ಶುಭ ಹಾರೈಸಿಲು ಆಗಮಿಸಿರುವುದು ಅವರ ವ್ಯಕ್ತಿತ್ವಕ್ಕೆ ಹಿಡಿದ ಕೈಗನ್ನಡಿಯಾಗಿದೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ. ವಿ.ಜಿ. ಬಾವಲತ್ತಿ ಅವರು, 1994ರಲ್ಲಿ ಸೇವೆಯಲ್ಲಿ ಸೇರಿದ ನನಗೆ ಮೇ 29ಕ್ಕೆ 30 ವರ್ಷಗಳು ಸಂದಿವೆ ಎಂದಾದರೆ ನಂಬಲು ಅಸಾಧ್ಯವಾಗಿದ್ದು, 30 ವರ್ಷಗಳು ಕೇವಲ 3 ಗಂಟೆಯಂತೆ ಕಳೆದುಹೋಗಿವೆ. ಇದಕ್ಕೆ ಈ ಭಾಗದ ರೈತರು, ಸಿಬ್ಬಂದಿ ಹಾಗೂ ಇಲ್ಲಿನ ಮಣ್ಣಿನ ಮೇಲಿನ ಆಸಕ್ತಿ ಮತ್ತು ಎಲ್ಲರ ಅಭಿಮಾನದಿಂದಾಗಿ ನಾನು ಬೇ-ರೆಡೆ ವರ್ಗಾವಣೆ ಕೋರುವ ಅವಕಾಶವೇ ಬರಲಿಲ್ಲ. ಅದಕ್ಕೆ ಸದಾ ಚಿರ ಋಣಿಯಾಗಿದ್ದೇನೆ. ನನ್ನ ಅಧಿಕಾರವಧಿಯಲ್ಲಿ ಯಾರೊಂದಿಗೂ ಮನಸ್ತಾಪವಿಲ್ಲದೆ ಎಲ್ಲರ ಸಹಕಾರ ಹಾಗೂ ಪ್ರೀತಿ ಲಭಿಸಿದೆ.

ಈ ಭಾಗದಲ್ಲಿಯೇ ನನ್ನ ಧರ್ಮಪತ್ನಿ ದೊರಕಿರುವುದು ನಾನು ಈ ಭಾಗವನ್ನು ಎಂದಿಗೂ ಮೆರಯಲು ಸಾಧ್ಯವಿಲ್ಲ ಎಂದರು. ಈ ಭಾಗದ ಕೃಷಿ ಕ್ಷೇತ್ರದ ಅಭಿವೃದ್ದಿಗಾಗಿ ರೈತರಿಗೆ ನಿಖರ ಮತ್ತು ಸಮರ್ಪಕ ಮಾಹಿತಿ ಸಲಹೆಯೊಂದಿಗೆ ಅವರ ಸಮಸ್ಯೆಗಳಿಗೆ ಸ್ಪಂದಿಸುವ ಕಾರ್ಯ ಮಾಡಿದ್ದೇನೆ ಎಂಬ ತೃಪ್ತಿ ನನಗಿದೆ.

ಜಿಲ್ಲೆಯ ವಿವಿಧ ತಾಲೂಕುಗಳ ಗ್ರಾಮಗಳಿಗೆ ಭೇಟಿ ನೀಡಿ ರೈತರ ಬೆಳೆ ವೀಕ್ಷಣೆ ಮಾಡಿ ಉತ್ತಮ ಇಳುವರಿಗೆ ಕೃಷಿ ಮತ್ತು ಕೀಟ ಅಧಿಕಾರಿಗಳೊಂದಿಗೆ ಸಂದರ್ಶನ ಮೂಲಕ ಸೂಕ್ತ ಸಲಹೆ ನೀಡಲು ಸಹಕಾರಿಯಾಗುವಂತೆ ಕಾರ್ಯಕ್ರಮಗಳನ್ನು ಮಾಡಿದ್ದೇನೆ ಎಂಬ ಮನಶಾಂತಿ ನನಗಿದೆ. ನಾನು ಈ ಭಾಗಕ್ಕೆ ಏನು ನೀಡಿದ್ದೇನೆ ಎಂಬುದು ಮುಖ್ಯವಲ್ಲ ಆದರೆ ಈ ಭಾಗದಿಂದ ಕೇವಲ ಧ್ವನಿ ಮೂಲಕ ನನ್ನನ್ನು ಕಾಣಲು ಬರುವ ಅನೇಕ ಅಭಿಮಾನಿ ರೈತರ ಅಭಿಮಾನದ ನುಡಿಗಳು ಹಾಗು ಅವರ ಪ್ರೀತಿಯನ್ನು ಪಡೆದಿದ್ದೇನೆ. ಇಂದು ಕಾರ್ಯಕ್ರಮಕ್ಕೆ ದೂರದ ಊರಿಂದ ನನ್ನನ್ನು ಹರಸಲು ಬಂದಿರುವ ಅನ್ನದಾತರಿಗೆ ಅಭಿನಂದನೆಗಳಲ್ಲದೇ ನಾನೇನು ಕೊಡಬಲ್ಲೆ. ನಾನು ನನ್ನ ನಿವೃತ್ತ ಜೀವನದಲ್ಲೂ ಕೃಷಿ ಕ್ಷೇತ್ರದಲ್ಲೇ ಸೇವೆ ಸಲ್ಲಿಸುತ್ತಾ ರೈತರೊಂದಿಗೆ ಸಂಪರ್ಕದಲ್ಲಿರುತ್ತೇನೆ ಎಂದರು.

ಕಾರ್ಯಕ್ರಮದಲ್ಲಿ ಆಕಾಶವಾಣಿ ಕಾರ್ಯಕ್ರಮ ಮುಖ್ಯಸ್ಥರಾದ ವೆಂಕಟೇಶ ಬೇವಿನಬೆಂಚಿ ಪ್ರಾಸ್ತಾವಿಕ ಮಾತನಾಡಿದರು. ಉದ್ಘೋಷಕರಾದ ವೆಂಕಟೇಶ ಹೂಗಾರ , ಶ್ರೀದೇವಿ ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು. ಕಾರ್ಯಕ್ರಮಕ್ಕೆ ಆಗಮಿಸಿದ ಹಿರಿಯ ಪತ್ರಕರ್ತ ಹಾಗೂ ಆಕಾಶವಾಣಿ, ಜಿಲ್ಲಾ ವಾರ್ತಾ ಪತ್ರ ಸುದ್ದಿ ಸಂಪಾದಕರಾದ ಬಿ. ವೆಂಕಟಸಿಂಗ್, ಹಿರಿಯ ಸಾಹಿತಿ ಲಕ್ಷ್ಮೀದೇವಿ ಶಾಸ್ತ್ರಿ ಅವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಆಕಾಶವಾಣಿ ತಾಂತ್ರಿಕ ವಿಭಾಗದ ಮುಖ್ಯಸ್ಥರಾದ ಅರವಿಂದ ಅವರು ವಹಿಸಿದ್ದರು.

ವೇದಿಕೆಯಲ್ಲಿ ಲೆಕ್ಕ ವಿಭಾಗದ ನಾಗರತ್ನ ಇದ್ದರು. ಕಾರ್ಯಕ್ರಮದಲ್ಲಿ ರಿಮ್ಸನ ವೈದ್ಯಕೀಯ ಶಿಕ್ಷಣ ಹಾಗೂ ಸಂಶೋಧನಾ ಕೇಂದ್ರದ ಪಾಚಾರ್ಯ ಡಾ.ಬಸವರಾಜ ಪಾಟೀಲ, ಕೃಷಿ ಇಲಾಖೆ ಸಹಾಯಕ ನಿರ್ದೇಶಕಿ ದೀಪಾ, ಕೃಷಿ ಇಲಾಖೆಯ ತೋಟಗಾರಿಕೆ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಸುರೇಶಕುಮಾರ್ ಕೃಷಿ ವಿವಿಯ ವಿಜ್ಞಾನಿಗಳು, ವಾರ್ತಾ ಇಲಾಖೆಯ ಅಧಿಕಾರಿ ಗವಿಸಿದ್ದಪ್ಪ, ಸಹಕಾರ ಬ್ಯಾಂಕ್‌ನ ಅಧ್ಯಕ್ಷ ವಿಶ್ವನಾಥ್ ಪಾಟೀಲ್ ತೋರಣದಿನ್ನಿ ಸೇರಿದಂತೆ ಸಾಹಿತಿಗಳು, ಕಾಲೇಜು ಪ್ರಾಧ್ಯಾಪಕರು, ಆಕಾಶವಾಣಿ ತಾಂತ್ರಿಕ ಸಿಬ್ಬಂದಿ, ಉದ್ಘೋಷಕರು, ಸಿಬ್ಬಂದಿ, ಅಭಿಮಾನಿಗಳು ಹಾಗೂ ವಿವಿಧ ಕ್ಷೇತ್ರದ ಗಣ್ಯರು ಉಪಸ್ಥಿತರಿದ್ದರು. ಉದ್ಘೋಷಕರಾದ ವಿರೇಶ್ ಪ್ರಾರ್ಥಿಸಿದರು. ಡಾ. ವಿಜೇಯೇಂದ್ರ ನಿರೂಪಿಸಿದರು.

ಬ್ಯಾಂಕ್ ಪ್ರತಿನಿಧಿಗಳಿಗೆ ಸಂಸದ ಗದ್ದಿಗೌಡರ ಸೂಚನೆ

## ಸಕಾಲದಲ್ಲಿ ಸಾಲ ಸೌಲಭ್ಯಕ್ಕೆ ಮಂಜೂರಾತಿ ನೀಡಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.30– ಫಲಾನುಭವಿಗಳನ್ನು ಅನಗತ್ಯವಾಗಿ ಅಲೆದಾಡಿಸುವ ಪದ್ಧತಿ ಬಿಟ್ಟು ಪ್ರಾಥಮಿಕ ಹಂತದಲ್ಲಿಯೇ ದಾಖಲೆಗಳನ್ನು ಪರಿಶೀಲಿಸುವ ಮೂಲಕ ಸಾಲ ಸೌಲಭ್ಯವನ್ನು ತ್ವರಿತವಾಗಿ ಕಲ್ಪಿಸುವಂತೆ ಸಂಸದ ಪಿ.ಸಿ.ಗದ್ದಿಗೌಡರ ಬ್ಯಾಂಕ್ ಪ್ರತಿನಿಧಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ನಡೆದ ಡಿಸಿಸಿ, ಡಿಎಲ್‌ಆರ್‌ಸಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸರಕಾರದ ವಿವಿಧ ಯೋಜನೆಗಳ ಅಡಿಯಲ್ಲಿ ಫಲಾನುಭವಿಗಳಿಗೆ ಇಲಾಖೆಯ ಅಧಿಕಾರಿಗಳು, ಬ್ಯಾಂಕ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಸೂಕ್ತ ಮಾರ್ಗದರ್ಶನ ನೀಡಬೇಕು. ಬ್ಯಾಂಕ್‌ಗಳಲ್ಲಿ ಸಾಲ ಮಂಜೂರಾತಿಗಾಗಿ ಬಾಕಿ ಇರುವ ಎಲ್ಲ ಅರ್ಜಿಗಳನ್ನು ಜೂನ್ 16 ರೊಳಗಾಗಿ ಇತ್ಯರ್ಥಪಡಿಸುವಂತೆ ಸೂಚನೆ ನೀಡಿದರು.

ಆರ್‌ಬಿಐನ ಅಗ್ರಣಿ ಅಧಿಕಾರಿ ವಿಜಯಶ್ರೀ, ಆದ್ಯತಾ ವಲಯದ ಎಂ.ಎಸ್.ಎಂಇ ಸಾಲ ಅರ್ಜಿ 25 ಲಕ್ಷ ರೂ.ಗಳ ವರೆಗೆ 14 ದಿನಗಳಲ್ಲಿ ಇತ್ಯರ್ಥಪಡಿಸುವ ಕಾಲಮಿತಿ ಬಗ್ಗೆ ಹಾಗೂ ಇತರೆ ಮಾಹಿತಿ ಬಗ್ಗೆ ತಿಳಿಸಿದರು.

ಜಿಲ್ಲಾ ಅಗ್ರಣಿ ಬ್ಯಾಂಕಿನ ವ್ಯವಸ್ಥಾಪಕ ರಾಜಕುಮಾರ ಹೂಗಾರ, ಮಾರ್ಚ 25ಕ್ಕೆ ಕೊನೆಗೊಂಡ ತ್ರೈಮಾಸಿಕ ಡಿಎಲ್‌ಆರ್‌ಸಿ ಸಭೆಯ ಕಾರ್ಯಸೂಚಿಯ ಬಗ್ಗೆ ಸಭೆಗೆ ತಿಳಿಸಿದರು. ಆದ್ಯತಾ ವಲಯದಲ್ಲಿ ಕೃಷಿಗೆ ಸಂಬಂಧಿಸಿದ ಶೇ.96.66 ರಷ್ಟು ಸಾಧನೆ ಮಾಡಲಾಗಿದೆ. ಬೆಳೆ ಸಾಲದಲ್ಲಿ ಶೇ.102.91, ಇತರೆ ಕೃಷಿ ಸಾಲದಲ್ಲಿ ಶೇ.81 ರಷ್ಟು, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ಶೇ.89.74 ರಷ್ಟು, ಇತರೆ ಆದ್ಯತಾ ವಲಯಕ್ಕೆ ಶೇ.74.51 ರಷ್ಟು ಸಾಲ ವಿತರಣೆ ಮಾಡಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸಾಲ ಯೋಜನೆಯ 2025–26ನೇ ಸಾಲಿನ ಪುಸ್ತಕ ಬಿಡುಗಡೆ ಮಾಡಲಾಯಿತು. ಸಭೆಯಲ್ಲಿ ರಾಜ್ಯಸಭಾ ಸದಸ್ಯ ನಾರಾಯಣ ಸಾ ಭಾಂಡಗೆ, ನಬಾರ್ಡನ ಡಿಡಿಎಂ ಮಂಜುನಾಥ ರೆಡ್ಡಿ, ಕೆನರಾ ಬ್ಯಾಂಕ್‌ನ ರಿಜಿನಲ್ ಮ್ಯಾನೇಜರ ರಾಜಶೇಖರ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಬ್ಯಾಂಕಿನ ಪ್ರತಿನಿಧಿಗಳು, ಆರ್ಥಿಕ ಸಾಕ್ಷರತೆ ಕೇಂದ್ರದ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಹೇಮರಡ್ಡಿ ಮಲ್ಲಮ್ಮಳ ಬದುಕು ಆದರ್ಶಪ್ರಾಯ–ಹುಚ್ಚೇಶ್ವರ ಶ್ರೀಗಳು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.30–ಶಿವಶರಣೆ ಹೇಮರಡ್ಡಿ ಮಲ್ಲಮ್ಮಳ ಬದುಕು ಮನುಕುಲಕ್ಕೆ ಆದರ್ಶಪ್ರಾಯವಾಗಿದ್ದು, ಅವಳ ತಾಳ್ಮೆ, ಸಹನೆಯ ಗುಣಗಳನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಂಡರೆ ಕುಟುಂಬ ವ್ಯವಸ್ಥೆ ಆನಂದಮಯವಾಗಿರುತ್ತದೆ ಎಂದು ಕಮತಗಿಯ ಹೊಳೆ ಹುಚ್ಚೇಶ್ವರ ಸ್ವಾಮೀಜಿ ಹೇಳಿದರು.

ಸಮೀಪದ ಬೇವೂರ ಗ್ರಾಮದಲ್ಲಿ ರಡ್ಡಿ ಬಳಗ ಶುಕ್ರವಾರ ಹಮ್ಮಿಕೊಂಡಿದ್ದ ಹೇಮರಡ್ಡಿ ಮಲ್ಲಮ್ಮಳ 603 ನೇ ಜಯಂತಿ ಕಾರ್ಯಕ್ರಮದ ಸಾನಿಧ್ಯವಹಿಸಿ ಮಾತನಾಡಿದ ಅವರು, ಹೇಮರಡ್ಡಿ ಮಲ್ಲಮ್ಮ ತನ್ನ ಆದರ್ಶದ ಬದುಕಿನ ಮೂಲಕ ದೇವತೆಯಾಗಿ ಪೂಜಿತಗೊಂಡಿದ್ದಾಳೆ ಎಂದರು.

ವ್ಯಕ್ತಿ ಎಷ್ಟು ಸಮಯ ಬದುಕಿದ ಎನ್ನುವುದು ಮುಖ್ಯವಲ್ಲ. ಬದುಕಿನ ಅವಧಿಯಲ್ಲಿ ಮಾಡಿದ ಸಾಧನೆ ಮುಖ್ಯವಾಗುತ್ತಿದ್ದು, ಇದಕ್ಕೆ ಹೇಮರಡ್ಡಿ ಮಲ್ಲಮ್ಮಳ ಸಾಧನೆಯ ಬದುಕು ಸಮಾಜಕ್ಕೆ ಮಾದರಿಯಾಗಿದೆ ಎಂದು ಶ್ರೀಗಳು ಹೇಳಿದರು.

### ವೈಭವದ ಮೆರವಣಿಗೆ

ಬೆಳಿಗ್ಗೆ ಹುಚ್ಚೇಶ್ವರ ದೇವಸ್ಥಾನದಿಂದ ಹೇಮರಡ್ಡಿ ಮಲ್ಲಮ್ಮಳ ಭಾವಚಿತ್ರದ ಮೆರವಣಿಗೆ ಹೊರಟು ಗ್ರಾಮದ ಪ್ರಮುಖ ಬೀದಿಗಳಲ್ಲಿ ವೈಭವದಿಂದ ಜರುಗಿತು. ಕುದುರೆ ಕುಣಿತ, ಡೊಳ್ಳು, ಹಲಗೆ ಮೇಳ ಹಾಗೂ ಕುಂಭ ಹೊತ್ತ ಮಹಿಳೆಯರು ಮೆರವಣಿಗೆಗೆ ಸಾಥ್ ನೀಡಿದರು. ಶ್ರೀಶೈಲ ಮಲ್ಲಿಕಾರ್ಜುನ, ಹೇಮರಡ್ಡಿ ಮಲ್ಲಮ್ಮ ಮತ್ತಿತರ ಮಹನೀಯರ ವೇಷಭೂಷಣ ತೊಟ್ಟಿದ್ದ ಮಕ್ಕಳು ಗಮನ ಸೆಳೆದರು. ಮಧ್ಯಾಹ್ನ ಪ್ರಸಾದ ವ್ಯವಸ್ಥೆ ನಡೆಯಿತು.

ನಿಡಗುಂದಿಯ ರುದ್ರಮುನಿ ಶಿವಾಚಾರ್ಯರು,ವಿಜಯಪುರದ ವಿರುಪಾಕ್ಷ ದೇವರು ಮಾತನಾಡಿ, ಹೇಮರಡ್ಡಿ ಮಲ್ಲಮ್ಮ ಸಂಸಾರದಲ್ಲಿದ್ದುಕೊಂಡೇ ಸದ್ಗತಿ ಪಡೆದಳು. ಅವರ ಜೀವನ ನಾರಿ ಕುಲಕ್ಕೆ ಮಾದರಿ ಎಂದರು.

ಹುನಗುಂದದ ಪ್ರೊ.ಎಸ್.ಆರ್.ನಾಗನ್ನವರ ಉಪನ್ಯಾಸ ನೀಡಿ, ಹೇಮರಡ್ಡಿ ಮಲ್ಲಮ್ಮ ಸಂಸ್ಕಾರವಂತಳಾಗಿ ಸಹನೆ, ತ್ಯಾಗ, ಭಕ್ತಿಯುಳ್ಳವಳಾಗಿ ಜೀವನ ಮಾಡಿ ಶ್ರೀಶೈಲ ಮಲ್ಲಿಕಾರ್ಜುನನನ್ನು ಒಲಿಸಿಕೊಂಡು ಭಕ್ತಿಯಿಂದ ಮುಕ್ತಿ ಸಾಧ್ಯ ಎಂಬುದನ್ನು ತೋರಿಸಿದಳು ಎಂದು ಹೇಳಿದರು.

ಪೂಜ್ಯ ಗ್ಯಾನಪ್ಪಜ್ಜನವರು ಅಧ್ಯಕ್ಷತೆ ವಹಿಸಿದ್ದರು. ವಕೀಲ ವಿಶ್ವನಾಥ ಮಾಗನೂರ ಕಾರ್ಯಕ್ರಮ ಉದ್ಘಾಟಿಸಿದರು. ಜಿ.ವೈ.ಹೆರಕಲ್, ವಕೀಲ ಜಿ.ಜಿ.ಮಾಗನೂರ, ಶೇಕಣ್ಣ ಹೆರಕಲ್, ಶರಣಪ್ಪ ಮಾಗನೂರ, ಶಿವು ತುರಡಗಿ, ಸುರೇಶ ಆದಾಪೂರ, ಶಂಕ್ರಪ್ಪ ಹದ್ಲಿ, ವಕೀಲ ಬಿ.ಬಿ.ತೆಗ್ಗಿನಮನಿ, ವಿಜಯ ತೆಗ್ಗಿನಮನಿ ವೇದಿಕೆಯಲ್ಲಿದ್ದರು.

ಕಾರ್ಯಕ್ರಮದಲ್ಲಿ ಸಾಧಕರು ಹಾಗೂ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಮೇಘಾ ತುರಡಗಿ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಬಸು ಹೆರಕಲ್ ಸ್ವಾಗತಿಸಿದರು. ಎಂ.ಎಸ್.ಮೇಟಿ ಹಾಗೂ ಎಸ್.ಎಸ್.ಆದಾಪೂರ ನಿರೂಪಿಸಿದರು.

## ಬಿಲ್‌ಕೆರೂರಿನಲ್ಲಿ ನಾಳೆ ಉಚಿತ ಕಣ್ಣು ತಪಾಸಣೆ ಶಿಬಿರ

ಮಲ್ಲಮ್ಮ ನುಡಿ ವಾರ್ತೆ


ಬಾಗಲಕೋಟೆ,ಮೇ.30–ತಾಲೂಕಿನ ಬಿಲ್‌ಕೆರೂರಿನಲ್ಲಿ ಜೂ.1 ರಂದು ವಿಜಯಪುರದ ಅನುಗ್ರಹ ಕಣ್ಣಿನ ಆಸ್ಪತ್ರೆ ಹಾಗೂ ಬಿಲ್ ಕೆರೂರ ಗ್ರಾಮಸ್ಥರ ಸಹಯೋಗದಲ್ಲಿ ಉಚಿತ ಕಣ್ಣಿನ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರ ಹಮ್ಮಿಕೊಳ್ಳಲಾಗಿದೆ.

ಲಿಂ.ರುದ್ರಮುನಿ ಶಿವಯೋಗಿ ಶಿವಾಚಾರ್ಯ ಶ್ರೀಗಳ 44 ನೇ ಪುಣ್ಯಸ್ಮರಣೆ ಕಾರ್ಯಕ್ರಮದ ಅಂಗವಾಗಿ ಗ್ರಾಮದ ಬಿಲ್ವಾಶ್ರಮ ಹಿರೇಮಠ ಪ್ರಾಥಮಿಕ ಶಾಲಾ ಆವರಣದಲ್ಲಿ ಭಾನುವಾರ ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ಶಿಬಿರ ನಡೆಯಲಿದೆ.

ನೇತ್ರ ತಜ್ಞ ಡಾ.ಪ್ರಭುಗೌಡ ಲಿಂಗದಳ್ಳಿ(ಚಬನೂರ) ನೇತೃತ್ವದ ವೈದ್ಯರ ತಂಡ ಶಿಬಿರದಲ್ಲಿ ಭಾಗವಹಿಸಿ ನೇತ್ರ ತಪಾಸಣೆ ನಡೆಸಲಿದ್ದು, ಅರ್ಹ ರೋಗಿಗಳನ್ನು ವಿಜಯಪುರದ ಅನುಗ್ರಹ ಕಣ್ಣಿನ ಆಸ್ಪತ್ರೆಯಲ್ಲಿ ಉಚಿತ ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸೆ ಮಾಡಿಸಿ, ಲೆನ್ಸ್ ಅಳವಡಿಸಲಾಗುವುದು.

ಬಿಲ್‌ಕೆರೂರ ಹಾಗೂ ಸುತ್ತ ಮುತ್ತಲಿನ ಗ್ರಾಮಗಳ ಜನ ಈ ಶಿಬಿರದ ಪ್ರಯೋಜನ ಪಡೆಯುವಂತೆ ಬಿಲ್ವಾಶ್ರಮ ಹಿರೇಮಠದ ಸಿದ್ಧಲಿಂಗ ಶಿವಾಚಾರ್ಯ ಶ್ರೀಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರಕಾರಿ ಶಾಲೆಗಳನ್ನು ಉಳಿಸುವ ಕೆಲಸ ಆಗಬೇಕು–ಸಾವಕಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.30–ಸರಕಾರಿ ನೌಕರರು ಮತ್ತು ಜನಪ್ರತಿನಿಧಿಗಳ ಕುಟುಂಬದ ಮಕ್ಕಳು ಕಡ್ಡಾಯವಾಗಿ ಸರಕಾರಿ ಶಾಲೆಗಳಲ್ಲೇ ಓದುವಂತೆ ಕಾನೂನು ರೂಪಿಸಬೇಕು. ಅಂದಾಗ ಮುಂಬರುವ ದಿನಮಾನಗಳಲ್ಲಿ ಸರ್ಕಾರಿ ಶಾಲೆಗಳು ಅಸ್ತಿತ್ವದಲ್ಲಿ ಉಳಿಯುತ್ತವೆ ಎಂದು ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಡಿ.ಎಂ.ಸಾವಕಾರ ಅಭಿಪ್ರಾಯಪಟ್ಟರು.

ಜಿಲ್ಲೆಯ ಬೀಳಗಿ ತಾಲೂಕಿನ ಅರಕೇರಿ ಗ್ರಾಮದಲ್ಲಿ ದಾಖಲಾತಿ ಆಂದೋಲನ, ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿ, ಸಧ್ಯಕ್ಕೆ ವಿದ್ಯಾವಂತರು, ಬುದ್ಧಿವಂತರಿಗೆ ಕೊರತೆಯಿಲ್ಲ. ಆದರೆ ಪ್ರಜ್ಞಾವಂತರ ಕೊರತೆಯಿದೆ. ಶಿಕ್ಷಕರು ವಿದ್ಯೆ ಮತ್ತು ಬುದ್ಧಿ ಜೊತೆಗೆ ಮಕ್ಕಳನ್ನು ಪ್ರಜ್ಞಾವಂತರನ್ನಾಗಿ ಮಾಡಬೇಕೆಂದು ಹೇಳಿದರು.

ವಿಶ್ರಾಂತ ಮುಖ್ಯೋಪಾಧ್ಯಾಯ ಆರ್.ಬಿ.ನಬಿವಾಲೆ ಮಾತನಾಡಿ, ಸರ್ಕಾರಿ ಶಾಲೆಯಲ್ಲಿ ಪರಿಣಿತ ಶಿಕ್ಷಕರು ಇರುವುದರಿಂದ ಪಾಲಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಬೇಕು. ಮಕ್ಕಳಿಗೆ ಗುರುವಿನ ಬಗ್ಗೆ ಭಯಭಕ್ತಿ ಇರಬೇಕು. ಮಕ್ಕಳು ದೇವಲೋಕದ ಕುಸುಮಗಳು. ಶಿಕ್ಷಕರು ಮಕ್ಕಳನ್ನು ಪ್ರೀತಿಯಿಂದ ಕಾಣಬೇಕು. ಗುಣಾತ್ಮಕ ಶಿಕ್ಷಣ ದೊರೆಯುವಂತಾಗಬೇಕು ಎಂದು ಹೇಳಿದರು.

ಕುಂದರಗಿ ಸಿಆರ್‌ಪಿ ಮಹೇಶ ತೋಟದ ಮಾತನಾಡಿ, ಶೈಕ್ಷಣಿಕ ಕಲಿಕೆಗೆ ಮಕ್ಕಳು, ಬೋಧನೆಗಾಗಿ ಶಿಕ್ಷಕರು, ಪಾಲಕರು ರಿಪ್ರೇಶ್ ಆಗಿ ಕೆಲಸ ಮಾಡಬೇಕು. ಸರ್ಕಾರವೇ ಪುಸ್ತಕ, ಸಮವಸ್ತ್ರ, ಮಧ್ಯಾಹ್ನ ಬಿಸಿ ಊಟ ನೀಡುತ್ತಿದೆ. ಆದ್ದರಿಂದ ಪಾಲಕರು ತಪ್ಪದೇ ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಕಳುಹಿಸಬೇಕು ಎಂದು ಕರೆ ನೀಡಿದರು.

ಸಾವಕಾರ ಸರಕಾರಿ ಪ್ರೌಢ ಶಾಲೆ ಎಸ್‌ಡಿಎಂಸಿ ಅಧ್ಯಕ್ಷ ಬಸವರಾಜ ಸಾವಕಾರ ಮಾತನಾಡಿ, ವೈಯಕ್ತಿಕ ಸ್ವಚ್ಛತೆ, ಸುತ್ತ ಮುತ್ತಲಿನ ಪರಿಸರ ಸ್ವಚ್ಛವಾಗಿಟ್ಟುಕೊಳ್ಳಬೇಕು. ಹಿಂದೆ ಯಾವುದೇ ಸೌಲಭ್ಯಗಳು ಇರಲಿಲ್ಲ. ಇಂದು ಸರ್ಕಾರ ಎಲ್ಲವನ್ನೂ ಉಚಿತವಾಗಿ ಕೊಡುತ್ತಿದೆ. ಇದರ ಸದುಪಯೋಗಪಡೆದುಕೊಳ್ಳಬೇಕೆಂದು ಹೇಳಿದರು.

ಮುಖ್ಯೋಪಾಧ್ಯಾಯ ಬಿ.ಎಸ್.ಭೂಷಣ್ಣವರ, ಕೆಜಿಎಸ್ ಪ್ರಭಾರ ಮುಖ್ಯಗುರು ಬಿ.ಎಂ.ಮನಗೂಳಿ, ಡಿಪಿಇಪಿ ಎಲ್‌ಪಿಎಸ್ ಮುಖ್ಯಗುರುಮಾತೆ ವಾಲೀಕಾರ, ಎಸ್‌ಡಿಎಂಸಿ ಉಪಾಧ್ಯಕ್ಷೆ ಸುಧಾ ಹನಮರ, ನಾಗಪ್ಪ ಢವಳೇಶ್ವರ, ಹನಮಂತ ಹಣಮರ ಹಾಗೂ ಎಚ್‌ಪಿಎಸ್, ಕೆಜಿಎಸ್, ಡಿಪಿಇಪಿ ಶಾಲೆಗಳ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ರೇಣುಕಾ ಕಾಜೂರ ಪ್ರಾರ್ಥಿಸಿದರು. ಎಸ್.ಎಸ್.ಹಿರೇಮಠ ನಿರೂಪಿಸಿದರು. ಬಿ.ಎಸ್.ಬೆಳಗಂಟಿ ಸ್ವಾಗತಿಸಿದರು. ಐ.ಎಚ್.ಬಳಿಗಾರ ವಂದಿಸಿದರು.

## ಇಮಡಾಪುರ ಗ್ರಾಮದ ಸಿ. ಸಿ. ರಸ್ತೆ ಕಾಮಗಾರಿ ಕಳಪೆ ಮಟ್ಟದ್ದಾಗಿದೆ ಕರವೇ.



ಮಲ್ಲಮ್ಮ ನುಡಿ ವಾರ್ತೆ

ಸೇಡಂ. ಮೇ.30. ತಾಲೂಕಿನ್ ಇಮಡಾಪುರ ಗ್ರಾಮದ ಸರಕಾರಿ ಶಾಲೆಯ ಹಿಂದೆ ಕೈಕೊಂಡಿರುವ ಸಿ. ಸಿ. ರಸ್ತೆ ಕಳಪೆ ಮಟ್ಟದ್ದಾಗಿದೆ ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜಿಲ್ಲಾ ಪಂಚಾಯತ್ ರವರಿಗೆ ಕರವೇ ವತಿಯಿಂದ ದೂರು.

ಈ ಕಾಮಕಾರಿಯಲ್ಲಿ ಕಡಿಮೆ ಪ್ರಮಾಣದ ಸಿಮೆಂಟ ಬೆರೆಸಿ ಕೆಲಸಮಾಡಲಾಗಿದೆ. ಕಾಮಗಾರಿಯನ್ನು ಮಾಡುವಾಗ ಹಳೆಯ ರಸ್ತೆಯನ್ನು ಸಂಪೂರ್ಣ ತೆಗೆದು ಅದರಮೇಲೆ ಕೆಲಸಮಾಡದಿರುವುದು ವಿಪರ್ಯಾಸದ ಸಂಗತಿ ಮನಸ್ಸಿಗೆ ಬಂದಂತೆ ಕಾಮಗಾರಿಯನ್ನು ಮಾಡಿದ್ದಾರೆ ಈಗ ಅತಿಯಾದ ಮಳೆಯಿಂದ ರಸ್ತೆ ಮೇಲೆ ಮೊಳಕಾಲು ವರೆಗೂ ನೀರು ನಿತ್ತಿದ್ದೂ ಜನರಿಗೆ ದನಕರುಗಳಿಗೆ ವಾಹನಗಳಿಗೆ ತಿರುಗಾಡಲು ಕಷ್ಟವಾಗುತ್ತಿದೆ ಎಂದು ದೂರು ನೀಡಿದರು ಈ ಸಂದರ್ಭದಲ್ಲಿ ರವಿಸಿಂಗ ರಜಪೂತ ಕರವೇ ಇಮಡಾಪುರ ಗ್ರಾಮ ಘಟಕ ಅಧ್ಯಕ್ಷ ಗುಂಡು ಇಮಡಾಪುರ ಇನ್ನಿತರರು ಇದ್ದರು.

ಜಿಲ್ಲಾ ಆಸ್ಪತ್ರೆಯ ಎದುರು ಪ್ರತಿಭಟನೆ

## ಜನೌಷಧಿ ಕೇಂದ್ರ ಮುಚ್ಚುವ ನಿರ್ಧಾರ ಹಿಂಪಡೆಯಲು ಬಿಜೆಪಿ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.30– ಜನೌಷಧಿ ಕೇಂದ್ರಗಳನ್ನು ಮುಚ್ಚುವ ನಿರ್ಧಾರವನ್ನು ಸರಕಾರ ಕೈಬಿಡಬೇಕು. ಈ ಸಂಬಂಧದ ಆದೇಶವನ್ನು ಹಿಂಪಡೆಯಬೇಕು ಎಂದು ಬಿಜೆಪಿ ಆಗ್ರಹಿಸಿದೆ.

ನವನಗರದ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಭಾರತೀಯ ಜನತಾ ಪಾರ್ಟಿ ಬಾಗಲಕೋಟೆ ಮತಕ್ಷೇತ್ರದಿಂದ ಶುಕ್ರವಾರ ಹಮ್ಮಿಕೊಂಡ ಪ್ರತಿಭಟನೆಯಲ್ಲಿ ಮಾತನಾಡಿದ ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಸರಕಾರ ನಿರ್ಧಾರದಿಂದ ಹಿಂದೆ ಸರಿಯದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಮಾಜಿ ಶಾಸಕ ವೀರಣ್ಣ ಚರಂತಿಮಠ ಮಾತನಾಡಿ, ಪ್ರಧಾನಮಂತ್ರಿ ನರೇಂದ್ರ ಮೋದಿ ರಾಷ್ಟ್ರದ ಬಡ, ಕೆಳವರ್ಗ ಹಾಗೂ ಮಧ್ಯಮ ವರ್ಗದ ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಅತ್ಯಂತ ಕಾಳಜಿ ಹಾಗೂ ದೂರದೃಷ್ಟಿಯಿಂದ ಯೋಜನೆ ಜಾರಿಗೊಳಿದ್ದಾರೆ. ಆದರೆ ಕರ್ನಾಟಕ ಸರ್ಕಾರ ಮೆಡಿಕಲ್ ಮಾಫಿಯಾಗೆ ಬಲಿಯಾಗಿ ಜನೌಷಧಿ ಕೇಂದ್ರಗಳನ್ನು ಮುಚ್ಚುವ ತಿರ್ಮಾನ ತೆಗೆದುಕೋಂಡಿರುವುದು ದುರದುಷ್ಟಕರ ಸಂಗತಿ. ಕೂಡಲೆ ನಿರ್ಧಾರದ ಆದೇಶವನ್ನು ಹಿಂಪಡೆಯಬೇಕು ಇಲ್ಲವಾದಲ್ಲಿ ಉಗ್ರ ಹೋರಾಟಕ್ಕೆ ಅಣಿಯಾಗಬೇಕಾಗುತ್ತದೆ ಎಂದರು.

ಪ್ರತಿಭಟನೆಯಲ್ಲಿ ಡಾ.ಎಂ.ಎಸ್.ದಡ್ಡೇನವರ, ಗುಂಡುರಾವ ಶಿಂಧೆ, ಬಸಲಿಂಗಪ್ಪ ನಾವಲಗಿ, ರಾಜು ನಾಯ್ಕರ, ಬಸವರಾಜ ಯಂಕಂಚಿ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಉಪಾಧ್ಯಕ್ಷೆ ಶೋಭಾ ರಾವ್, ಶಶಿಕಲಾ ಮಜ್ಜಗಿ, ಬಸವರಾಜ ಹುನಗುಂದ, ಪ್ರಭು ಹಡಗಲಿ, ಬಸವರಾಜ ಅವರಾದಿ, ಯಲ್ಲಪ್ಪ ನಾರಾಯಣಿ, ಶ್ರೀಧರ ನಾಗರಬೆಟ್ಟ, ಸುರೇಶ ಮಜ್ಜಗಿ, ಚೆನ್ನಯ್ಯ ಹಿರೇಮಠ, ಮಲ್ಲೇಶ ವಿಜಾಪುರ, ಕಲ್ಲಪ್ಪ ಭಗವತಿ, ವಿಜು ಅಂಗಡಿ, ಸತ್ಯನಾರಾಯಣ ಹೇಮಾದ್ರಿ, ವೀರಣ್ಣ ಹಳೇಗೌಡರ, ಮಹೇಶ ಅಂಗಡಿ, ವಿಜಯ ಕಣ್ಣೂರ, ಗುರು ಚಳ್ಳಮರದ, ಸುಭಾಸ ರಾಮೋಡಗಿ, ಮುತ್ತು ಸೀಮಿಕೇರಿ, ಮಂಜು ಗೌಡರ, ಉಮೇಶ ಲಮಾಣಿ, ಕಿರಣ ಬಾಗೇವಾಡಿ, ಆನಂದ ಕೊಟಗಿ, ಚಂದ್ರು ಸರೂರ, ಪರಮೇಶ್ವರ ಮದುರ, ಸಾಗರ ಬಂಡಿ, ವೀರಣ್ಣ ಶಿರಗನ್ನವರ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ವಸತಿ ನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : 2025–26ನೇ ಸಾಲಿಗಾಗಿ ಕೊಪ್ಪಳ ಮತ್ತು ಕುಷ್ಟಗಿ ತಾಲ್ಲೂಕಿನಲ್ಲಿರುವ ಅಲ್ಪಸಂಖ್ಯಾತರ ಮೆಟ್ರಿಕ್‌ನಂತರದ ಬಾಲಕ/ಬಾಲಕಿಯರ ವಸತಿ ನಿಲಯಗಳ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಪಿಯುಸಿ, ಐಟಿಐ, ಡಿಪ್ಲೊಮಾ ಹಾಗೂ ಪ್ರಥಮ ವರ್ಷದ ಪದವಿ ಮಟ್ಟದ ವಿದ್ಯಾರ್ಥಿಗಳು ಸ್ಟೇಟ್ ಹಾಸ್ಟೆಲ್ ಪೋರ್ಟಲ್ https://shp.karnataka.gov.in/ ನಲ್ಲಿ ಜೂನ್ 28 ರೊಳಗೆ ಆನ್‌ಲೈನ್ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಿದ ನಂತರ ಅರ್ಜಿ ಪ್ರತಿಯೊಂದಿಗೆ ಅಗತ್ಯ ದಾಖಲೆಗಳನ್ನು ಸಂಬಂಧಿಸಿದ ವಸತಿ ನಿಲಯಗಳಿಗೆ ಸಲ್ಲಿಸಬೇಕು. ಕುಷ್ಟಗಿಯ ಶಾಖಾಪುರ ರಸ್ತೆಯ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ, ಕೊಪ್ಪಳದ ಆರೋಗ್ಯ ಬಡಾವಣೆ, ಹೇಮರೆಡ್ಡಿ ಮಲ್ಲಮ್ಮನಗುಡಿ ಹತ್ತಿರ ಕೊಪ್ಪಳ–01 ಹಾಗೂ ಕೊಪ್ಪಳ–02, ವಿಜಯನಗರ ಬಡಾವಣೆ, ಬಿಲಾಲ ನಗರದಲ್ಲಿರುವ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ ಹಾಗೂ ಗಣೇಶ ತೆಗ್ಗು, ಕೊಪ್ಪಳ–1, ಕೊಪ್ಪಳ–2 ಮತ್ತು ಕೊಪ್ಪಳ–3 ನಲ್ಲಿರುವ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯಗಳಿಗೆ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಳು ಸರ್ಕಾರಿ ಅಥವಾ ಅಂಗೀಕೃತ ಕಾಲೇಜುಗಳಲ್ಲಿ ಮೆಟ್ರಿಕ್ ನಂತರದ ತರಗತಿಗಳಲ್ಲಿ ಅಭ್ಯಾಸಮಾಡುತ್ತಿರಬೇಕು. ವಸತಿ ನಿಲಯಗಳಲ್ಲಿ ಶೇ.75 ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಮತ್ತು ಶೇ.25 ಇತರೆ ವರ್ಗದವರಿಗೆ ಮೀಸಲಿಡಲಾಗಿದೆ. ಅಲ್ಪಸಂಖ್ಯಾತರ ವಿದ್ಯಾರ್ಥಿಗಳು, ಹಿಂದುಳಿದ ವರ್ಗಗಳಾದ 2ಎ, 2ಬಿ, 3ಎ, 3ಬಿ ವಿದ್ಯಾರ್ಥಿಗಳು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನವು 2.50 ಲಕ್ಷ ರೂ.ಗಳಿಗಿಂತ ಮೀರಿರಬಾರದು. ಪ್ರವರ್ಗ–1 ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನವು 01 ಲಕ್ಷ ರೂ. ಮೀರಿರಬಾರದು.

ಅರ್ಜಿಯೊಂದಿಗೆ ತಹಶೀಲ್ದಾರ ನೀಡಿದ ಜಾತಿ ಮತ್ತು ಆದಾಯ ದೃಢೀಕರಣ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ, ಆಧಾರ ಕಾರ್ಡ್, ಹಿಂದಿನ ತರಗತಿಯ ಅಂಕಪಟ್ಟಿ ಹಾಗೂ ವಿದ್ಯಾರ್ಥಿಯ ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ 4 ಭಾವಚಿತ್ರಗಳು ಹಾಗೂ ಕಾಲೇಜು ಪ್ರವೇಶದ ಶುಲ್ಕ ಪ್ರತಿಯೊಂದಿಗೆ ನಿಗದಿ ಪಡಿಸಿದ ದಿನಾಂಕದೊಳಗಾಗಿ ಅರ್ಜಿಯನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನ ಅಜಾದ್ ಭವನ, ಕೊಪ್ಪಳ, ಜಿಲ್ಲಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಮತ್ತು ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಕುಷ್ಟಗಿ ಹಾಗೂ ಹತ್ತಿರದ ವಸತಿ ನಿಲಯಗಳಿಗೆ ಸಂಪರ್ಕಿಸಬಹುದು ಎಂದು ಕೊಪ್ಪಳ ತಾಲ್ಲೂಕು ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮುಂಗಾರು ಬೆಳೆಗಳ ಬಿತ್ತನೆ ಬೀಜದ ಸಹಾಯಧನದಡಿ:

## ಜೂನ್ 2 ರಿಂದ ರೈತರಿಗೆ ಬಿತ್ತನೆ ಬೀಜ ಮಾರಾಟ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.30 –ಕಲಬುರಗಿ ಜಿಲ್ಲೆಯ ಕೃಷಿ ಇಲಾಖೆಯ ಎಲ್ಲಾ ರೈತ ಸಂಪರ್ಕ ಕೇಂದ್ರಗಳಲ್ಲಿ ಮುಂಗಾರು ಬೆಳೆಗಳಾದ ತೊಗರಿ, ಹೆಸರು, ಉದ್ದು, ಸೋಯಾ ಅವರೆ, ಸೂರ್ಯಕಾಂತಿ, ಮೆಕ್ಕೆಜೋಳ ಮತ್ತು ಭತ್ತದ ಮುಂತಾದ ಬೆಳೆಗಳ ಬಿತ್ತನೆ ಬೀಜಗಳನ್ನು ದಾಸ್ತಾನಿಕರಿಸಲಾಗಿದೆ.

2025ರ ಜೂನ್ 2 ರಿಂದ ರಿಯಾಯಿತಿ ಯೋಜನೆಯಡಿ ರೈತರಿಗೆ ಬಿತ್ತನೆ ಬೀಜಗಳನ್ನು ಮಾರಾಟ ಮಾಡಲಾಗುತ್ತಿದ್ದು, ಕಲಬುರಗಿ ಜಿಲ್ಲೆಯ ರೈತರು ತಮ್ಮ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರಗಳಿಗೆ ಭೇಟಿ ನೀಡಿ ರಿಯಾಯಿತಿ ದರದಲ್ಲಿ ಪೂರೈಸಲಾಗುತ್ತಿರುವ ಬಿತ್ತನೆ ಬೀಜಗಳನ್ನು ಖರೀದಿಸಿ ಬಿತ್ತನೆಗೆ ಬಳಸಬೇಕೆಂದು ಕಲಬುರಗಿ ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

## ಗೋ ಹತ್ಯೆ ನಿಷೇಧ ಕಾಯ್ದೆಯನ್ನು ಸಮರ್ಪಕವಾಗಿ ಜಾರಿಗೆ ತನ್ನಿ ವಿಶ್ವ ಹಿಂದೂ ಪರಿಷತ್



ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಮೇ. 30. ತಾಲೂಕಿನ ಮುಧೋಳ ಆರಕ್ಷಕ ನಿರೀಕ್ಷಿಕರು ರವರಿಗೆ ಗೋ ಹತ್ಯೆ ನಿಷೇದ ಕಾಯ್ದೆಯನ್ನು ಸಮರ್ಪಕವಾಗಿ ಜಾರಿಗೆ ತನ್ನಿ ವಿಶ್ವ ಹಿಂದೂ ಪರಿಷತ್ ಮನವಿ

ವಿಧಾನಸಭೆಯಲ್ಲಿ ಅನುಮೋದನೆಗೊಂಡು, ರಾಜ್ಯಾದ್ಯಂತ ಜಾರಿಗೆ ಬಂದಿರುವ 'ಕರ್ನಾಟಕ ಗೋ ಸಂರಕ್ಷಣಾ (ತಿದ್ದುಪಡಿ) ಕಾಯ್ದೆ, 2020* ಪ್ರಕಾರ, (ಗೋವುಗಳು, ಎತ್ತುಗಳು, ಕರುಗಳು)ಗಳ ಹತ್ಯೆ, ಅಕ್ರಮ ಸಾಗಣೆ ಮತ್ತು ವ್ಯಾಪಾರವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಈ ಕಾಯ್ದೆಯ ಉದ್ದೇಶವು ಭಾರತೀಯ ಸಂಸ್ಕೃತಿಯ ಪಾಲನೆಯ ಜೊತೆಗೆ ಜಾನುವಾರುಗಳ ರಕ್ಷಣೆ ಮತ್ತು ಕೃಷಿ ಆಧಾರಿತ ಸಮಾಜದ ಪೋಷಣೆಯಾಗಿದೆ.

ಆದರೆ, ಇತ್ತೀಚಿನ ದಿನಗಳಲ್ಲಿ ನಮ್ಮ ಉಪವಿಭಾಗ ವ್ಯಾಪ್ತಿಯಲ್ಲಿ ಈ ಕಾಯ್ದೆ ನಿರ್ಲಕ್ಷಿತವಾಗುತ್ತಿರುವ ಅನೇಕ ಘಟನೆಗಳು ಕಂಡುಬಂದಿವೆ. ಹಲವು ಕಡೆಗಳಲ್ಲಿ ಅಕ್ರಮವಾಗಿ ಗೋ ಸಾಗಣೆ, ಕಳ್ಳಸಾಗಾಟ, ಹಾಗೂ ಹತ್ಯೆ ನಡೆಯುತ್ತಿರುವ ಬಗ್ಗೆ ಗ್ರಾಮಸ್ಥರಿಂದ ಹಾಗೂ ಸ್ಥಳೀಯ ಸಂಘಟನೆಗಳಿಂದ ಮಾಹಿತಿ ದೊರೆತಿದೆ. ಇದು ಕಾನೂನು ಉಲ್ಲಂಘನೆಯಷ್ಟೇ ಅಲ್ಲದೇ, ಸಾರ್ವಜನಿಕ ಭಾವನೆಗಳಿಗೆ ಧಕ್ಕೆಯಾಗುತ್ತದೆ.

ಈ ಹಿನ್ನೆಲೆಯಲ್ಲಿ ನಾವು ಈ ಕೆಳಗಿನ ಬೇಡಿಕೆಗಳನ್ನು ಪ್ರಸ್ತಾಪಿಸುತ್ತೇವೆ:

ವ್ಯಾಪ್ತಿಯಲ್ಲಿರುವ ಎಲ್ಲಾ ಗ್ರಾಮಗಳಲ್ಲಿ ಈ ಕಾಯ್ದೆಯ ಕಠಿಣ ಅನುಷ್ಠಾನಕ್ಕೆ ಸೂಚನೆ ನೀಡಬೇಕು. ಅಕ್ರಮ ಗೋ ಸಾಗಣೆ ನಡೆಯುವ ಪ್ರಮುಖ ಮಾರ್ಗಗಳ ಮೇಲೆ ತಪಾಸಣಾ ಚೌಕಿಗಳು ಸ್ಥಾಪಿಸಬೇಕು.

ಸಾರ್ವಜನಿಕರಿಗೆ ತಮ್ಮ ಪರಿಸರದಲ್ಲಿನ ಶಂಕಾಸ್ಪದ ಚಟುವಟಿಕೆಗಳನ್ನು ವರದಿ ಮಾಡಲು ಸೌಲಭ್ಯ ಒದಗಿಸಬೇಕು (ಊಜಟರಿ–ಖಟಿಜ, ಘುಚಿಣಂರಿರಿ ನಂಬರ ಇತ್ಯಾದಿ). ಶಾಲಾ, ಕಾಲೇಜುಗಳಲ್ಲಿ ಹಾಗೂ ಗ್ರಾಮಸಭೆಗಳಲ್ಲಿ ಈ ನಿಷೇಧದ ಕುರಿತ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಮುಧೋಳ ಗ್ರಾಮದಲ್ಲಿ ಅನೇಕ ಬಡಾವಣೆಗಳಲ್ಲಿ ರಾಜ್ಯಾರೋಷವಾಗಿ ಗೋಮಾಂಸವನ್ನು ಮಾರಾಟ ಮಾಡುತ್ತಿದ್ದಾರೆ ಅವರ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಈ ಕಾಯ್ದೆಯ ಸಮರ್ಪಕ ಜಾರಿಯ ಮೂಲಕ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ನೈತಿಕ ಮೌಲ್ಯಗಳು ಉಳಿಯುವಂತಾಗುತ್ತದೆ. ಆದ್ದರಿಂದ, ಈ ವಿಷಯದಲ್ಲಿ ದಯವಿಟ್ಟು ತುರ್ತು ಕ್ರಮ ಕೈಗೊಂಡು, ಸಾರ್ವಜನಿಕ ವಿಶ್ವಾಸಕ್ಕೆ ತಕ್ಕ ರೀತಿಯಲ್ಲಿ ಕಾರ್ಯನಿರ್ವಹಿಸಬೇಕೆಂದು ಮನವಿ ಮಾಡಿದರು ಈ ಸಂಧರ್ಭದಲ್ಲಿ ಅನಿಲ ರೆಡ್ಡಿ ಸಂಗೇಪಲ್ಲಿ ವಿಹಿಂಪ ತಾಲೂಕು ಅಧ್ಯಕ್ಷ, ಪಂಡರಿ ಹಾಗೂ ಇನ್ನಿತರರು ಇದ್ದರು.

## ಕೇಂದ್ರದ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.30.–ಕೇಂದ್ರದ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವರಾದ ವಿ. ಸೋಮಣ್ಣ ಅವರು ಬೀದರದಿಂದ ವಿಶೇಷ ರೈಲಿನ ಮೂಲಕ ಜೂನ್ 1 ರಂದು ಭಾನುವಾರ ಬೆಳಿಗ್ಗೆ 11 ಗಂಟೆಗೆ ಕಲಬುರಗಿಗೆ ಆಗಮಿಸಿ, ನಂತರ ಕಲಬುರಗಿ ರೈಲ್ವೆ ನಿಲ್ದಾಣವನ್ನು ವೀಕ್ಷಣೆ ಮಾಡಿ, ಸಾರ್ವಜನಿಕರ ಕುಂದುಕೊರತೆಗಳನ್ನು ಪರಿಹರಿಸುವರು. ನಂತರ ಅಂದು ಮಧ್ಯಾಹ್ನ 2.30 ಗಂಟೆಗೆ ಕಲಬುರಗಿಯಲ್ಲಿ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಅಂದು ಸಂಜೆ 4.30 ಗಂಟೆಗೆ ಕಲಬುರಗಿಯಿಂದ ವಿಶೇಷ ರೈಲಿನ ಮೂಲಕ ಸೋಲ್ಲಾಪುರಕ್ಕೆ ಪ್ರಯಾಣ ಬೆಳೆಸುವರು.

# ರೈತರಿಗೆ ಅನ್ಯಾಯವಾದರೆ ಸಹಿಸುವುದಿಲ್ಲ: ಶಾಸಕ ಪ್ರಭು ಚವ್ಹಾಣ

ಮಲ್ಲಮ್ಮ ನುಡಿ ವಾರ್ತೆ

ಔರಾಧ:ಮೇ.30:ನಾಡಿಗೆ ಅನ್ನ ನೀಡಿ ಪೋಷಿಸುವ ರೈತರ ಏಳಿಗೆಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಸಾಕಷ್ಟು ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಎಲ್ಲ ಯೋಜನೆಗಳ ಲಾಭ ಅರ್ಹ ರೈತರಿಗೆ ತಲುಪಿಸಬೇಕು. ರೈತರಿಗೆ ಅನ್ಯಾಯವಾದರೆ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲವೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು.

ಔರಾದ(ಬಿ) ತಾಲ್ಲೂಕಿನ ಚಿಂತಾಕಿ, ಸಂತಪೂರ ಹಾಗೂ ಔರಾದ(ಬಿ) ನಲ್ಲಿ ಮೇ.30ರಂದು 2025–26ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮುಂಗಾರು ಹಂಗಾಮು ಆರಂಭವಾಗಲಿದ್ದು, ರೈತರು ಸಕಾಲಕ್ಕೆ ಬಿತ್ತನೆ ಮಾಡಲು ಅನುಕೂಲವಾಗಲಿ ಎಂಬ ಕಾರಣಕ್ಕೆ ಮುಂಚಿತವಾಗಿಯೇ ಬಿತ್ತನೆ ಬೀಜ ವಿತರಣೆಗೆ ಚಾಲನೆ ನೀಡಲಾಗಿದೆ. ಬಿತ್ತನೆ ವೇಳೆಗೆ ರೈತರಿಗೆ ಬಿತ್ತನೆ ಬೀಜ ಮತ್ತು ರಸಗೊಬ್ಬರ ತಲುಪಬೇಕು. ಈ ದಿಶೆಯಲ್ಲಿ ಅಧಿಕಾರಿಗಳು ಹೆಚ್ಚಿನ ಶ್ರಮ ವಹಿಸಬೇಕು. ರೈತರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಕೆಲಸ ಮಾಡಬೇಕೆಂದು ಹೇಳಿದರು.

ನಮ್ಮ ಭಾಗದಲ್ಲಿ ಹೆಚ್ಚು ಮಳೆಯಾದರೂ, ಕಡಿಮೆ ಮಳೆಯಾದರೂ ಬೆಳೆ ನಷ್ಟವಾಗುತ್ತದೆ. ಇಳುವರಿ ಹೆಚ್ಚಾಗಬೇಕು ಮತ್ತು ನಷ್ಟ ಕಡಿಮೆಯಾಗುವ ರೀತಿಯಲ್ಲಿ ಇಲಾಖೆ ಅಧಿಕಾರಿಗಳು ರೈತರಿಗೆ ಕಾಲಕಾಲಕ್ಕೆ ಸೂಕ್ತ ಸಲಹೆಗಳನ್ನು ನೀಡಬೇಕು. ಕೃಷಿ ಸಿಂಚಾಯಿ, ಕಿಸಾನ್ ಸಮ್ಮಾನ್ ಯೋಜನೆ, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ, ಮಣ್ಣಿನ ಪರೀಕ್ಷೆ, ಪಾರಂಪರಿಕ ಕೃಷಿ, ಕೃಷಿ ಭಾಗ್ಯದಂತಹ ಇಲಾಖೆಯ ಎಲ್ಲ ಯೋಜನೆಗಳ ಬಗ್ಗೆ ಹೆಚ್ಚಿನ ಪ್ರಚಾರ ನೀಡಬೇಕು. ನಿಜವಾದ ರೈತರಿಗೆ ಯೋಜನೆಗಳ ಲಾಭ ಸಿಗುವಂತೆ ಮಾಡಬೇಕು ಎಂದರು. ಬೆಳೆ ವಿಮೆ ಕಂಪನಿಗಳು ಕೆಲ ದಿನಗಳಿಂದ ರೈತರಿಗೆ ವಂಚಿಸುತ್ತಿರುವ ಬಗ್ಗೆ ಸಾಕಷ್ಟು ದೂರುಗಳು ಬರುತ್ತಿವೆ.



ದಾಬಕಾ, ಸಂತಪೂರ ಹಾಗೂ ಮತ್ತಿತರೆ ಕಡೆಗಳಲ್ಲಿ ನಿಜವಾದ ರೈತರನ್ನು ಬಿಟ್ಟು ರೈತರಲ್ಲದವರಿಗೆ ಬೆಳೆ ವಿಮೆ ಸೌಲಭ್ಯ ಸಿಕ್ಕಿರುವ ಬಗ್ಗೆ ರೈತರು ತಿಳಿಸಿದ್ದಾರೆ. ಈ ಬಗ್ಗೆ ಇಲಾಖೆಯ ಎಲ್ಲ ಹಂತದ ಅಧಿಕಾರಿಗಳು ಮತ್ತು ಸಂಬಂಧಿಸಿದ ಸಚಿವರ ಗಮನಕ್ಕೂ ತಂದಿದ್ದೇನೆ. ಸಹಾಯಕ ನಿರ್ದೇಶಕರು ಈ ಬಗ್ಗೆ ಹೆಚ್ಚಿನ ನಿಗಾ ವಹಿಸಬೇಕು. ಕ್ಷೇತ್ರದ ಯಾವೊಬ್ಬ ರೈತನಿಗೂ ಅನ್ಯಾಯವಾಗದಂತೆ ನೋಡಿಕೊಳ್ಳಬೇಕೆಂದು ಹೇಳಿದರು.

ಸಣ್ಣ–ಪುಟ್ಟ ಗ್ರಾಮದವರಿಗೆ ಒಂದು ದಿನದಲ್ಲಿ ಬಿತ್ತನೆ ಬೀಜ ವಿತರಿಸಬಹುದು. ದೊಡ್ಡ ಗ್ರಾಮಗಳಿಗೆ ಕನಿಷ್ಠ ಎರಡು ದಿನಗಳ ಅವಕಾಶ ನೀಡಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಗಡಿ ಭಾಗದ ಕೆಲ ರೈತರು ಬಿತ್ತನೆಗಾಗಿ ಪಡೆದ ಬೀಜಗಳನ್ನು ಪಕ್ಕದ ಮಹಾರಾಷ್ಟ್ರ ಮತ್ತು ತೆಲಂಗಾಣದಲ್ಲಿರುವ ಸಂಬಂಧಿಕರು ಮತ್ತು ಪರಿಚಯಸ್ಥರಿಗೆ ಮಾರಾಟ ಮಾಡುತ್ತಿರುವ ಬಗ್ಗೆ ಗಮನಕ್ಕೆ ಬಂದಿದೆ. ಸರ್ಕಾರವು ನಮ್ಮ ರೈತರಿಗೆ ಅನುಕೂಲವಾಗಲಿ ಎಂಬ ಕಾರಣಕ್ಕೆ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜಗಳನ್ನು ನೀಡುತ್ತಿದೆ. ಇದನ್ನು ಸ್ವಂತಕ್ಕಾಗಿ ಬಳಸಬೇಕೆ ವಿನಃ ಯಾವುದೇ ಕಾರಣಕ್ಕೂ ಅನ್ಯರಿಗೆ ಮಾರುವಂತಿಲ್ಲ. ಇಂಥವುಗಳಿಗೆ ರೈತರು ಅವಕಾಶ ಮಾಡಿಕೊಡಬಾರದು ಎಂದು ಕೋರಿದರು.

ಸಹಾಯಕ ಕೃಷಿ ನಿರ್ದೇಶಕರಾದ ಧೂಳಪ್ಪ ಪ್ರಾಸ್ತಾವಿಕ ಮಾತನಾಡಿ, ಬಿತ್ತನೆ ಬೀಜಗಳ ದರ, ಸೋಯಾ ಅವರೆ, ಉದ್ದು, ಹೆಸರು ಬೆಳೆಗಳ ಬಿತ್ತನೆಯ ವೈಜ್ಞಾನಿಕ ವಿಧಾನಗಳು, ರಸಗೊಬ್ಬರ ಬಳಕೆ, ಬಿತ್ತನೆ ವೇಳೆ ರೈತರು ಅನುಸರಿಸಬೇಕಾದ ಕ್ರಮಗಳ ಬಗ್ಗೆ ರೈತರಿಗೆ ಮನವರಿಕೆ ಮಾಡಿಕೊಟ್ಟರು.

ಇದೇ ವೇಳೆ ಗ್ರಾಮ ಪಂಚಾಯಿತಿವಾರು ಬಿತ್ತನೆ ಬೀಜ ವಿತರಣೆ ದಿನಾಂಕಗಳನ್ನು ಲಾಟರಿ ಮೂಲಕ ನಿಗದಿಪಡಿಸಲಾಯಿತು. ಈ ಸಂದರ್ಭದಲ್ಲಿ ಮುಖಂಡರಾದ ಮಾರುತಿ ಚವ್ಹಾಣ,

ಧೊಂಡಿಬಾ ನರೋಟೆ, ರಾಮಶೆಟ್ಟಿ ಪನ್ನಾಳೆ, ಶಿವರಾಜ ಅಲ್ಮಾಜೆ, ದಯಾನಂದ ಘೂಳೆ, ಧೂಳಪ್ಪ, ರವೀಂದ್ರ ರೆಡ್ಡಿ, ರಾಮ ರೆಡ್ಡಿ, ಗೋವಿಂದ ರೆಡ್ಡಿ, ವಿಠಲ ರೆಡ್ಡಿ, ರೈತ ಸಂಘದ ಶ್ರೀಮಂತ ಬಿರಾದಾರ, ಪ್ರಕಾಶ ಬಾವಗೆ ಸೇರಿದಂತೆ ರೈತ ಮುಖಂಡರು, ಕೃಷಿ ವಿಜ್ಞಾನಿಗಳು, ಇಲಾಖೆಯ ಅಧಿಕಾರಿಗಳು, ಮುಖಂಡರು ಹಾಗೂ ರೈತರು ಉಪಸ್ಥಿತರಿದ್ದರು.

# ಪೌರ ಕಾರ್ಮಿಕರು ದೇವರ ಸಮಾನ: ಭಗವಂತ ಖೂಬಾ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಮೇ.30:ಕರ್ನಾಟಕ ರಾಜ್ಯ ಒಳಗೊಂಡಂತೆ ಬೀದರ ಜಿಲ್ಲೆಯಲ್ಲಿ ಕಳೆದ 4 ದಿನಗಳಿಂದ ನಡೆಯುತ್ತಿರುವ ಪೌರಕಾರ್ಮಿಕರ ಅನಿರ್ಧಿಷ್ಟಾವಧಿ ಮುಷ್ಕರದಲ್ಲಿ ಮಾಜಿ ಕೇಂದ್ರ ಸಚಿವ ಭಗವಂತ ಖೂಬಾರವರು ಪಕ್ಷದ ಜಿಲ್ಲಾಧ್ಯಕ್ಷರು ಮತ್ತು ಪಕ್ಷದ ಮುಖಂಡರೊಂದಿಗೆ ಪಾಲ್ಗೊಂಡು, ಪೌರಕಾರ್ಮಿಕರು ದೇವರ ಸಮಾನ ಇವರಿಗೆ ಅನ್ಯಾಯ ಮಾಡುತ್ತಿರುವ ಕಾಂಗ್ರೇಸ್ ಸರ್ಕಾರ–ಕ್ಕೆ ಶಾಪ ತಗುಲುತ್ತದೆ, ಇವರ ಬೇಡಿಕೆ ನ್ಯಾಯಯುತವಾಗಿದೆ, ನಿಮ್ಮೊಂದಿಗೆ ನಾನು ನಮ್ಮ ಪಕ್ಷ ಎಂದಿಗೂ ನಿಲ್ಲುತ್ತದೆ ಎಂದು ತಿಳಿಸಿ ಬೆಂಬಲ ಸೂಚಿಸಿದರು. ರಾಜ್ಯದ ಪೌರಾಡಳಿತ ಸಚಿವರಾಗಿರುವ ರಹೀಮ್ ಖಾನ್ ಒಬ್ಬ ಅನಫಡ್ ಮಂತ್ರಿಯಾಗಿದ್ದಾರೆ, ಪೌರಕಾರ್ಮಿಕರ ಪ್ರತಿಭಟನೆಯಲ್ಲಿ ಬಂದು ಮುಖ್ಯಮಂತ್ರಿಗೆ ಮಾತಾಡಿಸಿರುವ ಹಾಗೆ ನಾಟಕ ಮಾಡುತ್ತಾರೆ, ತನ್ನ ಇಲಾಖೆಯ ಸಮಸ್ಯೆ ತಾನು ಬಗೆ ಹರಿಸದೆ, ಮುಖ್ಯಮಂತ್ರಿಯ ಮೇಲೆ ಹಾಕುವ ಅನಫಡ್ ಕೆಲಸ ಮಾಡುತ್ತಿದ್ದಾರೆ ಎಂದು ರಹೀಮ್ ಖಾನ್ ವಿರುದ್ಧ ಆಕ್ರೋಷ ಹೊರಹಾಕಿದರು.

ಕಳೆದ ಬಾರಿ ಬಸವರಾಜ ಬೊಮ್ಮಾಯಿಯವರ ಸರ್ಕಾರದಲ್ಲಿ ರಾಜ್ಯದ 11435 ಪೌರಕಾರ್ಮಿಕರ ಹುದ್ದೆಯನ್ನು ಖಾಯಂಗೊಳಿಸಲು ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿತ್ತು, ಇದರಲ್ಲಿ 302 ನಗರಸಭೇ ಸಿಬ್ಬಂದಿಗಳಿಗೆ, 5533 ಪುರಸಭೆ ಮತ್ತು ಪಟ್ಟಣ ಪಂಚಾಯತಿ ಸಿಬ್ಬಂದಿಗಳಿಗೆ, 5600 ಮಹಾನಗರ ಪಾಲಿಕೆ ಸಿಬ್ಬಂದಿಗಳಿಗೆ ಖಾಯಂ ನೌಕರಿ ಆಗುತ್ತಿತ್ತು, ಅದರಂತೆ ಮೊದಲ ಹಂತವಾಗಿ





ರಾಜ್ಯದ 64 ಜನರ ಮೇಲ್ವಿಚಾರಕರ ಹುದ್ದೆಗಳು ಖಾಯಂ ಆಗಿದ್ದವು, ಉಳಿದ ಪೌರಕಾರ್ಮಿಕರ ಹುದ್ದೆಗಳ ಪ್ರಕ್ರೀಯೆ ಪ್ರಾರಂಭವಾಗುವಷ್ಟರಲ್ಲಿ ನಮ್ಮ ಸರ್ಕಾರ ಇರಲಿಲ್ಲಾ, ಆ ಪ್ರಕ್ರೀಯೆ ಮುಂದುವರೆಸದೆ ಪೌರ ಕಾರ್ಮಿಕರ ಜೀವ ಹಿಂಡುತ್ತಿದೆ ಇಂದಿನ ಸಿದ್ದರಾಮಯ್ಯ ಸರ್ಕಾರ ಎಂದು ವಾಗ್ದಾಳಿ ನಡೆಸಿದರು. ಶಾಸಕರುಗಳಿಗೆ, ಮಂತ್ರಿಗಳಿಗೆ ಪ್ರತಿ ತಿಂಗಳು 30 ಆದರೆ ಸಂಬಳ ಬರುತ್ತದೆ, ಆದರೆ ಪೌರ ಕಾರ್ಮಿಕರಿಗೆ ಈ ಸರ್ಕಾರ 3 ತಿಂಗಳಾದರೂ ಸಂಬಳ ಕೊಟ್ಟಿಲ್ಲಾ, ನಾಚಿಕೆಯಾಗಬೇಕು ರಹೀಮ್ ಖಾನ್ ಅವರಿಗೆ ಎಂದರು. ಬಡವರು ರ್‍ಯಾಷನ್ ಅಕ್ಕಿ ತಿಂದು ಜೀವನ ನಡೆಸುತ್ತಾರೆ, ನಿಮ್ಮಂತೆ ಭಾಸ್ಮತಿ ಅಕ್ಕಿ ಊಟ ಮಾಡುವುದಿಲ್ಲಾ, ಸಂಬಳ ಕೊಡದಿದ್ದರೆ ಅವರ ಜೀವನ ಹೇಗೆ ನಡೆಯುತ್ತದೆ ಎಂದು ಸರ್ಕಾರಕ್ಕೆ ಪ್ರಶ್ನಿಸಿದರು. ಈ ಸರ್ಕಾರ ಪೋಲೀಸರನ್ನು ಮುಂದೆ ಇಟ್ಟುಕೊಂಡು ದಬ್ಬಾಳಿಕೆ ನಡೆಸುತ್ತಿದೆ, ಸರ್ಕಾರದ ವಿರುದ್ಧ ನಿಂತವರ ಮೇಲೆ ಸುಳ್ಳು ಕೇಸ್ ಹಾಕುತ್ತಿದೆ, ನಿಮಗೂ ಹಿಗೆ ಯಾರಾದರೂ ಹೆದರಿಸಿದರೆ, ತಾವ್ಯಾರು ಹೆದರಬೇಡಿ ಎಂದು ಧೈರ್ಯ ತುಂಬಿದರು. ಉಸ್ತುವಾರಿ ಮಂತ್ರಿ ಇಲ್ಲಿಯವರೆಗೆ ಈ ಪ್ರತಿಭಟನೆಗೆ ಬರದೆ ತನ್ನ ಅಹಂಕಾರ ಮೇರಿತಿದ್ದಾರೆ ಎಂದರು. ಇವಾಗ ನಾನು ಬಂದಿದ್ದೇನೆ, ಮುಂದೆ ಅವರು ಬಂದು, ಸುಳ್ಳು ಪೋಳ್ಳು ಭರವಸೆಗಳು ಕೊಟ್ಟು ಹೊಗುತ್ತಾರೆ, ಅವರನ್ನು ಯಾರೂ ನಂಬಬೇಡಿ, ಅವರು ಯಾವಾಗಲು ಜನರ ದಾರಿ ತಪ್ಪಿಸುವ ಕೆಲಸ ಮಾಡುತ್ತಾರೆ ಎಂದು ಖಂಡ್ರೆ ವಿರುದ್ಧ ಆಕ್ರೋಷ ಹೊರಹಾಕಿದರು.

ಜಿಲ್ಲಾಧ್ಯಕ್ಷ ಸೊಮನಾಥ ಪಾಟೀಲ್ ಮಾತನಾಡಿ, ನಮ್ಮ ಪ್ರಧಾನಿಗಳು ಪೌರಕಾರ್ಮಿಕರ ಕಾಲು ತೊಳೆದು ಪೂಜಿಸುತ್ತಾರೆ, ಆದರೆ ಈ ಕಾಂಗ್ರೇಸ್ ಸರ್ಕಾರ ಅವರ ಹೊಟ್ಟೆ ಮೇಲೆ ಹೊಡೆಯುವ ಕೆಲಸ ಮಾಡುತ್ತಿದೆ, ಈ ಸರ್ಕಾರ ನಿಮ್ಮ ಬೇಡಿಕೆಗಳು ಈಡೆರಿಸಲೇಬೇಕು, ಮೊಂಡುತನ ತೊರಿದಲ್ಲಿ ಮುಂದಿನ ದಿನಗಳಲ್ಲಿ ನಮ್ಮ ಸರ್ಕಾರ ಅಧಿಕಾರಕ್ಕೆ ಬರುತ್ತದೆ, ನಾವು ನಿಮ್ಮ ಬೇಡಿಕೆಗಳು ಈಡೇರಿಸುತ್ತೇವೆ ಎಂದರು.

ಈ ಪ್ರತಿಭಟನೆಯಲ್ಲಿ ಬಿಜೆಪಿ ನಗರ ಅಧ್ಯಕ್ಷ ಶಶಿಧರ ಹೊಸಳ್ಳಿ, ಮುಖಂಡರಾದ ಬಾಬುವಾಲಿ, ಸಂತೋಷ ತುಕ್ಕಾರೆಡ್ಡಿ, ಪೀರಪ್ಪ ಯರನಳ್ಳಿ, ಬಾಬುರಾವ ಕಾರಬಾರಿ, ಪೌರ ಕಾರ್ಮಿಕರ ಸಂಘದ ಅಧ್ಯಕ್ಷ ಸೈಯದ ಖಾನ್, ಪ್ರಮುಖರಾದ ಸಿದ್ದು ಪಾಟೀಲ್, ಮಾರುತಿ, ಪವನ ಮುಂತಾದವರು ಉಪಸ್ಥಿತರಿದ್ದರು.



ಭಾಲ್ಕಿ: ತಾಲೂಕಿನ ಕಲವಾಡಿ ಗ್ರಾಮದ ಮಹಾತ್ಮಾಗಾಂಧಿ ಪ್ರೌಢಶಾಲೆಯಲ್ಲಿ ಶುಕ್ರವಾರ ಶಾಲಾ ಪ್ರಾರಂಭೋತ್ಸವ ನಿಮಿತ್ಯ ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕ ಮತ್ತು ಹೂಗುಚ್ಛ ನೀಡಿ ಸ್ವಾಗತಿಸಲಾಯಿತು. ಮುಖ್ಯಶಿಕ್ಷಕ ಕಿರಣಕುಮಾರ ಭಾಟಸಾಂಗವಿ, ಶಿವಕುಮಾರ ವಾಡಿಕರ, ಓಂಝೆಡ್ ಬಿರಾದಾರ, ಪ್ರದೀಪ ಜೋಳದಾಪಕೆ, ಪ್ರವೀಣಕುಮಾರ ಸಿಂಧೆ ಇದ್ದರು.

# ಮಹಿಳೆಯ ಹತ್ಯೆ: ಬೀದರ್‌ನಲ್ಲಿ ಆರೋಪಿಗಳಿಬ್ಬರ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಬೀದರ್,ಮೇ.30: ಬೆಂಗಳೂರಿನ ಕಾಟನ್‌ಪೇಟೆಯಲ್ಲಿ ನಡೆದ ಲತಾ ಎಂಬ ಮಹಿಳೆಯ ಕೊಲೆ ಪ್ರಕರಣವನ್ನು ಪೊಲೀಸರು ಭೇದಿಸಿದ್ದು, ಮೃತರ ಸಂಬಂಧಿ ಪುರಂದರ್ (42) ಮತ್ತು ಆತನ ಸ್ನೇಹಿತ ಶಿವಪ್ಪ (36) ಎಂಬ ಇಬ್ಬರನ್ನು ನಗರದಲ್ಲಿ ಬಂಧಿಸಿದ್ದಾರೆ. ಕ್ರಿಕೆಟ್ ಬೆಟ್ಟಿಂಗ್ ಮತ್ತು ಜೂಜಿನಿಂದ ಸಾಲಗಾರರಾಗಿದ್ದ ಆರೋಪಿಗಳು, ಸಾಲ ತೀರಿಸಲು ಲತಾ ಅವರನ್ನು ಕೊಂದು ಹಣ ಮತ್ತು ಚಿನ್ನಾಭರಣ ದೋಚಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಜಿಲ್ಲೆಯವರಾದ ಪುರಂದರ ಮತ್ತು ಶಿವಪ್ಪ, ಕೆಮಿಕಲ್ ಫಾರ್ಮಸ್ಯೂಟಿಕಲ್ ಕಾರ್ಖಾನೆಯಲ್ಲಿ ಎಲೆಕ್ಟ್ರಿಷಿಯನ್



ಆಗಿ ಕೆಲಸ ಮಾಡುತ್ತಿದ್ದರು. ಇಬ್ಬರೂ ಮದ್ಯವ್ಯಸನಿಗಳಾಗಿದ್ದು, ಕ್ರಿಕೆಟ್ ಬೆಟ್ಟಿಂಗ್, ಜೂಜು, ಮತ್ತು ರೈಸ್ ಪುಲ್ಲಿಂಗ್‌ನಲ್ಲಿ ದೊಡ್ಡ ಮೊತ್ತದ ಹಣ ಕಳೆದುಕೊಂಡು ಸಾಲದ ಬಾದೆಯಲ್ಲಿದ್ದರು. ಈ ಸಾಲ ತೀರಿಸಲು



ಲತಾ ಅವರ ಮನೆಯಿಂದ ಹಣ ಮತ್ತು ಚಿನ್ನಾಭರಣ ದೋಚುವ ಸಂಚು ರೂಪಿಸಿದ್ದರು. ಪುರಂದರ, ಲತಾ ಅವರ ಹತ್ತಿರದ ಸಂಬಂಧಿಯಾಗಿದ್ದರಿಂದ, ಆತನಿಗೆ ಅವರ ಕುಟುಂಬದ ಸಂಪೂರ್ಣ ಮಾಹಿತಿ ತಿಳಿದಿತ್ತು.

ಲತಾ ಅವರ ಪತಿ, ಪುತ್ರಿ ಮತ್ತು ಪುತ್ರನ ಓಡಾಟದ ವೇಳಾಪಟ್ಟಿಯನ್ನು ತಿಳಿದಿದ್ದ ಪುರಂದರ, ಲತಾ ಒಬ್ಬರೇ ಮನೆಯಲ್ಲಿರುವ ಸಮಯವನ್ನು ಗುರಿಯಾಗಿಸಿದ. ಮೇ 26ರಂದು ಆರೋಪಿಗಳು ನಗರದಿಂದ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ನಲ್ಲಿ ಬೆಂಗಳೂರಿಗೆ ಬಂದು, ಕಾಟನ್‌ಪೇಟೆಯ ಲತಾ ಅವರ ಮನೆಗೆ ತೆರಳಿದ್ದರು. ಮಾವಿನಹಣ್ಣು ಕೊಡುವ ನೆಪದಲ್ಲಿ ಮನೆಗೆ ಪ್ರವೇಶಿಸಿದ ಆರೋಪಿಗಳನ್ನು ಲತಾ ಸತ್ಕರಿಸಿದ್ದರು. ಆದರೆ, ಆರೋಪಿಗಳು ಏಕಾಏಕಿ ಲತಾ ಅವರ ಕತ್ತು ಹಿಂಡಿ, ಉಸಿರುಗಟ್ಟಿಸಿ ಕೊಲೆ ಮಾಡಿ, 100 ಗ್ರಾಂ ಚಿನ್ನಾಭರಣ ಮತ್ತು 1.50 ಲಕ್ಷ ರೂ.ಗಳ ನಗದನ್ನು ದೋಚಿ ಪರಾರಿಯಾಗಿದ್ದರು. ಕೊಲೆಯ ನಂತರ ಆರೋಪಿಗಳು ಕಾಟನ್‌ಪೇಟೆಯಿಂದ ಕೆಂಪೇಗೌಡ ಬಸ್ ನಿಲ್ದಾಣಕ್ಕೆ ನಡೆದುಕೊಂಡು ಹೋಗಿ, ನಗರಕ್ಕೆ ಮರಳಿದ್ದರು. ಪೊಲೀಸರು 150ಕ್ಕೂ ಹೆಚ್ಚು ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿ, ಆರೋಪಿಗಳ ಗುರುತನ್ನು ಪತ್ತೆಹಚ್ಚಿದರು. ಲತಾ ಅವರ ಮನೆಯಲ್ಲಿ ತಿಂಡಿಗಾಗಿ ಬಳಸಿದ ತಟ್ಟೆ–ಲೋಟಗಳ ಪುರಾವೆಯಿಂದ ಪರಿಚಿತರೇ ಕೃತ್ಯ ಎಸಗಿರುವ ಶಂಕೆ ಬಲವಾಯಿತು. ಲತಾ ಅವರ ಪುತ್ರಿಯ ಮದುವೆಗಾಗಿ ಮನೆಯಲ್ಲಿ ಇಟ್ಟಿದ್ದ ಹಣ ಮತ್ತು ಚಿನ್ನಾಭರಣದ ಮಾಹಿತಿ ಪುರಂದರನಿಗೆ ತಿಳಿದಿತ್ತು. ಪೊಲೀಸರು ಆರೋಪಿಗಳನ್ನು ವಶಕ್ಕೆ ತೆಗೆದುಕೊಂಡು ವಿಚಾರಣೆ ಮುಂದುವರೆಸಿದ್ದಾರೆ.

# ಇಂದು ಖಾನಾಪುರ ಜಂಕ್ಷನ್‌ನಲ್ಲಿ ಸರಕು ಶೆಡ್ ಮತ್ತು ರಸ್ತೆ ಕೆಳ ಸೇತುವೆ ನಿರ್ಮಾಣ ಶಂಕುಸ್ಥಾಪನೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬೀದರ : ಮೇ.30: ಇಂದು (ಮೇ.31) ಶನಿವಾರ ಸಂಜೆ 5 ಗಂಟೆಗೆ ಖಾನಾಪೂರ ಜಂಕ್ಷನ್ ರೈಲು ನಿಲ್ದಾಣದಲ್ಲಿ ಖಾನಾಪುರ ಜಂಕ್ಷನ್‌ನಲ್ಲಿ ಸರಕು ಶೆಡ್ ಮತ್ತು ರಸ್ತೆ ಕೆಳ ಸೇತುವೆ ನಿರ್ಮಾಣ (ಭಾಲ್ಕಿ ಮತ್ತು ಕಲ್ಲುಗುರ ರೈಲು ನಿಲ್ದಾಣಗಳ ನಡುವಿನ ಲೆವೆಲ್ ಕ್ರಾಸಿಂಗ್ ಸಂಖ್ಯೆ 71ರ ಬದಲಿಗೆ) ಶಂಕುಸ್ಥಾಪನೆಯನ್ನು ರೈಲ್ವೆ ಹಾಗೂ ಜಲ ಶಕ್ತಿ ರಾಜ್ಯ ಸಚಿವರಾದ ವಿ.ಸೋಮಣ್ಣ ನೆರವೇರಿಸಲಿದ್ದಾರೆ.

ಕಾರ್ಯಕ್ರಮದ ಘನ ಉಪಸ್ಥಿತಿಯನ್ನು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ, ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್, ಬೀದರ ಲೋಕಸಭಾ ಸದಸ್ಯರಾದ ಸಾಗರ ಈಶ್ವರ ಖಂಡ್ರೆ, ಬೀದರ (ದಕ್ಷಿಣ) ಶಾಸಕರಾದ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ವಿಧಾನ ಪರಿಷತ್ ಸದಸ್ಯರಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ್ ಜಿ.ನಮೋಶಿ, ಭೀಮರಾವ್ ಪಾಟೀಲ್, ಡಾ.ಎಂ.ಜಿ.ಮೂಳೆ ಅವರುಗಳು ಭಾಗವಹಿಸಲಿದ್ದಾರೆ.

# ಧಾರಾಕಾರ ಮಳೆ ಜಿಲ್ಲೆಯ ನದಿ ಪ್ರದೇಶಗಳಲ್ಲಿ ಪ್ರವಾಹ ಭೀತಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಮೇ.30: ಜಿಲ್ಲೆಯಲ್ಲಿ ನಿರಂತರ ಮಳೆ ಬೀಳುತ್ತಿದ್ದು, ನೆರೆಯ ಮಹಾರಾಷ್ಟ್ರದಲ್ಲಿಯೂ ಸಹ ಭಾರೀ ಮಳೆ ಸುರಿಯುತ್ತಿರುವುದರಿಂದ ಜಿಲ್ಲೆಯ ಭೀಮಾ ನದಿ ಸೇರಿದಂತೆ ವಿವಿಧ ನದಿ ಪ್ರದೇಶಗಳಲ್ಲಿ ಪ್ರವಾಹ ಭೀತಿ ಉಂಟಾಗಿದೆ. ಭಾರೀ ಮಳೆಯಿಂದಾಗಿ ಜಿಲ್ಲೆಯ ಕಮಲಾಪುರ ತಾಲೂಕಿನ ಹಿಪ್ಪರಗಾ ಗ್ರಾಮದ ಸೇತುವೆ ಮುಳುಗಡೆಯಾಗಿದ್ದು, ಕುದಮೂಡ ಹಾಗೂ ಕಲಕುಟಗಾ ಗ್ರಾಮಗಳ ಸಂಪರ್ಕ ಕಡಿತಗೊಂಡಿದೆ. ಮಳೆಯಿಂದಾಗಿ ಸೇತುವೆ ಮುಳುಗಡೆ ಹಿನ್ನೆಲೆಯಲ್ಲಿ ವಾಹನ ಸವಾರರ ಪರದಾಟ ನಡೆದಿದ್ದು, ಗ್ರಾಮೀಣ ಭಾಗದಲ್ಲಿ ಸುರಿದ ಮಳೆಯಿಂದಾಗಿ ಜನಜೀವನ ಸಂಪೂರ್ಣ ಅಸ್ತವ್ಯಸ್ತವಾಗಿದೆ.

ನೆರೆಯ ಮೇಲ್ಭಾಗದ ಮಹಾರಾಷ್ಟ್ರದಲ್ಲಿ ಭಾರೀ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲೆಯ ಭೀಮಾ ನದಿಗೆ ಭಾರೀ ಪ್ರಮಾಣದಲ್ಲಿ ನೀರು ಬಿಡುಗಡೆ ಮಾಡಲಾಗಿದೆ. ಭೀಮೆಗೆ ನೀರು ಬಿಡುಗಡೆ ಮಾಡಲಾಗಿದೆ. ತುಂಬಿ ಹರಿಯುತ್ತಿರುವ ಹಿನ್ನೆಲೆ, ಜಿಲ್ಲೆಯ ಅಫಜಲಪುರ ತಾ;ಲ್ಲೂಕಿನ ಘತ್ತರಗಾ ಸೇತುವೆ ಮುಳುಗಡೆ ಹಂತಕ್ಕೆ ಬಂದಿದ್ದು, ಅಲ್ಲಿನ ನಿವಾಸಿಗಳು ಪ್ರವಾಹದ ಭೀತಿಯನ್ನು ಎದುರಿಸುತ್ತಿದ್ದಾರೆ. ಇನ್ನೂ ಮಹಾರಾಷ್ಟ್ರದಿಂದ ಅಪಾರ ಪ್ರಮಾಣದಲ್ಲಿ ಭೀಮೆಗೆ ನೀರು ಹರಿಬಿಟ್ಟ ಪರಿಣಾಮವಾಗಿ ಭೀಮಾ ನದಿಯ ತಟದ ಜನರಲ್ಲಿ ಪ್ರವಾಹದ ಆತಂಕ ಮನೆಮಾಡಿದೆ.

# ಕೃಷಿಯಲ್ಲಿ ಸಂಯುಕ್ತ ಗೊಬ್ಬರ ಬಳಸಲು ರೈತರಿಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಮೇ.30:ಈ ವರ್ಷ ಅವಧಿಗೆ ಮುನ್ನವೇ ಮಳೆ ಪ್ರಾರಂಭವಾಗಿದ್ದು, ಮುಂಗಾರು ಹಂಗಾಮು ಉತ್ತಮವಾಗಿ ಪ್ರಾರಂಭವಾಗಿದೆ.

ಇಲ್ಲಿಯವರೆಗೆ ವಾಡಿಕೆ ಮಳೆ ಪ್ರಮಾಣ 75 ಮಿ.ಮೀ. ಆಗಿದ್ದು, ವಾಸ್ತವಿಕ ಮಳೆ 166 ಮಿ.ಮೀ. ಆಗಿದೆ. ಇದು ಸಾಮಾನ್ಯಕ್ಕಿಂತ ಶೇ.120 ಹೆಚ್ಚಾಗಿದೆ. ಮುಂಗಾರು ಹಂಗಾಮು ಆಶಾದಾಯಕವಾಗಿರುವ ನಿರೀಕ್ಷೆ ಇದೆ. ರೈತರು ಈಗಾಗಲೇ ಭೂಮಿ ಹದಗೊಳಿಸುವ ಕಾರ್ಯ ಹಾಗೂ ಕೃಷಿ ಬೆಳೆಗಳ

ಬಿತ್ತನೆ ಚಟುವಟಿಕೆಗಳಲ್ಲಿ ತೆ–ೂಡಗಿದ್ದಾರೆ. ಕೃಷಿ ಇಲಾಖೆಯು ಈ ವರ್ಷ 3.19 ಲಕ್ಷ ಹೆಕ್ಟೇರ್ ಬಿತ್ತನೆ ಗುರಿ ಹೊಂದಿದ್ದು, ಜಿಲ್ಲೆಯ ಮುಖ್ಯ ಬೆಳೆಗಳಾಗಿ ಮೆಕ್ಕೆಜೋಳ, ಭತ್ತ, ಸಜ್ಜೆ, ತೊಗರಿ, ಹೆಸರು, ಸೂರ್ಯಕಾಂತಿ, ಶೇಂಗಾ, ಹತ್ತಿ ಮತ್ತು ಸಿರಿಧಾನ್ಯ

ಬೆಳೆಗಳಿಗೆ ಅಗತ್ಯವಿರುವ ಬಿತ್ತನೆ ಬೀಜವನ್ನು ರೈತ ಸಂಪರ್ಕ ಕೇಂದ್ರಗಳ ಮೂಲಕ ಈಗಾಗಲೇ ವಿತರಿಸಲಾಗುತ್ತಿದೆ. ಇದುವರೆಗೆ 9,703 ಕ್ವಿಂಟಲ್ ಬೀಜವನ್ನು ದಾಸ್ತಾನಿಕರಿಸಲಾಗಿದ್ದು, ರೈತರು ಬೀಜ ಪಡೆಯುವಾಗ ಕಡ್ಡಾಯವಾಗಿ ತಮ್ಮ ಫ್ರೂಟ್ ಐಡಿ ಸಂಖ್ಯೆ ನೀಡಬೇಕಾಗಿರುತ್ತದೆ. ಬೀಜ ವಿತರಣೆಯು ಕ್ಯೂಆರ್ ಕೋಡ್ ಸ್ಕಾ ??ನ್ ಮೂಲಕ ನಡೆಯುತ್ತಿದ್ದು, ಪ್ರತಿ ಲಾಟ್‌ನ ಬೀಜ

ಮಾದರಿಯನ್ನು ಪ್ರಯೋಗಾಲಯಕ್ಕೆ ಕಳುಹಿಸಿ ಗುಣಮಟ್ಟ ಖಾತರಿಪಡಿಸಿ ವಿತರಿಸಲಾಗುತ್ತಿದೆ.

ಖಾಸಗಿ ಅಂಗಡಿಗಳಲ್ಲಿ ಬೀಜ ಖರೀದಿ ಮಾಡಿದ ರೈತರು ಕಡ್ಡಾಯವಾಗಿ ಖರೀದಿ ಬಿಲ್ ಪಡೆಯಬೇಕು.

# ಅಪಘಾತ:ಓರ್ವನ ಸಾವು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.30:ದ್ವಿಚಕ್ರವಾಹನಕ್ಕೆ ವಾಹನವೊಂದು ಡಿಕ್ಕಿ ಹೊಡೆದ ಪರಿಣಾಮ ಓರ್ವ ವ್ಯಕ್ತಿ ಸ್ಥಳದಲ್ಲಿಯೇ ಮೃತಪಟ್ಟ ದಾರುಣ ಘಟನೆ ನಗರದ ಉಚ್ಚ ನ್ಯಾಯಾಲಯದ ವರ್ತುಲ ರಸ್ತೆಯಲ್ಲಿ ಶುಕ್ರವಾರ ಬೆಳಿಗ್ಗೆ ಸಂಭವಿಸಿದೆ. ಮೃತನಿಗೆ ಉದನೂರು ಗ್ರಾಮದ ಬಲಭೀಮ್ ತಂದೆ ಮಾರುತರಾಯ್ ಬಿರಾದಾರ್ (62) ಎಂದು ಗುರುತಿಸಲಾಗಿದೆ.

ಯುವಕನೊಬ್ಬನ ಜೊತೆಯಲ್ಲಿ ದ್ವಿಚಕ್ರವಾಹನದಲ್ಲಿ ಕುಳಿತು



ಬಲಭೀಮ್ ಬಿರಾದಾರ್ ಅವರು

ಹೋಗುವಾಗ ಅಪಘಾತ ಸಂಭವಿಸಿದೆ. ಘಟನೆಯಲ್ಲಿ ದ್ವಿಚಕ್ರವಾಹನ ಸವಾರನು ಗಾಯಗೊಂಡಿದ್ದು, ಆತನಿಗೆ ಆಸ್ಪತ್ರೆಗೆ ಸೇರಿಸಲಾಗಿದೆ. ಅಪಘಾತದ ರಭಸಕ್ಕೆ ಬಲಭೀಮ್ ಬಿರಾದಾರ್ ಅವರು ಸ್ಥಳದಲ್ಲಿಯೇ ಸಾವಿಗೀಡಾಗಿದ್ದಾರೆ.

ಈ ಕುರಿತು ಸಂಚಾರಿ ಪೋಲಿಸ್ ಠಾಣೆ–1ರಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ. ಬಲಭೀಮ್ ಬಿರಾದಾರ್ ಅವರಿಗೆ ಪತ್ನಿ, ಒಬ್ಬ ಪುತ್ರ ಇದ್ದು, ಮೃತರ ಅಂತ್ಯಸಂಸ್ಕಾರವು ಸಂಜೆ ಉದನೂರು ಗ್ರಾಮದ ಸ್ವಂತ ಹೊಲದಲ್ಲಿ ನೆರವೇರಿತು.

# ಟೆಂಡರ್ ಮಾಫಿಯಾ: ಮೂವರ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಮೇ.30: ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಹಾಗೂ ಸರ್ಕಾರದ 25 ಕೋಟಿ ರೂ.ಗಳ ಟೆಂಡರ್‌ಗಳನ್ನು ಪಡೆಯಲು ಉಪಗುತ್ತಿಗೆದಾರನಿಂದ 21.21 ಕೋಟಿ ರೂ.ಗಳನ್ನು ಪಡೆದು ವಂಚಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಸೆನ್ ಠಾಣೆಯ ಪೋಲಿಸರು ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ.

ಪ್ರಕರಣದ ಪ್ರಮುಖ ಆರೋಪಿ ಕಲಬುರ್ಗಿಯ ಲಕ್ಷ್ಮೀಕಾಂತ್ ಕಟ್ಟಿಮನಿ, ಆತನ ಗೆಳೆಯ ರಾಯಚೂರಿನ ಕಿರಣ್ ಹಾಗೂ ಬೆಂಗಳೂರಿನ ಶ್ರೀಧರ್ ಅವರನ್ನು ಬಂಧಿಸಿ, ನ್ಯಾಯಾಂಗ ವಶಕ್ಕೆ ಒಪ್ಪಿಸಲಾಗಿದೆ.

ಬಂಧಿತ ಆರೋಪಿಗಳು ಟೆಂಡರ್ ಕೆಲಸದ ಆದೇಶ ಕೊಡಿಸುವುದಾಗಿ ಹೇಳಿ ಹಣ ಪಡೆದಿದ್ದನ್ನು ಒಪ್ಪಿಕೊಂಡಿದ್ದು, ವರ್ಕ್ ಆರ್ಡರ್ ಸಿಗಲಿಲ್ಲ. ಉಪ ಗುತ್ತಿಗೆದಾರನ ಹಣವನ್ನು ಹಣಕಾಸಿನ ಅಡಚಣೆಯಿಂದಾಗಿ ಮರಳಿಸಲು ಆಗಿಲ್ಲ ಎಂದು ವಿಚಾರಣೆಯ ವೇಳೆ ಒಪ್ಪಿದ್ದಾರೆ ಎಂದು ತಿಳಿದುಬಂದಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.